ಲಿಖಿತ ಮೂಲಕ ಉತ್ತರಿಸುವ
ಪ್ರಶ್ನೆಗಳ ಪಟ್ಟಿ

**ಪಟ್ಟಿ – ೧೩**

ಒಟ್ಟು ಪ್ರಶ್ನೆಗಳು – ೬೨

# ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತಮೂರನೆಯ ಅಧಿವೇಶನ
(ಮುಂದುವರೆದ ಉಪವೇಶನ)

ಮಂಗಳವಾರ, ದಿನಾಂಕ : ೧೬ನೇ ಮಾರ್ಚ್, ೨೦೨೧

---

## ಸಮೂಹ – II

೧. ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು.

೨. ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು.

೩. ನಗರಾಭಿವೃದ್ಧಿ ಸಚಿವರು.

೪. ಪೌರಾಡಳಿತ ಹಾಗೂ ಸಕ್ಕರೆ ಸಚಿವರು.

೫. ಗಣಿ ಮತ್ತು ಭೂ ವಿಜ್ಞಾನ ಸಚಿವರು.

೬. ಸಹಕಾರ ಸಚಿವರು.

೭. ಸಣ್ಣ ಕೈಗಾರಿಕೆ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಸಚಿವರು.

---

## ಕಲ್ಯಾಣ ಕರ್ನಾಟಕ ಪ್ರದೇಶದ ವಾರ್ತಾ ಇಲಾಖೆಯ ಬಗ್ಗೆ

**ಶ್ರೀ ಅರವಿಂದ ಕುಮಾರ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೮೦ (೧೩೭೫) ಮಾನ್ಯ ಸಣ್ಣ ಕೈಗಾರಿಕೆ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಲ್ಯಾಣ ಕರ್ನಾಟಕ ಪ್ರದೇಶ ವ್ಯಾಪ್ತಿಯಲ್ಲಿ ಮಂಜೂರಾದ ವಾರ್ತಾ ಅಧಿಕಾರಿಗಳ ಸಂಖ್ಯೆ ಎಷ್ಟು; ಭರ್ತಿ ಮಾಡಲಾದ ಹುದ್ದೆಗಳೆಷ್ಟು; ಖಾಲಿ ಇರುವ ಹುದ್ದೆಗಳೆಷ್ಟು;

(ಆ) ಖಾಲಿ ಇದ್ದಲ್ಲಿ, ಆ ಹುದ್ದೆಗಳನ್ನು ಭರ್ತಿ ಮಾಡುವುದು ಯಾವಾಗ;

(ಇ) ವಾರ್ತಾ ಸಹಾಯಕರಿಗೆ ಹೆಚ್ಚುವರಿ ಮುಂಬಡ್ತಿ ಮಾಡುವ ಯೋಚನೆ ಸರ್ಕಾರದ ಮುಂದಿದೆಯೇ; ಇದ್ದರೆ, ಮಾಡುವುದು ಯಾವಾಗ; ಇಲ್ಲದಿದ್ದರೆ, ಕಾರಣಗಳೇನು ;

(ಈ) ವಾರ್ತಾ ಸಹಾಯಕರ ಹುದ್ದೆಗಳ ನೇಮಕಾತಿ ಮಾಡುವ ಯೋಚನೆ ಸರ್ಕಾರದ ಮುಂದಿದೆಯೇ; ಇದ್ದಲ್ಲಿ, ಯಾವಾಗ ಮಾಡಲಾಗುವುದು; ಇಲ್ಲದಿದ್ದಲ್ಲಿ, ಕಾರಣ ತಿಳಿಸುವುದು ?

## ಬೀದರ್ ಜಿಲ್ಲೆ ಪಡಿತರರಿಗೆ ಆಹಾರ ಧಾನ್ಯ ವಿತರಣೆ ಮಾಡುತ್ತಿರುವ ಬಗ್ಗೆ

**ಶ್ರೀ ಅರವಿಂದ ಕುಮಾರ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೮೧ (೧೩೭೬) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ೨೦೧೮-೧೯ ರಿಂದ ೨೦೨೦-೨೧ ರವರೆಗೆ ಬೀದರ್ ಜಿಲ್ಲೆಯಲ್ಲಿ ರದ್ದುಗೊಳಿಸಲಾದ ಬಿ.ಪಿ.ಎಲ್. ಕಾರ್ಡ್‌ಗಳ ಸಂಖ್ಯೆ ಎಷ್ಟು; ಮತ್ತು ಹೊಸದಾಗಿ ವಿತರಿಸಲಾದ ಬಿ.ಪಿ.ಎಲ್. ಕಾರ್ಡ್‌ಗಳ ಸಂಖ್ಯೆ ಎಷ್ಟು;

(ಆ) ಅಕ್ರಮ ದಾಖಲೆ ಮತ್ತು ಸುಳ್ಳು ಮಾಹಿತಿ ನೀಡಿ ಬಿ.ಪಿ.ಎಲ್. ಪಡಿತರ ಚೀಟಿ ಪಡೆದುಕೊಂಡವರ ಪತ್ತೆ ಹಚ್ಚುವ ಕಾರ್ಯವನ್ನು ಸರ್ಕಾರ ಮಾಡಿದೆಯೇ; ಮಾಡಿದ್ದಲ್ಲಿ, ಕಾನೂನು ಬಾಹಿರ ಬಿ.ಪಿ.ಎಲ್. ಚೀಟಿ ಪಡೆದವರ ಸಂಖ್ಯೆ ಎಷ್ಟು?

## ಬೀದರ್ ಜಿಲ್ಲೆಯಲ್ಲಿ ಸಣ್ಣ ಕೈಗಾರಿಕೆ ಅಭಿವೃದ್ಧಿ ಪಡಿಸುವ ಬಗ್ಗೆ

**ಶ್ರೀ ಅರವಿಂದ ಕುಮಾರ್ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೦೮೨ (೧೩೭೪) ಮಾನ್ಯ ಸಣ್ಣ ಕೈಗಾರಿಕೆ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬೀದರ್ ಜಿಲ್ಲೆಯಲ್ಲಿ ಸಣ್ಣ ಕೈಗಾರಿಕೆ ಅಭಿವೃದ್ಧಿಗಾಗಿ ಮತ್ತು ಅದರ ಆಕರ್ಷಣೆಗಾಗಿ ಯಾವುದಾದರೂ ಯೋಜನೆಗಳನ್ನು ಸರ್ಕಾರ ರೂಪಿಸಿದೆಯೇ; ಇದ್ದಲ್ಲಿ, ಅವು ಯಾವುವು; ಇಲ್ಲವಾದಲ್ಲಿ, ಅದಕ್ಕೆ ಪೂರಕವಾದ ಕಾರಣಗಳೇನು;

(ಆ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ ಸ್ಥಾಪಿಸಲಾಗಿರುವ ಸಣ್ಣ ಕೈಗಾರಿಕೆಗಳ ಸಂಖ್ಯೆ ಎಷ್ಟು; ರಾಜ್ಯ ಸರ್ಕಾರವು ಸಣ್ಣ ಕೈಗಾರಿಕೆಗಳಿಗೆ ಎಷ್ಟು ನಿವೇಶನಗಳನ್ನು ಹಂಚಿಕೆ ಮಾಡಲಾಗಿದೆ ? (ವಿವರ ನೀಡುವುದು)

## ಬೀದರ್ ಜಿಲ್ಲೆಯಲ್ಲಿ ಸಣ್ಣ ಕೈಗಾರಿಕೆ ಅಭಿವೃದ್ಧಿಪಡಿಸುವ ಬಗ್ಗೆ

**ಶ್ರೀ ಅರವಿಂದ ಕುಮಾರ ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೦೮೩ (೧೩೯೧) ಮಾನ್ಯ ಸಣ್ಣ ಕೈಗಾರಿಕೆ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಜಿಲ್ಲೆಯಲ್ಲಿ ಸಣ್ಣ ಕೈಗಾರಿಕೆ ಅಭಿವೃದ್ಧಿಗಾಗಿ ಮತ್ತು ಅದರ ಆಕರ್ಷಣೆಗಾಗಿ ಯಾವುದಾದರೂ ಯೋಜನೆಗಳನ್ನು ಸರ್ಕಾರ ರೂಪಿಸಿದೆಯೇ; ರೂಪಿಸಿದ್ದಲ್ಲಿ, ಅವು ಯಾವುವು; ಇಲ್ಲವಾದಲ್ಲಿ, ಅದಕ್ಕೆ ಪೂರಕವಾದ ಕಾರಣಗಳೇನು ;

(ಆ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ ಎಷ್ಟು ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸಲಾಗಿದೆ; ಸರ್ಕಾರವು ಸಣ್ಣ ಕೈಗಾರಿಕೆಗಳಿಗೆ ಎಷ್ಟು ನಿವೇಶನಗಳನ್ನು ಹಂಚಿಕೆ ಮಾಡಲಾಗಿದೆ ? (ವಿವರ ನೀಡುವುದು)

## ರೈತರಿಂದ ನೇರವಾಗಿ ಭತ್ತ, ರಾಗಿ ಖರೀದಿ ಮಾಡಲಾಗುತ್ತಿರುವ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೮೪ (೧೩೯೬) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಜಿಲ್ಲೆ ವ್ಯಾಪ್ತಿಯಲ್ಲಿ ರೈತರಿಂದ ನೇರವಾಗಿ ಭತ್ತ, ರಾಗಿ ಖರೀದಿ ಮಾಡಲು ಎಷ್ಟು ಖರೀದಿ ಕೇಂದ್ರಗಳನ್ನು ತೆರೆಯಲಾಗಿದೆ; (ತಾಲ್ಲೂಕುವಾರು ವಿವರ ನೀಡುವುದು)

(ಆ) ನಾಗಮಂಗಲ ತಾಲ್ಲೂಕು ಎ.ಪಿ.ಎಂ.ಸಿ. ಆವರಣದಲ್ಲಿ ರಾಗಿ ಖರೀದಿ ಕೇಂದ್ರದಲ್ಲಿ ಅಧಿಕಾರಿಗಳು ರೈತರಿಗೆ ಸರಿಯಾಗಿ

ಸ್ಪಂದಿಸುತ್ತಿಲ್ಲ ಹಾಗೂ ರಾಗಿ ಖರೀದಿ ಕೇಂದ್ರಕ್ಕೆ ಬರುವ ರೈತರಿಗೆ ಮೂಲಭೂತ ಸೌಲಭ್ಯ (ಕುಡಿಯುವ ನೀರು ಮತ್ತು ಶೌಚಾಲಯ) ಕಲ್ಪಿಸಿಲ್ಲವೆಂದು ಪ್ರತಿಭಟನೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಅವ್ಯವಸ್ಥೆ ಸರಿಪಡಿಸಲು ಯಾವ ಕ್ರಮ ಕೈಗೊಳ್ಳಲಾಗಿದೆ; (ವಿವರ ನೀಡುವುದು)

(ಇ) ನಾಗಮಂಗಲ ರಾಗಿ ಖರೀದಿ ಕೇಂದ್ರದಲ್ಲಿ ಎ.ಪಿ.ಎಂ.ಸಿ.ಯ ತೂಕದ ಯಂತ್ರ ಕೆಟ್ಟಿದ್ದು ಇದರಿಂದ ಖರೀದಿ ಕೇಂದ್ರಕ್ಕೆ ಬಂದ ರೈತರಿಗೆ ಆಗಿರುವ ಅನಾನುಕೂಲ ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಸಂಬಂಧ ಯಾವ ಕ್ರಮ ಕೈಗೊಳ್ಳಲಾಗಿದೆ; (ವಿವರ ನೀಡುವುದು)

(ಈ) ನಾಗಮಂಗಲ ತಾಲ್ಲೂಕು ಎ.ಪಿ.ಎಂ.ಸಿ. ಆವರಣದಲ್ಲಿ ಹೊಸದಾಗಿ ನಿರ್ಮಿಸಿರುವ ಶೌಚಾಲಯ, ತೂಕದ ಯಂತ್ರ, ಕುಡಿಯುವ ನೀರಿನ ವ್ಯವಸ್ಥೆ ಈ ಸಂಬಂಧ ಕಳಪೆ ಕಾಮಗಾರಿ ಮಾಡಿರುವ ಗುತ್ತಿಗೆದಾರರು ಮತ್ತು ಅಧಿಕಾರಿ ವರ್ಗದವರ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ ? (ವಿವರ ನೀಡುವುದು)

## ರಾಜ್ಯ ಗಣಿ ಮತ್ತು ಭೂ ವಿಜ್ಞಾನ ಇಲಾಖಾ ವ್ಯಾಪ್ತಿಗೆ ಸಂದಾಯವಾಗುತ್ತಿರುವ ವಿವಿಧ ರೀತಿಯ ರಾಜಧನಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೦೮೫ (೧೩೯೭) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯ ಗಣಿ ಮತ್ತು ಭೂ ವಿಜ್ಞಾನ ಇಲಾಖಾ ವ್ಯಾಪ್ತಿಗೆ ಸಂದಾಯವಾಗುತ್ತಿರುವ ವಿವಿಧ ರೀತಿಯ ರಾಜಧನಗಳ ವಾರ್ಷಿಕ

ಮೊತ್ತ ಎಷ್ಟು; (ಜಿಲ್ಲಾವಾರು ಮತ್ತು ತಾಲ್ಲೂಕುವಾರು ಮಾಹಿತಿ ನೀಡುವುದು) ರಾಜಧನ ನಿಗದಿಪಡಿಸುವಲ್ಲಿ ಸರ್ಕಾರದ ನೀತಿ ನಿಯಮಗಳು ಮತ್ತು ಮಾನದಂಡಗಳು ಯಾವುವು;

(ಆ) ಕಳೆದ ಮೂರು ವರ್ಷಗಳಲ್ಲಿ ರಾಜಧನ ಪರಿಷ್ಕರಣೆ ಮಾಡಲಾಗಿದೆಯೇ; ಹಾಗಿದ್ದಲ್ಲಿ, ಪರಿಷ್ಕರಣೆಯಿಂದ ಸರ್ಕಾರದ ಬೊಕ್ಕಸಕ್ಕೆ ಬರುತ್ತಿರುವ ಹೆಚ್ಚುವರಿ ಮೊತ್ತದ ಪ್ರಮಾಣ ಎಷ್ಟು; (ಜಿಲ್ಲಾವಾರು ಮತ್ತು ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಕಳೆದ ಎರಡು ವರ್ಷಗಳ ಅವಧಿಯಲ್ಲಿ ಉಪ ಖನಿಜ ಗಣಿಗಾರಿಕೆ ಮತ್ತು ಪರವಾನಿಗೆ ಇಲ್ಲದ ಸಾಗಾಣಿಕೆ ಯಂತ್ರ ಅಕ್ರಮ ವ್ಯವಹಾರಗಳಲ್ಲಿ ತೊಡಗಿಸಿಕೊಂಡಿರುವ ಎಷ್ಟು ಪ್ರಕರಣಗಳನ್ನು ಗುರುತಿಸಿ ಕಾನೂನು ಕ್ರಮಗಳನ್ನು ಕೈಗೊಳ್ಳಲಾಗಿದೆ; (ಜಿಲ್ಲಾವಾರು ಮತ್ತು ತಾಲ್ಲೂಕುವಾರು ಮಾಹಿತಿ ನೀಡುವುದು)

(ಈ) ಕರ್ನಾಟಕ ಉಪ ಖನಿಜ ರಿಯಾಯಿತಿ ಕಾಯ್ದೆ (ತಿದ್ದುಪಡಿ), ೨೦೨೦ರಲ್ಲಿ ನಮೂದಿತ ಪ್ರಮುಖ ಪರಿಣಾಮಕಾರಿ ಅಂಶಗಳು ಯಾವುವು ?

## ಮಂಡ್ಯ ಜಿಲ್ಲೆಯಲ್ಲಿ ಕುಟುಂಬಗಳಿಗೆ ಬಿ.ಪಿ.ಎಲ್. ಮತ್ತು ಎ.ಪಿ.ಎಲ್. ಪಡಿತರ ಚೀಟಿಗಳನ್ನು ವಿತರಿಸಿರುವ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೦೮೬ (೧೩೭೮) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮಂಡ್ಯ ಜಿಲ್ಲೆಯಲ್ಲಿ ಎಷ್ಟು ಕುಟುಂಬಗಳಿಗೆ ಬಿ.ಪಿ.ಎಲ್. ಮತ್ತು ಎ.ಪಿ.ಎಲ್. ಪಡಿತರ ಚೀಟಿಗಳನ್ನು ನೀಡಲಾಗಿದೆ;

(ಆ) ಬಿ.ಪಿ.ಎಲ್. ಮತ್ತು ಎ.ಪಿ.ಎಲ್. ಪಡಿತರ ಚೀಟಿಗಳಿಂದ ಸೌಲಭ್ಯ ಪಡೆಯುತ್ತಿರುವ ಸದಸ್ಯರ ಸಂಖ್ಯೆ ಎಷ್ಟು;

(ಇ) ಬಿ.ಪಿ.ಎಲ್. ಮತ್ತು ಎ.ಪಿ.ಎಲ್. ಪಡಿತರ ಚೀಟಿದಾರರಿಗೆ ನೀಡಲಾಗುತ್ತಿರುವ ಆಹಾರ ಧಾನ್ಯಗಳು ಯಾವುವು ; ಅವುಗಳ ದರ ಹಾಗೂ ಪ್ರಮಾಣವೆಷ್ಟು;

(ಈ) ಸರ್ಕಾರ ಇದಕ್ಕೆ ಮಂಡ್ಯ ಜಿಲ್ಲೆಯಲ್ಲಿ ಖರ್ಚು ಮಾಡುತ್ತಿರುವ ಮೊತ್ತವೆಷ್ಟು ಹಾಗೂ ಇದರಲ್ಲಿ ರಾಜ್ಯ ಸರ್ಕಾರ ಮತ್ತು ಕೇಂದ್ರ ಸರ್ಕಾರಗಳ ಪಾಲೆಷ್ಟು ? (ತಾಲ್ಲೂಕುವಾರು ವಿವರ ನೀಡುವುದು)

## ಪಟ್ಟಣ ಪಂಚಾಯತಿ ವ್ಯಾಪ್ತಿಯಲ್ಲಿ ಕುಡಿಯುವ ನೀರು, ರಸ್ತೆ, ಒಳಚರಂಡಿ ಹಾಗೂ ಇತರೆ ಮೂಲಭೂತ ಸೌಲಭ್ಯಗಳ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೮೭ (೧೪೦೦) ಮಾನ್ಯ ಪೌರಾಡಳಿತ ಮತ್ತು ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೆಳ್ಳೂರು ಪಟ್ಟಣ ಪಂಚಾಯಿತಿ ಹೊಸದಾಗಿ ರಚನೆಯಾಗಿರುವುದರಿಂದ ಈ ಪಟ್ಟಣ ಪಂಚಾಯತಿ ವ್ಯಾಪ್ತಿಯಲ್ಲಿ ಕುಡಿಯುವ ನೀರು, ರಸ್ತೆ, ಒಳಚರಂಡಿ ಹಾಗೂ ಇತರೆ ಮೂಲಭೂತ ಸೌಲಭ್ಯಗಳು ಇಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಮೂಲಭೂತ ಸೌಕರ್ಯಗಳನ್ನು ಒದಗಿಸಲು ಸರ್ಕಾರ ಯೋಜನೆಯನ್ನು ರೂಪಿಸಲಾಗಿದೆಯೇ;

(ಇ) ಯೋಜನೆ ರೂಪಿಸಿದ್ದಲ್ಲಿ, ಯೋಜನಾ ವೆಚ್ಚ ಎಷ್ಟು; ಕಾಮಗಾರಿ ಯಾವಾಗ ಪ್ರಾರಂಭವಾಗುವುದು ? (ಸಂಪೂರ್ಣ ವಿವರ ನೀಡುವುದು)

## ಮಂಡ್ಯ ಜಿಲ್ಲೆ ಜನತೆಗೆ ನೀಡುವ ಆಹಾರ ಧಾನ್ಯವನ್ನು ಸರ್ಕಾರ ಖರೀದಿ ಮಾಡುತ್ತಿರುವ ಬಗ್ಗೆ

**ಶ್ರೀ ಎನ್. ಅಪ್ಪಾಜಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೮೮ (೧೩೯) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಮಂಡ್ಯ ಜಿಲ್ಲೆಯಲ್ಲಿ ಜನತೆಗೆ ನೀಡುವ ಆಹಾರ ಧಾನ್ಯಗಳ ಸಬ್ಸಿಡಿಗೆ ಪ್ರತಿ ವರ್ಷಕ್ಕೆ ಎಷ್ಟು ಖರ್ಚು ಮಾಡಲಾಗುವುದು;

(ಆ) ಇದರಲ್ಲಿ ರಾಜ್ಯ ಮತ್ತು ಕೇಂದ್ರದ ಪಾಲು ಎಷ್ಟು; (ತಾಲ್ಲೂಕುವಾರು ವಿವರ ನೀಡುವುದು)

(ಇ) ಮಂಡ್ಯ ಜಿಲ್ಲೆ ಜನತೆಗೆ ನೀಡುವ ಆಹಾರ ಧಾನ್ಯವನ್ನು ಸರ್ಕಾರ ಎಲ್ಲಿಂದ ಖರೀದಿ ಮಾಡುತ್ತದೆ; ಯಾವ ದರದಲ್ಲಿ ಅಕ್ಕಿ ಹಾಗೂ ಇತರೆ ಆಹಾರ ಧಾನ್ಯಗಳನ್ನು ಖರೀದಿ ಮಾಡುತ್ತದೆ; (ವಿವರ ನೀಡುವುದು)

(ಈ) ರೈತರಿಂದ ನೇರವಾಗಿ, ಭತ್ತ, ರಾಗಿ ಹಾಗೂ ಇತರೆ ಆಹಾರ ಪದಾರ್ಥಗಳನ್ನು ಖರೀದಿ ಮಾಡಿ ಸಬ್ಸಿಡಿ ದರದಲ್ಲಿ ನಾಗರಿಕರಿಗೆ ವಿತರಣೆ ಮಾಡಲು ಸರ್ಕಾರಕ್ಕಿರುವ ತೊಂದರೆಯೇನು ; (ವಿವರ ನೀಡುವುದು)

(ಉ) ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮವೇನು ?

## ಪುರಸಭೆ ಹಾಗೂ ನಗರಸಭೆ ಸದಸ್ಯರ ಸಿಟ್ಟಿಂಗ್ ಫೀಸ್ ಹೆಚ್ಚಿಸುವ ಬಗ್ಗೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೦೮೯ (೧೩೬೨) ಮಾನ್ಯ ಪೌರಾಡಳಿತ ಹಾಗೂ ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಪುರಸಭೆ ಮತ್ತು ನಗರಸಭೆ ಸದಸ್ಯರುಗಳ ಹಾಗೂ ಇತರ ಜನಪ್ರತಿನಿಧಿಗಳ ಸಭಾ ಭತ್ಯೆ (ಸಿಟ್ಟಿಂಗ್ ಫೀಸ್) ನ್ನು ಹೆಚ್ಚು ಮಾಡುವ ಆಲೋಚನೆ ಸರ್ಕಾರಕ್ಕಿದೆಯೇ;

(ಆ) ಈಗಿರುವ ಸಭಾ ಭತ್ಯೆ (ಸಿಟ್ಟಿಂಗ್ ಫೀಸ್) ನ್ನು ದುಪ್ಪಟ್ಟು ಮಾಡಬೇಕೆಂಬುದು ಅನೇಕ ಸದ್ಯಸ್ಯರ ಬೇಡಿಕೆಯಾಗಿದ್ದು, ಇದನ್ನು ಎಷ್ಟು ದಿವಸಗಳಲ್ಲಿ ಜಾರಿಗೆ ತರಲಾಗುವುದು;

(ಇ) ಆಡಳಿತದಲ್ಲಿ ಪಾರದರ್ಶಕತೆ ಕಾಯ್ದುಕೊಳ್ಳಲು ಗ್ರಾಮಸಭೆ ಮಾದರಿಯಲ್ಲಿ ವಾರ್ಡ್ ಸಭೆಗಳನ್ನು ಮಾಡಿ ಸಾರ್ವಜನಿಕ ಸಹಭಾಗಿತ್ವ ನೀಡಲು ಸರ್ಕಾರ ಕ್ರಮ ಕೈಗೊಳ್ಳುವುದೇ ?

## ಆಹಾರ ಕಲಬೆರಕೆ ತಪ್ಪಿಸಲು ಕ್ರಮ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೦೯೦ (೧೩೬೩) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಹೋಟೆಲ್ ಮತ್ತು ಇತರೆ ಆಹಾರ ವಿತರಣೆ ಸ್ಥಳಗಳಲ್ಲಿ ಆಹಾರ ಕಲಬೆರಕೆಯಾಗುತ್ತಿದ್ದು, ಇದರಿಂದ ಜನರ ಆರೋಗ್ಯದ ಮೇಲೆ ಅಡ್ಡ ಪರಿಣಾಮಗಳು ಉಂಟಾಗುತ್ತಿರುವ ಬಗ್ಗೆ ಸರ್ಕಾರ ಯಾವ ಕ್ರಮ ಕೈಗೊಂಡಿದೆ;

(ಆ) ಫುಡ್ ಇನ್ಸ್‌ಪೆಕ್ಟರ್‌ಗಳು ಎಷ್ಟು ಕಡೆ ತಪಾಸಣೆ ಮಾಡಿ ಆಹಾರ ಕಲಬೆರಕೆ ಪ್ರಕರಣಗಳನ್ನು ಪತ್ತೆ ಹಚ್ಚಿ ಕ್ರಮ ಕೈಗೊಂಡಿದ್ದಾರೆ; (ಕಳೆದ ೨ ವರ್ಷಗಳ ಮಾಹಿತಿ ನೀಡುವುದು)

(ಇ) ಎಷ್ಟು ಹೋಟೆಲ್ ಮಾಲೀಕರ ಮೇಲೆ ಕಲಬೆರಕೆ ಪ್ರಕರಣಕ್ಕೆ ಸಂಬಂಧಿಸಿದಂತೆ ಕೇಸುಗಳನ್ನು ದಾಖಲಿಸಲಾಗಿದೆ; ಯಾವ ರೀತಿಯ ಕ್ರಮ ಕೈಗೊಳ್ಳಲಾಗಿದೆ ?

## ಬಿ.ಪಿ.ಎಲ್. ಕಾರ್ಡ್‌ಗಳ ಹಂಚಿಕೆ

**ಶ್ರೀ ಆರ್. ಧರ್ಮಸೇನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೯೧ (೧೩೪೪) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಮೈಸೂರು ಮತ್ತು ಚಾಮರಾಜನಗರ ಜಿಲ್ಲೆಯಲ್ಲಿ ಇದುವರೆಗೂ ಎಷ್ಟು ಬಿ.ಪಿ.ಎಲ್. ಕಾರ್ಡ್‌ಗಳನ್ನು ಹಂಚಲಾಗಿದೆ; ಇನ್ನೂ ಎಷ್ಟು ಜನರಿಗೆ ಹಂಚಬೇಕಾಗಿದೆ;

(ಆ) ಅನರ್ಹರಿಗೆ ಕೊಟ್ಟಿರುವ ಎಷ್ಟು ಕಾರ್ಡ್‌ಗಳನ್ನು ವಾಪಸ್ ಪಡೆಯಲಾಗಿದೆ; ಅರ್ಹರಲ್ಲದಿದ್ದರೂ ಪರಿಶೀಲಿಸದೆ ಹಂಚಿಕೆ ಮಾಡಿರುವ ಅಧಿಕಾರಿಗಳ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ;

(ಇ) ಬಿ.ಪಿ.ಎಲ್. ಕಾರ್ಡ್ ಹಂಚಲು ಹೊಸ ಮಾನದಂಡಗಳನ್ನು ನಿಗಧಿಪಡಿಸಲು ಸರ್ಕಾರ ಚಿಂತಿಸಿದೆಯೇ; ಚಿಂತಿಸಿದ್ದಲ್ಲಿ ಮಾಹಿತಿ ನೀಡುವುದು ?

## ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸುವ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೯೬೩ (೧೧೮೭) ಮಾನ್ಯ ಸಣ್ಣ ಕೈಗಾರಿಕೆ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಪಟ್ಟಣ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸಲು ಸರ್ಕಾರವು ರೂಪಿಸಿರುವ ಯೋಜನೆಗಳು ಯಾವುವು; ಕಳೆದ ಮೂರು ವರ್ಷಗಳಲ್ಲಿ ಯೋಜನೆಗಳಡಿ ಹಾಸನ ಜಿಲ್ಲೆಯಲ್ಲಿ ಸ್ಥಾಪನೆಯಾದ ಸಣ್ಣ ಕೈಗಾರಿಕೆಗಳಾವುವು; (ಆದೇಶದ ಪ್ರತಿಯೊಂದಿಗೆ ಸಂಪೂರ್ಣ ಮಾಹಿತಿಯನ್ನು ನೀಡುವುದು)

(ಆ) ಹಾಸನ ಜಿಲ್ಲಾ ವ್ಯಾಪ್ತಿಯಲ್ಲಿ ಯಾವ ಯಾವ ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸಲು ಅವಕಾಶಗಳಿವೆ; ಮತ್ತು ಸಣ್ಣ ಕೈಗಾರಿಕೆಗಳ ಒಂದು ಕೈಗಾರಿಕಾ ಪ್ರದೇಶ ಸ್ಥಾಪಿಸಲು ಇರುವಂತಹ ಮಾನದಂಡಗಳೇನು; (ಸಂಪೂರ್ಣ ವಿವರ ನೀಡುವುದು)

(ಇ) ಪರಿಶಿಷ್ಠ ಜಾತಿ, ಪರಿಶಿಷ್ಠ ವರ್ಗ ಮತ್ತು ಹಿಂದುಳಿದ ವರ್ಗದವರು ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸಲು ಸರ್ಕಾರದ ವತಿಯಿಂದ ಯಾವ ಯಾವ ಯೋಜನೆಗಳನ್ನು ರೂಪಿಸಿ ಅವರಿಗೆ ಸಾಲ ಸೌಲಭ್ಯ, ಸಹಾಯ ಧನ ನೀಡಲಾಗುತ್ತಿದೆ ? (ಸಂಪೂರ್ಣ ವಿವರ ನೀಡುವುದು)

## ನೂತನ ಮರಳು ನೀತಿ ಕುರಿತು

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೯೩ (೧೧೮೬) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಪಟ್ಟಾ ಭೂಮಿ, ಹಳ್ಳ, ತೊರೆ, ಕೆರೆ, ನದಿ, ಪ್ರದೇಶಗಳಲ್ಲಿ ಮರಳು ತೆಗೆಯಲು ಅವಕಾಶ ಕೊಡುವ ಕರ್ನಾಟಕ ನೂತನ ಮರಳು ನೀತಿ–೨೦೨೦ ಜಾರಿಯಲ್ಲಿದೆಯೇ; ಹಾಗಿದ್ದಲ್ಲಿ, ನೂತನ ಮರಳು ನೀತಿ ಜಾರಿಗೆ ತಂದಿರುವ ಉದ್ದೇಶಗಳೇನು; (ವಿವರ ನೀಡುವುದು)

(ಆ) ಈ ಹೊಸ ನೀತಿಯಡಿ ಹಾಸನ ಜಿಲ್ಲೆಯಲ್ಲಿ ಮರಳು ತೆಗೆಯಲು ಗುರುತಿಸಿರುವ ಮರಳು ನಿಕ್ಷೇಪಗಳು ಯಾವುವು; ಈ ನಿಕ್ಷೇಪಗಳಲ್ಲಿ ಲಭ್ಯವಿರುವ ಮರಳಿನ ಪ್ರಮಾಣವೆಷ್ಟು; (ಜಿಲ್ಲಾವಾರು ಮಾಹಿತಿ ನೀಡುವುದು)

(ಇ) ಈ ಮರಳು ನೀತಿಯಿಂದ ಸರ್ಕಾರಕ್ಕೆ ಪ್ರಸಕ್ತ ಸಾಲಿನಲ್ಲಿ ಸಂದಾಯವಾಗಿರುವ ಆದಾಯವೆಷ್ಟು; ಈ ನೀತಿಯಡಿ ಪ್ರತಿ ಮೆಟ್ರಿಕ್‌ಟನ್ ಮರಳಿಗೆ ನಿಗದಿಪಡಿಸಿರುವ ದರವೆಷ್ಟು; ದರ ನಿಗದಿಪಡಿಸಲು ಅನುಸರಿಸುವ ಮಾನದಂಡಗಳೇನು; (ವಿವರ ನೀಡುವುದು)

(ಈ) ಈ ನೀತಿಯಡಿ ಸ್ಥಳೀಯವಾಗಿ ಜನತೆಯು ಯಾವ ಯಾವ ಕಾಮಗಾರಿಗಳಿಗೆ ಮರಳನ್ನು ಖರೀದಿಸಲು ಅನುಮತಿ ನೀಡಲಾಗಿದೆ; ಅನುಮತಿಯನ್ನು ಪಡೆಯಲು ಅನುಸರಿಸಬಹುದಾದ ಕ್ರಮಗಳೇನು ? (ವಿವರ ನೀಡುವುದು)

## ಕೆ.ಐ.ಎ.ಡಿ.ಬಿ ಸ್ವಾಧೀನ ಮಾಡಿಕೊಂಡಿರುವ ಜಮೀನುಗಳ ಬಗ್ಗೆ

**ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೯೪ (೧೧೮೫) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೆ.ಐ.ಎ.ಡಿ.ಬಿ ವತಿಯಿಂದ ಹಾಸನ ಜಿಲ್ಲೆಯಲ್ಲಿ ಎಷ್ಟು ಎಕರೆ ಜಮೀನನ್ನು ಯಾವ ಯಾವ ಉದ್ದೇಶಗಳಿಗಾಗಿ ಭೂಸ್ವಾಧೀನ ಮಾಡಿಕೊಳ್ಳಲಾಗಿದೆ; (ಸರ್ವೆ ನಂಬರ್ ಸಹಿತ ಸ್ವಾಧೀನಪಡಿಸಿಕೊಂಡ ದಿನಾಂಕ ಮತ್ತು ಆದೇಶಗಳೊಂದಿಗೆ ಹೋಬಳಿವಾರು ಮಾಹಿತಿ ನೀಡುವುದು)

(ಆ) ಕೆ.ಐ.ಎ.ಡಿ.ಬಿ ವತಿಯಿಂದ ಹಾಸನ ಜಿಲ್ಲೆಯಲ್ಲಿ ಭೂಸ್ವಾಧೀನ ಮಾಡಿಕೊಂಡಿರುವ ಜಮೀನನ್ನು ಯಾವ ದರಗಳಲ್ಲಿ, ಯಾವ ಕೈಗಾರಿಕೆಗಳಿಗೆ, ಎಷ್ಟು ವಿಸ್ತೀರ್ಣದ ನಿವೇಶನ ಹಂಚಿಕೆ ಮಾಡಿದೆ; (ವಿವರಗಳನ್ನು ಆದೇಶಗಳ ಸಹಿತ ಒದಗಿಸುವುದು)

(ಇ) ಕೆ.ಐ.ಎ.ಡಿ.ಬಿ ಒಮ್ಮೆ ಸ್ವಾಧೀನಪಡಿಸಿಕೊಂಡ ಜಮೀನನ್ನು ಎಷ್ಟು ವರ್ಷಗಳ ಒಳಗೆ ಉದ್ದೇಶಿತ ಯೋಜನೆಗೆ ಬಳಸಿಕೊಳ್ಳಬೇಕೆಂಬ ನಿಯಮವಿದೆ? (ಆದೇಶ/ಅಧಿನಿಯಮ ಸಹಿತ ಮಾಹಿತಿ ನೀಡುವುದು)

## KIADB ಯಲ್ಲಿ ನಡೆದಿರುವ ಭೂ ಉಪಯೋಗ ಬದಲಾವಣೆ ಬಗ್ಗೆ

**ಶ್ರೀ ಕಾಂತರಾಜ್ (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೯೫ (೧೪೮೯) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿ (KIADB) ಯನ್ನು ಯಾವಾಗ ಸ್ಥಾಪನೆ ಮಾಡಲಾಯಿತು; ಇದರ ಉದ್ದೇಶಗಳೇನು; (ವಿವರವಾದ ಮಾಹಿತಿ ನೀಡುವುದು)

(ಆ) ಸದರಿ ಮಂಡಳಿಯು ಯಾವ-ಯಾವ ಉದ್ದೇಶಗಳಿಗಾಗಿ ಜಮೀನನ್ನು ಸ್ವಾಧೀನಪಡಿಸಿಕೊಂಡು ಅಭಿವೃದ್ಧಿ ಮಾಡಿ ಹಸ್ತಾಂತರಿಸಲು ಅಧಿಕಾರ ಹೊಂದಿದೆ; (ಉದ್ದೇಶವಾರು ಮಾಹಿತಿ ನೀಡುವುದು)

(ಇ) ಭೂ ಉಪಯೋಗ/ಭೂಮಿ ಉಪಯೋಗ (Land use) ಎಂದರೇನು; ಎಷ್ಟು ವಿಧವಾದ ಭೂ ಉಪಯೋಗಗಳಿವೆ; ಸದರಿ ಮಂಡಳಿ ವ್ಯಾಪ್ತಿಯಲ್ಲಿ ಬರುವ ಭೂ ಉಪಯೋಗಗಳಾವುವು;

(ಈ) ಭೂ ಉಪಯೋಗ/ಭೂಮಿ ಉಪಯೋಗ ಬದಲಾವಣೆ (Change of Land use) ಅಂದರೇನು; ಅವುಗಳಲ್ಲಿ ಎಷ್ಟು ವಿಧ ; ಅವು ಯಾವುವು; ಮಂಡಳಿಯ ವ್ಯಾಪ್ತಿಯಲ್ಲಿ ಎಷ್ಟು ವಿಧಧ Change of Land use ಬರುತ್ತವೆ; (ವಿವರವಾದ ಮಾಹಿತಿ ನೀಡುವುದು)

(ಉ) ಜನವರಿ ೨೦೧೯-೨೦ ಹಾಗೂ ೨೦೨೦-೨೧ ರವರೆಗೆ ಸದರಿ ಮಂಡಳಿಯ ವ್ಯಾಪ್ತಿಯಲ್ಲಿ ಎಷ್ಟು change of Land use ಪ್ರಕರಣಗಳು ನಡೆದಿವೆ ; (ವಿವರವಾಗಿ ಜಿಲ್ಲಾವಾರು, ವರ್ಷವಾರು ಮಾಹಿತಿ ನೀಡುವುದು)

(ಊ) Change of Land use ಮಾಡುವ ಅಧಿಕಾರವು ಮಂಡಳಿಗಿದೆಯೇ ಅಥವಾ ಸರ್ಕಾರಕ್ಕಿದೆಯೇ ?

## ಮಸಾಲ ಪಾರ್ಕ್ ಸ್ಥಾಪಿಸುವ ಕುರಿತು

**ಶ್ರೀ ಬಿ.ಕೆ. ಹರಿಪ್ರಸಾದ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೯೬ (೧೨೧೨) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ವಿಶ್ವಪ್ರಸಿದ್ಧ ಬ್ಯಾಡಗಿ ಮೆಣಸಿನಕಾಯಿಯಿಂದ ಮೆಣಸಿನ ಪುಡಿ ಸೇರಿದಂತೆ ವಿವಿಧ ಬಗೆಯ ಉತ್ಪನ್ನಗಳನ್ನು ತಯಾರಿಸುವ ಮಸಾಲೆ ಪಾರ್ಕ್ ಒಂದನ್ನು ಬ್ಯಾಡಗಿ ಅಥವಾ ಹಾವೇರಿಯಲ್ಲಿ ಸ್ಥಾಪಿಸಲು ಸರ್ಕಾರ ಕ್ರಮ ತೆಗೆದುಕೊಳ್ಳುವುದೇ;

(ಆ) ಬ್ಯಾಡಗಿ ಮೆಣಸಿನಕಾಯಿಗೆ ಹೆಚ್ಚು ಬೇಡಿಕೆ ಇದ್ದು, ಖರೀದಿದಾರರು ಮೆಣಸಿನ ಕಾಯಿಯನ್ನು ಖರೀದಿಸಿದ ನಂತರ ಇಲ್ಲಿಯೇ ಪುಡಿ ಮಾಡಿಸಿಕೊಳ್ಳಲು ಅನುಕೂಲವಾಗುವಂತೆ ಮೆಣಸಿನಕಾಯಿ ಪುಡಿ ಮಾಡುವ (ಸುಮಾರು ೧೦೦) ಘಟಕಗಳು ಬ್ಯಾಡಗಿಯಲ್ಲಿದ್ದು, ಇವುಗಳನ್ನೂ ಒಳಗೊಂಡಂತೆ ಆಧುನಿಕ ಮಾದರಿಯ ಮಸಾಲೆ ಪಾರ್ಕ್‌ವೊಂದನ್ನು ಸ್ಥಾಪಿಸಲು ಕ್ರಮ ಜರುಗಿಸಲಾಗುವುದೇ;

(ಇ) ಇದರಿಂದ ಬ್ಯಾಡಗಿ ಮೆಣಸಿನಕಾಯಿ ಖರೀದಿ ಮಾಡುವ ಕಂಪನಿಗಳು ತಮ್ಮ ಮಸಾಲೆ ಉತ್ಪನ್ನಗಳನ್ನು ತಯಾರಿಸುವ ಘಟಕಗಳನ್ನು ಇಲ್ಲಿಯೇ ಸ್ಥಾಪಿಸುವುದರಿಂದ ಸ್ಥಳೀಯ ಜನರಿಗೆ ಉದ್ಯೋಗ ದೊರೆಯುವಂತಾಗುವುದಿಲ್ಲವೇ; ಸರ್ಕಾರ ಗಮನ ಹರಿಸುವುದೇ ?

## ಸಾರ್ವಜನಿಕ ಹೊಣೆಗಾರಿಕೆ ನಿಧಿಯ ಬಗ್ಗೆ

**ಶ್ರೀ ಕಾಂತರಾಜ್ (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೯೭೭ (೧೪೦೮) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಸಾರ್ವಜನಿಕ ಉದ್ದಿಮೆಗಳಾವುವು; ಆಡಳಿತ ಇಲಾಖಾವಾರು ಉದ್ದಿಮೆಗಳ ಪಟ್ಟಿಯ ವಿವರ ನೀಡುವುದು;

(ಆ) ಸಾರ್ವಜನಿಕ ಹೊಣೆಗಾರಿಕೆ ನಿಧಿ (ಸಿ.ಎಸ್.ಆರ್.) ಎಂದರೇನು; ಭಾಗಶಃ ಎಷ್ಟು ಹಣವನ್ನು ಇದರಡಿ ಕಾಯ್ದಿರಿಸಬೇಕಾಗಿದೆ; ಈ ಸಂಬಂಧ ಕಂಪನಿ ನಿಯಮಗಳಲ್ಲಿರುವ ನಿಯಮವೇನು;

(ಇ) ಕಳೆದ ೧೦ ವರ್ಷಗಳಿಂದ ಸದರಿ ಉದ್ದಿಮೆಗಳು ಸಾರ್ವಜನಿಕ ಹೊಣೆಗಾರಿಕೆ ನಿಧಿಯಡಿ (ಸಿ.ಎಸ್.ಆರ್) ಎಷ್ಟು ಹಣವನ್ನು ಕ್ರೋಢೀಕರಿಸಿವೆ; (ವರ್ಷವಾರು, ಉದ್ದಿಮೆವಾರು ಮಾಹಿತಿ ನೀಡುವುದು)

(ಈ) ಸದರಿ ಹಣದಲ್ಲಿ ಯಾವ ಯಾವ ಕಾಮಗಾರಿಗಳನ್ನು ಯಾವ ಯಾವ ಸಂಸ್ಥೆಗಳ ಮುಖಾಂತರ ಬಿಡುಗಡೆ ಮಾಡಿ ಖರ್ಚು ಮಾಡಲಾಗಿದೆ? (ವರ್ಷವಾರು, ಉದ್ದಿಮೆವಾರು ವಿವರವಾದ ಮಾಹಿತಿ ನೀಡುವುದು)

## ತುಮಕೂರು ಜಿಲ್ಲೆ, ಗುಬ್ಬಿ ಪಟ್ಟಣದ ಮಾರನಕಟ್ಟೆ ಬಗ್ಗೆ

**ಶ್ರೀ ಕಾಂತರಾಜ್ (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೯೭೮ (೧೪೧೦) ಮಾನ್ಯ ಪೌರಾಡಳಿತ ಹಾಗೂ ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ತುಮಕೂರು ಜಿಲ್ಲೆ, ಗುಬ್ಬಿ ಪಟ್ಟಣದಲ್ಲಿ ಮಾರನಕಟ್ಟೆ ಇರುವುದು ನಿಜವೆ; ಹಾಗಿದ್ದಲ್ಲಿ, ಇದರ ಒಟ್ಟು ವಿಸ್ತೀರ್ಣವೆಷ್ಟು;

(ಆ) ರೆವಿನ್ಯೂ ನಿಯಮದಂತೆ ಕೆರೆ ಕಟ್ಟೆಗಳು ಸರ್ಕಾರದ್ದಾಗಿರುತ್ತವೆ; ಸದರಿ ಕಟ್ಟೆಯು ಪಟ್ಟಣ ಪಂಚಾಯ್ತಿಯ ಹೆಸರಿನಲ್ಲಿ ಇರುವುದು ನಿಜವೇ; (ಸರ್ಕಾರಿ ಆದೇಶ ನೀಡುವುದು)

(ಇ) ಸದರಿ ಮಾರನಕಟ್ಟೆಯ ಜಾಗವನ್ನು ವಿವಿಧ ಸಂಘ ಸಂಸ್ಥೆಗಳಿಗೆ ಹಂಚಿರುವುದು ನಿಜವೇ; ಹಾಗಾದರೆ ಇದಕ್ಕೆ ಸಂಬಂಧಿಸಿದ ಸರ್ಕಾರಿ ಆದೇಶಗಳನ್ನು ನೀಡುವುದು;

(ಈ) ಕೆರೆ ಕಟ್ಟೆ ಜಾಗವನ್ನು ಮಂಜೂರು ಮಾಡುವ ಅಧಿಕಾರ ಸರ್ಕಾರಕ್ಕಿದೆಯೇ ಅಥವಾ ಪಟ್ಟಣ ಪಂಚಾಯಿತಿ ಕೌನ್ಸಿಲ್‌ಗೆ ಇದೆಯೇ? (ವಿವರವಾದ ಮಾಹಿತಿ ನೀಡುವುದು)

## ರಾಜ್ಯದಲ್ಲಿರುವ ನಗರಾಭಿವೃದ್ಧಿ ಪ್ರಸ್ತಾವನೆಗಳ ಬಗ್ಗೆ

**ಶ್ರೀ ಕಾಂತರಾಜ್ (ಬಿಎಂಎಲ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೦೯೯ (೧೪೧೧) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ನಗರಾಭಿವೃದ್ಧಿ ಪ್ರಾಧಿಕಾರ ಎಂದರೇನು; ಅವು ಯಾವುವು; ಯಾವಾಗ ಸ್ಥಾಪನೆ ಮಾಡಲಾಗಿದೆ; ಅದರ ಉದ್ದೇಶಗಳೇನು; ರಾಜ್ಯದಲ್ಲಿರುವ ನಗರಾಭಿವೃದ್ಧಿ ಪ್ರಾಧಿಕಾರಗಳಾವುವು;

(ಆ) ಸದರಿ ನಗರಾಭಿವೃದ್ಧಿ ಪ್ರಾಧಿಕಾರಗಳು ಯಾವ–ಯಾವ ಉದ್ದೇಶಗಳಿಗಾಗಿ ಜಮೀನನ್ನು ಸ್ವಾಧೀನಪಡಿಸಿಕೊಂಡು ಅಭಿವೃದ್ಧಿ ಮಾಡಿ ಹಸ್ತಾಂತರಿಸಲು ಅಧಿಕಾರ ಹೊಂದಿದೆ; (ವಿವರವಾಗಿ ಉದ್ದೇಶವಾರು ಮಾಹಿತಿ ನೀಡುವುದು)

(ಇ) ತುಮಕೂರು ಜಿಲ್ಲೆಯಲ್ಲಿ ನಗರಾಭಿವೃದ್ಧಿ ಪ್ರಾಧಿಕಾರ ಇದೆಯೇ; ಹಾಗಿದ್ದಲ್ಲಿ, ಸದರಿ ಪ್ರಾಧಿಕಾರದಿಂದ ಕಳೆದ ೧೫ ವರ್ಷಗಳಲ್ಲಿ ಯಾವ ಯಾವ ಬಡಾವಣೆ ನಿರ್ಮಿಸಲಾಗಿದೆ; ಎಷ್ಟು ನಿವೇಶನಗಳನ್ನು ಹಂಚಿಕೆ ಮಾಡಲಾಗಿದೆ; ಉಳಿದ ನಿವೇಶನಗಳೆಷ್ಟು; (ವಿವರವಾದ ಮಾಹಿತಿ ನೀಡುವುದು)

(ಈ) ತುಮಕೂರು ನಗರದ ಅಮಾನಿಕೆರೆಯನ್ನು ಸದರಿ ಪ್ರಾಧಿಕಾರ ನಿರ್ವಹಣೆ ಮಾಡುತ್ತಿದೆಯೇ; ನಿರ್ವಹಣೆಗಾಗಿ ಇಲ್ಲಿಯವರೆಗೂ ಮಾಡಿದ ಖರ್ಚು ಎಷ್ಟು? (ವಿವರವಾಗಿ ಮಾಹಿತಿ ನೀಡುವುದು)

## ಆರ್ಥಿಕ ಸಂಕಷ್ಟದಲ್ಲಿರುವ ಸಣ್ಣ ಉದ್ದಿಮೆದಾರರಿಗೆ ಆರ್ಥಿಕ ಚೈತನ್ಯ ತುಂಬುವ ಕುರಿತು

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೦೦ (೧೩೬೪) ಮಾನ್ಯ ಸಣ್ಣ ಕೈಗಾರಿಕೆ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೋವಿಡ್–೧೯ ನಿಂದಾಗಿ ರಾಜ್ಯಾದ್ಯಂತ ಸಣ್ಣ ಕೈಗಾರಿಕೆಗಳು ಕುಸಿದಿದ್ದು, ಇದನ್ನೇ ನಂಬಿರುವ ಸಣ್ಣ ಉದ್ದಿಮೆದಾರರು ತೀವ್ರ ಆರ್ಥಿಕ ಸಂಕಷ್ಟದಲ್ಲಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಾಗಿದ್ದಲ್ಲಿ, ಇಂತಹ ಸಂಕಷ್ಟದಲ್ಲಿರುವ ಸಣ್ಣ ಉದ್ದಿಮೆದಾರರ ಆರ್ಥಿಕ ಚೈತನ್ಯತೆ ಕುರಿತು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಇ) ಇಂತಹ ಉದ್ದಿಮೆದಾರರಿಗೆ ಸಾಲ ಸೌಲಭ್ಯ ಮತ್ತು ಸಾಲ ಮರುಪಾವತಿ ವಿನಾಯಿತಿ ಕುರಿತ ಯೋಜನೆಗಳು ಸರ್ಕಾರದ ಮುಂದಿದೆಯೇ ?

## ರಾಜ್ಯದಲ್ಲಿ ನಡೆಯುತ್ತಿರುವ ಅಕ್ರಮ ಮರಳು ಗಣಿಗಾರಿಕೆ ಬಗ್ಗೆ

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೦೧ (೧೩೬೩) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಅಕ್ರಮ ಮರಳು ಗಣಿಗಾರಿಕೆ ಅವ್ಯಹತವಾಗಿ ನಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಅಕ್ರಮ ಮರಳು ಗಣಿಗಾರಿಕೆ ತಡೆಗೆ ರಚಿಸಿರುವ ಜಿಲ್ಲಾ ಟಾಸ್ಕ್‌ಫೋರ್ಸ್‌ಗಳ ನಿಷ್ಕ್ರಿಯತೆಗೆ ಕಾರಣಗಳೇನು;

(ಇ) ಹೊಸ ಮರಳು ನೀತಿಯಲ್ಲಿ ತಿಳಿಸಿರುವಂತೆ ಸ್ಥಳೀಯ ಪಂಚಾಯತಿಗಳಿಗೆ ಮರಳು ಮಾರಾಟ ಮಾಡಲು ಅವಕಾಶ ನೀಡುವ ಕಾನೂನು ಕಾರ್ಯರೂಪಕ್ಕೆ ಬಂದಿರುವ ಜಿಲ್ಲೆಗಳೆಷ್ಟು;

(ಈ) ಬೆಳಗಾವಿ ಜಿಲ್ಲೆಯಲ್ಲಿ ೨೦೨೦–೨೧ನೇ ಸಾಲಿನಲ್ಲಿ ಅಕ್ರಮ ಮರಳು ಗಣಿಗಾರಿಕೆಗೆ ಸಂಬಂಧಿಸಿದಂತೆ ದಾಖಲಾದ ಪ್ರಕರಣಗಳ ಸಂಖ್ಯೆ ಎಷ್ಟು ? (ತಾಲ್ಲೂಕುವಾರು ವಿವರ ನೀಡುವುದು)

## ಬಿ.ಪಿ.ಎಲ್. ಫಲಾನುಭವಿಗಳಿಗೆ ವಿತರಿಸಲಾಗುವ ಸಾಮಗ್ರಿಗಳ ಕುರಿತು

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೦೨ (೧೩೬೨) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಬಿ.ಪಿ.ಎಲ್ ಫಲಾನುಭವಿಗಳಿಗೆ ವಿತರಿಸಲಾಗುವ ಸಾಮಗ್ರಿಗಳು ಯಾವುವು ಮತ್ತು ಪ್ರತಿ ವ್ಯಕ್ತಿಗೆ ವಿತರಿಸಲಾಗುತ್ತಿರುವ ಸಾಮಗ್ರಿಗಳ ಪ್ರಮಾಣವೆಷ್ಟು;

(ಆ) ಈಗಾಗಲೇ ನೀಡುತ್ತಿರುವ ಅವಶ್ಯಕ ವಸ್ತುಗಳ ಜೊತೆಯಲ್ಲಿ ಹೆಚ್ಚಿನ ಅವಶ್ಯಕ ವಸ್ತುಗಳನ್ನು ವಿತರಿಸುವ ಯೋಜನೆ ಸರ್ಕಾರದ ಮುಂದಿದೆಯೇ;

(ಇ) ಇದ್ದಲ್ಲಿ, ವಿತರಿಸಲು ಯೋಚಿಸಿರುವ ಹೆಚ್ಚುವರಿ ಅವಶ್ಯಕ ವಸ್ತುಗಳು ಯಾವುವು?

## ಕೈಗಾರಿಕೆಗಳು ರಾಸಾಯನಿಕಯುಕ್ತ ನೀರನ್ನು ನದಿಗಳಿಗೆ ಬಿಡುತ್ತಿರುವ ಕುರಿತು

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೦೩ (೧೩೬೫) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಅನೇಕ ಕೈಗಾರಿಕೆಗಳು ತ್ಯಾಜ್ಯ ಸಂಸ್ಕರಣ ಘಟಕಗಳನ್ನು ಅಳವಡಿಸಿಕೊಳ್ಳದೇ ನೇರವಾಗಿ ನದಿಗಳಿಗೆ ರಾಸಾಯನಿಕಯುಕ್ತ ಕಲುಷಿತ ನೀರನ್ನು ಬಿಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬೆಳಗಾವಿ ಜಿಲ್ಲೆಯಲ್ಲಿ ರಾಸಾಯನಿಕಯುಕ್ತ ಕಲುಷಿತ ನದಿ ನೀರಿನ ಉಪಯೋಗದಿಂದ ಜನ ಜಾನುವಾರುಗಳಿಗೆ ತೊಂದರೆಯಾಗಿರುವ ಕುರಿತು ಪ್ರಕರಣ ದಾಖಲಾಗಿದೆಯೇ;

(ಇ) ತ್ಯಾಜ್ಯ ಸಂಸ್ಕರಣ ಘಟಕಗಳನ್ನು ಅಳವಡಿಸಿಕೊಳ್ಳದೆ ಇರುವ ಕೈಗಾರಿಕೆಗಳ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು?

## ಸ್ವಚ್ಛ ಭಾರತ್ ಅಭಿಯಾನದಡಿ ಕೇಂದ್ರದಿಂದ ರಾಜ್ಯಕ್ಕೆ ಬಿಡುಗಡೆಯಾಗಿರುವ ಅನುದಾನದ ಕುರಿತು

**ಶ್ರೀ ಕವಟಗಿಮಠ ಮಹಾಂತೇಶ ಮಲ್ಲಿಕಾರ್ಜುನ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೦೪ (೧೩೬೬) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೇಂದ್ರ ಸರ್ಕಾರದ ಸ್ವಚ್ಛ ಭಾರತ್ ಅಭಿಯಾನ ಕಾರ್ಯಕ್ರಮದಡಿ ಕೇಂದ್ರದಿಂದ ರಾಜ್ಯಕ್ಕೆ ಬಿಡುಗಡೆಯಾಗಿರುವ ಅನುದಾನ ನಿಗದಿತ ಉದ್ದೇಶಕ್ಕೆ ಹೊರತುಪಡಿಸಿ ಬೇರೆ ಬೇರೆ ಕಾಮಗಾರಿಗಳಿಗೆ ಬಳಕೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಕಳೆದ ಮೂರು ವರ್ಷಗಳಲ್ಲಿ ಕೇಂದ್ರದಿಂದ ರಾಜ್ಯಕ್ಕೆ ಸ್ವಚ್ಛ ಭಾರತ್ ಅಭಿಯಾನದಡಿ ಬಿಡುಗಡೆಯಾದ ಅನುದಾನವೆಷ್ಟು;

(ಇ) ಕಾರ್ಯಕ್ರಮಗಳು ಯಾವುವು; ಸ್ವಚ್ಛ ಭಾರತ್ ಅಭಿಯಾನದಡಿ ನಿರ್ವಹಿಸಲು ಅವಕಾಶವಿರುವ ಮಾಹಿತಿ ನೀಡುವುದು;

(ಈ) ಸದರಿ ಅಭಿಯಾನದಡಿ ಬೆಳಗಾವಿ ಜಿಲ್ಲೆಗೆ ಕಳೆದ ಮೂರು ವರ್ಷಗಳಲ್ಲಿ ಬಿಡುಗಡೆಯಾದ ಅನುದಾನವೆಷ್ಟು ? (ತಾಲ್ಲೂಕುವಾರು ಮಾಹಿತಿ ನೀಡುವುದು)

## ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಇಲಾಖೆ ಅಧೀನದ ನಿಗಮ/ ಮಂಡಳಿಗಳಲ್ಲಿ ಖಾಲಿಯಿರುವ ಹುದ್ದೆಗಳನ್ನು ನೇಮಕ ಮಾಡುವ ಕುರಿತು

**ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ) :–**

೧೧೦೫ (೧೨೧೯) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಇಲಾಖೆಯ ಅಧೀನದಲ್ಲಿ ಎಷ್ಟು ನಿಗಮ/ಮಂಡಳಿಗಳು ಕಾರ್ಯನಿರ್ವಹಿಸುತ್ತಿವೆ; ಸದರಿ ನಿಗಮ/ಮಂಡಳಿಗಳಲ್ಲಿ ಒಟ್ಟು ಮಂಜೂರಾದ ಹುದ್ದೆಗಳ ಸಂಖ್ಯೆ ಎಷ್ಟು; (ವೃಂದವಾರು ವಿವರ ನೀಡುವುದು)

(ಆ) ಅವುಗಳಲ್ಲಿ ಖಾಯಂ, ಗುತ್ತಿಗೆ ಆಧಾರದ ಮೇಲೆ ಮತ್ತು ದಿನಗೂಲಿ ಆಧಾರದ ಮೇಲೆ ಕಾರ್ಯನಿರ್ವಹಿಸುತ್ತಿರುವವರ ಸಂಖ್ಯೆ ಎಷ್ಟು;

(ಇ) ಪ್ರಸ್ತುತ ಖಾಲಿಯಿರುವ ಹುದ್ದೆಗಳ ಸಂಖ್ಯೆ ಎಷ್ಟು; (ವೃಂದವಾರು ವಿವರ ನೀಡುವುದು)

(ಈ) ಖಾಲಿಯಿರುವ ಹುದ್ದೆಗಳನ್ನು ನೇಮಕ ಮಾಡಲು ಕ್ರಮ ಕೈಗೊಳ್ಳಲಾಗಿದೆಯೇ; ಹಾಗಿದ್ದಲ್ಲಿ, ಸದರಿ ನೇಮಕಾತಿ ಪ್ರಕ್ರಿಯೆಗಳು ಪ್ರಸ್ತುತ ಯಾವ ಹಂತದಲ್ಲಿವೇ; ಮತ್ತು ಯಾವ ಕಾಲಮಿತಿಯಲ್ಲಿ ನೇಮಕಾತಿ ಪ್ರಕ್ರಿಯೆಗಳನ್ನು ಪೂರ್ಣಗೊಳಿಸಲಾಗುವುದು;

(ಉ) ಇಲ್ಲವಾದಲ್ಲಿ, ನೇಮಕಾತಿ ಮಾಡಿಕೊಳ್ಳದಿರಲು ಕಾರಣಗಳೇನು?

## ರಾಜ್ಯದಲ್ಲಿ ಸರ್ಕಾರಿ ಸ್ವಾಮ್ಯದ ಉದ್ದಿಮೆಗಳ ಬಗ್ಗೆ

**ಡಾ॥ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :-**

೧೧೦೬ (೧೩೮೯) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ಸರ್ಕಾರಿ ಸ್ವಾಮ್ಯದ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಉದ್ದಿಮೆಗಳು ಎಷ್ಟು; ಅವು ಯಾವುವು; (ವಿವರ ನೀಡುವುದು)

(ಆ) ಮೇಲ್ಕಂಡ ಉದ್ದಿಮೆಗಳು ಕಳೆದ ಐದು ವರ್ಷಗಳಲ್ಲಿನ Balance Sheet ಅನ್ನು ಒದಗಿಸುವುದು; (ಲಾಭ ಮತ್ತು ನಷ್ಟಗಳ ವಿವರ ಉದ್ದಿಮೆವಾರು ನೀಡುವುದು)

(ಇ) ನಷ್ಟದಲ್ಲಿರುವ ಉದ್ದಿಮೆಗಳನ್ನು ಮುಂದುವರೆಸಿಕೊಂಡು ಹೋಗಲು ಇರುವ ಕಾರಣಗಳೇನು;

(ಈ) ಕಳೆದ ಐದು ವರ್ಷಗಳಲ್ಲಿ ನಷ್ಟದಲ್ಲಿ ನಡೆಯುತ್ತಿರುವ ಉದ್ದಿಮೆಗಳಿಗೆ ಸರ್ಕಾರ ನೀಡಿರುವ ಸಹಾಯ ಧನ ಎಷ್ಟು? (ಉದ್ದಿಮೆವಾರು ವಿವರಗಳನ್ನು ನೀಡುವುದು)

## ರಾಜ್ಯದಲ್ಲಿರುವ ಪಡಿತರ ಚೀಟಿಗಳ ಬಗ್ಗೆ

**ಡಾ॥ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೧೧೦೭ (೧೩೮೪) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯದಲ್ಲಿರುವ ಪಡಿತರ ಚೀಟಿಗಳ ಸಂಖ್ಯೆ ಎಷ್ಟು; ಇವುಗಳಲ್ಲಿ ಅಸಲಿ/ನಕಲಿ ಪಡಿತರ ಚೀಟಿಗಳೆಷ್ಟು;

(ಆ) ಮೇಲ್ಕಂಡ ಕಾರ್ಡ್‌ದಾರರಿಗೆ ಸರ್ಕಾರ ವಿತರಿಸುತ್ತಿರುವ ಪಡಿತರ ಎಷ್ಟು ;

(ಇ) ನಕಲಿ ಕಾರ್ಡ್ ಅಡಿಯಲ್ಲಿ ಸರ್ಕಾರದ ಬೊಕ್ಕಸಕ್ಕೆ ಆಗುತ್ತಿರುವ ನಷ್ಟ ಎಷ್ಟು;

(ಈ) ಪಡಿತರದೊಂದಿಗೆ ಸಕ್ಕರೆ ಬದಲಿಗೆ ಬೆಲ್ಲವನ್ನು ನೀಡಲು ಸರ್ಕಾರ ಉದ್ದೇಶಿಸಿದೆಯೇ; ಉದ್ದೇಶಿಸಿದಲ್ಲಿ, ಯಾವಾಗಿನಿಂದ ಪ್ರಾರಂಭಿಸಲಾಗುವುದು?

## ಅಮೃತ ಯೋಜನೆ ಬಗ್ಗೆ

**ಡಾ॥ ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೧೧೦೮ (೧೩೮೫) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯದಲ್ಲಿ ಅಮೃತ ಯೋಜನೆ ಕೈಗೆತ್ತಿಕೊಂಡಿರುವ ನಗರ/ನಗರ ಪಾಲಿಕೆಗಳು ಯಾವುವು;

(ಆ) ಕಳೆದ ಮೂರು ವರ್ಷಗಳಲ್ಲಿ ಅಮೃತ ಯೋಜನೆಗೆ ಮೇಲ್ಕಂಡ ನಗರ/ನಗರ ಪಾಲಿಕೆಗಳಿಗೆ ಬಿಡುಗಡೆ ಮಾಡಲಾದ ಮೊತ್ತ ಎಷ್ಟು;

(ಇ) ಕೋಲಾರ, ಚಿಕ್ಕಬಳ್ಳಾಪುರ, ಚಿತ್ರದುರ್ಗ, ದಾವಣಗೆರೆ ಮತ್ತು ತುಮಕೂರು, ಈ ಜಿಲ್ಲೆಗಳ ಯಾವ ನಗರ ಪಾಲಿಕೆಗಳಲ್ಲಿ/ನಗರ ಸಭೆಗಳಲ್ಲಿ ಅಮೃತ ಯೋಜನೆ ಜಾರಿಗೊಳಿಸಲಾಗಿದೆ; ಕಳೆದ ಮೂರು ವರ್ಷಗಳಲ್ಲಿ ಖರ್ಚು ಮಾಡಿರುವ ಮೊತ್ತ ಎಷ್ಟು ? (ಸ್ಥಳೀಯ ಸಂಸ್ಥೆವಾರು ವಿವರಗಳನ್ನು ಒದಗಿಸುವುದು)

## ರಾಜ್ಯದಲ್ಲಿರುವ ಸಾರ್ವಜನಿಕ ಸ್ವಾಮ್ಯದ ಉದ್ದಿಮೆಗಳ ಬಗ್ಗೆ

**ಡಾ: ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) :–**

೧೧೧೯ (೧೩೮೮) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿರುವ ಸಾರ್ವಜನಿಕ ಉದ್ದಿಮೆಗಳ ಸಂಖ್ಯೆ ಎಷ್ಟು; ಅವುಗಳನ್ನು ನಿಯಂತ್ರಿಸುವ ಆಡಳಿತ ಇಲಾಖೆ ಯಾವುದು; (ವಿವರ ನೀಡುವುದು)

(ಆ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದಲ್ಲಿ ಸಾರ್ವಜನಿಕ ಉದ್ದಿಮೆಗಳು ಸಿಎಸ್ಆರ್ ಅಡಿಯಲ್ಲಿ ಕ್ರೂಢೀಕರಿಸಲಾದ ಅನುದಾನ ಎಷ್ಟು; (ಉದ್ದಿಮೆವಾರು ಮಾಹಿತಿ ನೀಡುವುದು)

(ಇ) ಕಳೆದ ಮೂರು ವರ್ಷಗಳಿಂದ ಈ ಅನುದಾನದಲ್ಲಿ ಉದ್ದಿಮೆಗಳು ಯಾವ ಯಾವ ಕಾಮಗಾರಿಗಳಿಗೆ/ ಮೂಲ ಸೌಕರ್ಯಗಳಿಗೆ ಯಾವ ಏಜೆನ್ಸಿ ಮೂಲಕ ಅನುದಾನವನ್ನು ಬಿಡುಗಡೆ ಮಾಡಲಾಗಿದೆ; (ವರ್ಷವಾರು, ಉದ್ದಿಮೆವಾರು, ಏಜೆನ್ಸಿವಾರು ಕಾಮಗಾರಿಗಳ ವಿವರ ನೀಡುವುದು)

(ಈ) ಈ ಬಗ್ಗೆ ಸರ್ಕಾರ ಹೊರಡಿಸಿರುವ ಮಾರ್ಗಸೂಚಿಗಳೇನು ?

## ರಾಜ್ಯದಲ್ಲಿರುವ "ಸ್ಮಾರ್ಟ್‌ಸಿಟಿ" ಯೋಜನೆಯ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೧೧೦ (೧೩೮೦) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿ ೨೦೨೦-೨೦೨೧ನೇ ಸಾಲಿನಲ್ಲಿ ಇಲಾಖೆ ವತಿಯಿಂದ ಕೇಂದ್ರ ಮತ್ತು ರಾಜ್ಯ ಸರ್ಕಾರ ಯಾವ ಯಾವ ಯೋಜನೆಗಳನ್ನು ರೂಪಿಸಲಾಗಿದೆ; (ಈ ಯೋಜನೆಗಳ ಪಟ್ಟಿ ನೀಡುವುದು)

(ಆ) ಸದರಿ ಯೋಜನೆಗಳಿಗೆ ಹಂಚಿಕೆ ಮಾಡಲಾಗಿರುವ ಅನುದಾನ ಎಷ್ಟು;

(ಇ) ಬೆಂಗಳೂರು ನಗರದಲ್ಲಿ "ಸ್ಮಾರ್ಟ್‌ಸಿಟಿ" ಯೋಜನೆಯಡಿಯಲ್ಲಿ ಕೆಲವು ಪ್ರದೇಶದಲ್ಲಿ ರಸ್ತೆ ದುರಸ್ಥಿ ಮಾಡುತ್ತಿರುವುದರಿಂದ ವಾಹನಗಳ ದಟ್ಟಣೆ ಹೆಚ್ಚಾಗಿದ್ದು, ಜನರಿಗೆ ತುಂಬಾ ತೊಂದರೆಯಾಗುತ್ತಿದ್ದು ಇದನ್ನು ತಡೆಯಲು ಸರ್ಕಾರ ತೆಗೆದುಕೊಂಡಿರುವ ಕ್ರಮಗಳೇನು; (ವಿವರ ನೀಡುವುದು)

(ಈ) ಈ ದುರಸ್ಥಿಗಳನ್ನು ಸರಿಪಡಿಸುವುದಕ್ಕೆ ತೆಗೆದುಕೊಳ್ಳಲಾಗುವ ಕಾಲಮಿತಿ ಎಷ್ಟು? (ವಿವರ ನೀಡುವುದು)

## ಬೆಂಗಳೂರು ನಗರ ಜಿಲ್ಲೆಯಲ್ಲಿರುವ ಪಡಿತರ ಚೀಟಿಗಳ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೧೧ (೧೩೮೧) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ೨೦೨೦–೨೦೨೧ನೇ ಸಾಲಿನಲ್ಲಿ ಬೆಂಗಳೂರು ನಗರ ಜಿಲ್ಲೆಯಿಂದ ಹೊಸ ಪಡಿತರ ಚೀಟಿಗಾಗಿ ಸ್ವೀಕೃತವಾಗಿರುವ ಅರ್ಜಿಗಳೆಷ್ಟು ಹಾಗೂ ಬಿ.ಪಿ.ಎಲ್ ಮತ್ತು ಎ.ಪಿ.ಎಲ್ ಪಡಿತರ ಚೀಟಿಗಳೆಷ್ಟು; (ವಿವರಗಳನ್ನು ನೀಡುವುದು)

(ಆ) ೨೦೨೦–೨೦೨೧ನೇ ಸಾಲಿನಲ್ಲಿ ಬೆಂಗಳೂರು ನಗರ ಜಿಲ್ಲೆಯ ವ್ಯಾಪ್ತಿಯಲ್ಲಿ ವಿತರಿಸಲಾಗಿರುವ ಪಡಿತರ ಚೀಟಿಗಳೆಷ್ಟು; ಹಾಗೂ ಉಳಿದ ಪಡಿತರ ಚೀಟಿಗಳ ಅರ್ಜಿಗಳನ್ನು ಎಷ್ಟು ಕಾಲಮಿತಿಯೊಳಗೆ ವಿತರಿಸಲಾಗುವುದು; (ಬಿ.ಪಿ.ಎಲ್ ಮತ್ತು ಎ.ಪಿ.ಎಲ್ ಪಡಿತರ ಚೀಟಿಗಳ ವಿವರವನ್ನು ನೀಡುವುದು)

(ಇ) ಬಿ.ಪಿ.ಎಲ್ ಕಾರ್ಡ್ ಪಡೆಯಲು ಸರ್ಕಾರ ವಿಧಿಸುತ್ತಿರುವ ಅರ್ಹತೆಗಳು ಹಾಗೂ ಮಾನದಂಡಗಳೇನು ?

## ರಾಜ್ಯದಲ್ಲಿರುವ ಕೈಗಾರಿಕೆಗಳ ಬಗ್ಗೆ

**ಶ್ರೀ ಎಂ. ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೧೨ (೧೩೮೨) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ಯಾವ ಯಾವ ಕೈಗಾರಿಕಾ ಕಾರಿಡಾರ್‌ಗಳನ್ನು ಯಾವ ಯಾವ ಜಿಲ್ಲೆಗಳಲ್ಲಿ ಪ್ರಾರಂಭಿಸಲಾಗಿದೆ;

(ಆ) ಕೈಗಾರಿಕೆಗಳನ್ನು ಪ್ರಾರಂಭಿಸಲು ಇದುವರೆಗೂ ಎಷ್ಟು ಕಂಪನಿಗಳ ಜೊತೆ ಒಡಂಬಡಿಕೆಯನ್ನು ಮಾಡಿಕೊಳ್ಳಲಾಗಿದೆ; ಸದರಿ ಕಂಪನಿಗಳು ಇದುವರೆಗೂ ಎಷ್ಟು ಪ್ರಮಾಣದಲ್ಲಿ ಹೂಡಿಕೆಯನ್ನು ಮಾಡಿವೆ;

(ಇ) ರಾಜ್ಯದಲ್ಲಿ ಬಂಡವಾಳ ಹೂಡುವ ಕೈಗಾರಿಕೆಗಳಿಗೆ ಯಾವ ರೀತಿಯ ರಿಯಾಯಿತಿಯನ್ನು ಒದಗಿಸಲಾಗುತ್ತದೆ;

(ಈ) ಮಧ್ಯಮ ಕೈಗಾರಿಕೆಗಳು ಪ್ರಾರಂಭಿಸಲು ಸರ್ಕಾರದಿಂದ ಸಹಾಯಧನ ನೀಡಿ ಪ್ರೋತ್ಸಾಹಿಸಲು, ಯಾವ ಯೋಜನೆಗಳನ್ನು ರೂಪಿಸಿದೆ ?

## ರಾಜ್ಯದಲ್ಲಿ ಗಣಿ ಇಲಾಖೆಯಿಂದ ಸಂಗ್ರಹವಾಗುವ ರಾಜಧನದ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೧೩ (೧೩೭೧) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ವಿವಿಧ ಗಣಿಗಾರಿಕೆಯಿಂದ ಸಂಗ್ರಹವಾದ ರಾಜಧನವೆಷ್ಟು; ದಂಡನೆಯ ಮೂಲಕ ಸಂಗ್ರಹವಾದ ಮೊತ್ತವೆಷ್ಟು; (ವರ್ಷವಾರು, ಜಿಲ್ಲಾವಾರು, ತಾಲ್ಲೂಕುವಾರು, ಗಣಿಪ್ರಕಾರವಾರು ಮಾಹಿತಿಯನ್ನು ಒದಗಿಸುವುದು)

(ಆ) ಉಡುಪಿ ಜಿಲ್ಲೆಯಲ್ಲಿ ಡ್ರೋಣ್ ಸರ್ವೆಯ (DRONE SUVEY) ಮೂಲಕ ಗುರುತಿಸಲಾದ ಗಣಿ ಪ್ರದೇಶಗಳು ಯಾವುವು; (ಗಣಿ ಪ್ರದೇಶವಾರು ಮಾಹಿತಿಯನ್ನು ನೀಡುವುದು) Ground Survey ಯ ಮೂಲಕ ಗುರುತಿಸಲಾದ ಗಣಿ ಪ್ರದೇಶಕ್ಕೂ ಡ್ರೋಣ್ ಸರ್ವೆಯ (DRONE SUVEY) ನಲ್ಲಿ ಗುರುತಿಸಲಾದ ಗಣಿ ಪ್ರದೇಶಕ್ಕೂ ವ್ಯತ್ಯಾಸವಿರುವ ಪ್ರಕರಣಗಳ ಸಂಖ್ಯೆ ಎಷ್ಟು; ಪ್ರಕರಣವಾರು ವಿವರ ನೀಡುವುದು)

(ಇ) ರಾಜ್ಯದಲ್ಲಿ ಕಳೆದ ಮೂರು ವರ್ಷಗಳಲ್ಲಿ ವಿವಿಧ ಇಲಾಖೆಗಳ ಕಾಮಗಾರಿಗಳಿಗೆ ನೀಡಲಾದ ಕಟ್ಟಡ ಕಲ್ಲು, ಜೆಲ್ಲಿ ಮತ್ತು ಮರಳು ಇವುಗಳ ಪ್ರಮಾಣವೆಷ್ಟು; ಇವುಗಳಿಂದ ಇಲಾಖೆಗೆ ಬಂದ ರಾಜಧನವೆಷ್ಟು; ಇವುಗಳನ್ನು ತುಲನಾತ್ಮಕವಾಗಿ ಪರಿಶೀಲಿಸಲಾಗಿದೆಯೇ; ಇಲ್ಲವಾದಲ್ಲಿ, ಕೋಟ್ಯಾಂತರ ರೂಪಾಯಿ ರಾಜಧನ ಸೋರಿಕೆಗೆ ಕಾರಣರಾದ ಇಲಾಖಾಧಿಕಾರಿಗಳನ್ನು ಹೊಣೆ ಮಾಡಲಾಗಿದೆಯೇ ? (ಪ್ರಕರಣವಾರು ವಿವರ ನೀಡುವುದು)

## ಕೃಷಿ ಪತ್ತಿನ ಸಹಕಾರ ಸಂಘಗಳು & ಸಿಬ್ಬಂದಿಗಳ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೧೪ (೧೩೬೯) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದಲ್ಲಿ ವಿವಿಧ ಪ್ರಕಾರದ ಕೃಷಿ ಪತ್ತಿನ ಸಹಕಾರ ಸಂಘಗಳ ಸಂಖ್ಯೆ ಎಷ್ಟು; ಅವುಗಳಲ್ಲಿ ಮಂಜೂರಾದ ಹುದ್ದೆಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ಮಾಹಿತಿಯನ್ನು ನೀಡುವುದು) ಕೃಷಿ ಪತ್ತಿನ ಸಹಕಾರ ಸಂಘಗಳ ಮೂಲಕ ಸರಕಾರದಿಂದ ಅನುಷ್ಠಾನವಾಗುತ್ತಿರುವ ಕಾರ್ಯಕ್ರಮಗಳು ಯಾವುವು;

(ಆ) ಉಡುಪಿ ಜಿಲ್ಲೆಯಲ್ಲಿನ ಕೃಷಿ ಪತ್ತಿನ ಸಂಘಗಳು ಯಾವುವು; (ಕೃಷಿ ಪತ್ತಿನ ಸಂಘಗಳ ಹೆಸರು, ವಿಳಾಸ ಮತ್ತು ಇ–ಮೇಲ್ ವಿಳಾಸದ ಮಾಹಿತಿಯನ್ನು ನೀಡುವುದು)

(ಇ) ಈ ಕೃಷಿ ಪತ್ತಿನ ಸಂಘಗಳಲ್ಲಿ ಮಂಜೂರಾದ ಹುದ್ದೆಗಳ ಸಂಖ್ಯೆ ಎಷ್ಟು; ಈ ಸಂಘಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಖಾಯಂ ಮತ್ತು ತಾತ್ಕಾಲಿಕ ನೌಕರರ ಸಂಖ್ಯೆ ಎಷ್ಟು ? (ನೌಕರರ ಹೆಸರು, ಹುದ್ದೆವಾರು ವಿವರ ನೀಡುವುದು)

# ಉಡುಪಿ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರದ ಕಟ್ಟಡದ ಕಾಮಗಾರಿ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೧೫ (೧೩೭೦) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಉಡುಪಿ ಜಿಲ್ಲಾ ಗ್ರಾಹಕ ವ್ಯಾಜ್ಯಗಳ ಪರಿಹಾರ ಆಯೋಗದ ಕಟ್ಟಡವನ್ನು ಯಾವಾಗ ನಿರ್ಮಿಸಲಾಗಿದೆ; ಕಾಮಗಾರಿಯನ್ನು ಕೈಗೊಂಡ ಇಲಾಖೆ ಯಾವುದು; ಗುತ್ತಿಗೆದಾರರ ಹೆಸರು ಮತ್ತು ವಿಳಾಸ ನೀಡುವುದು; ಈ ಕಟ್ಟಡದ ನಿರ್ಮಾಣಕ್ಕೆ ತಗುಲಿದ ವೆಚ್ಚವೆಷ್ಟು; ಸದರಿ ಕಟ್ಟಡವನ್ನು ಯಾವ ಇಲಾಖೆಯಿಂದ ನಿರ್ವಹಣೆ ಮಾಡಲಾಗುತ್ತಿದೆ; (ಮಾಹಿತಿ ಒದಗಿಸುವುದು)

(ಆ) ಸದರಿ ಕಟ್ಟಡದ ಮೊದಲ ಮಹಡಿಯ ಕಾಮಗಾರಿಯ ಕಟ್ಟಡವನ್ನು ಯಾವಾಗ ನಿರ್ಮಿಸಲಾಗಿದೆ; ಕಾಮಗಾರಿಯನ್ನು ಕೈಗೊಂಡ ಇಲಾಖೆ ಯಾವುದು; ಗುತ್ತಿಗೆದಾರರ ಹೆಸರು ಮತ್ತು ವಿಳಾಸ ನೀಡುವುದು; ಈ ಮೊದಲ ಮಹಡಿಯ ಕಟ್ಟಡ ನಿರ್ಮಾಣಕ್ಕೆ ಬಿಡುಗಡೆಯಾದ ಅನುದಾನದ ಮೊತ್ತ ಮತ್ತು ಬಳಕೆಯಾದ ಮೊತ್ತವೆಷ್ಟು; (ವಿವರ ಒದಗಿಸುವುದು)

(ಇ) ಸದರಿ ಕಟ್ಟಡದ ಮೊದಲ ಮಹಡಿ ನಿರ್ಮಾಣ ಕಾಮಗಾರಿ ಸಂಪೂರ್ಣಗೊಳ್ಳದಿರುವುದರಿಂದ ಆಯೋಗದ ಅಧ್ಯಕ್ಷರು, ಸದಸ್ಯರು, ಸಿಬ್ಬಂದಿ ವರ್ಗ, ಪಕ್ಷಗಾರರು ಮತ್ತು ವಕೀಲರಿಗೆ ಸ್ಥಳಾವಕಾಶದ ಕೊರತೆ ಉಂಟಾಗಿರುವುದು ಸರಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಕೈಗೊಂಡ ಕ್ರಮವೇನು; ಕಾಮಗಾರಿಯನ್ನು ಯಾವ ಕಾಲಮಿತಿಯಲ್ಲಿ ಪೂರ್ಣಗೊಳಿಸಲಾಗುವುದು ?

## ಆನ್‌ಲೈನ್‌ನಲ್ಲಿ ಆಹಾರ ಪದಾರ್ಥಗಳ ಖರೀದಿಯ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೧೬ (೧೩೭೩) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಆಹಾರ ಪದಾರ್ಥಗಳನ್ನು ಆನ್‌ಲೈನ್‌ನಲ್ಲಿ ಮಾರಾಟ ಮಾಡಲು ನಿಗದಿ ಪಡಿಸಿರುವ ಮಾರ್ಗಸೂಚಿಗಳಾವುವು; ಆಹಾರ ಪದಾರ್ಥಗಳ ಗುಣ ನಿಯಂತ್ರಣಕ್ಕಾಗಿ ಸರಕಾರದಿಂದ ಕೈಗೊಳ್ಳಲಾದ ಕ್ರಮಗಳು ಯಾವುವು; (ಮಾರ್ಗಸೂಚಿಯ ಪ್ರತಿಯನ್ನು ಒದಗಿಸುವುದು)

(ಆ) ಗ್ರಾಹಕರು ಆನ್‌ಲೈನ್‌ನಲ್ಲಿ ಖರೀದಿಸಿದ ಆಹಾರ ಪದಾರ್ಥಗಳ ಗುಣಮಟ್ಟದ ಕುರಿತು ಕುಂದುಕೊರತೆಯನ್ನು ದಾಖಲಿಸಬೇಕಾದ ಪ್ರಾಧಿಕಾರ ಯಾವುದು; (ಪ್ರಾಧಿಕಾರದ ವಿಳಾಸ ಮತ್ತು ಸಂಪರ್ಕ ಸಂಖ್ಯೆಯನ್ನು ಒದಗಿಸುವುದು)

(ಇ) ಕಳೆದ ಮೂರು ವರ್ಷಗಳಲ್ಲಿ ಈ ಕುರಿತು ಗ್ರಾಹಕರಿಂದ ದಾಖಲಾದ ಪ್ರಕರಣಗಳು ಎಷ್ಟು; ದೋಷಾರೋಪಣೆ ಸಾಬೀತಾದ ಮತ್ತು ಸಾಬೀತಾಗದ ಪ್ರಕರಣಗಳ ಸಂಖ್ಯೆ ಎಷ್ಟು; ಇಲಾಖೆಯಿಂದ ಪತ್ತೆಹಚ್ಚಲಾದ ಪ್ರಕರಣಗಳ ಸಂಖ್ಯೆ ಎಷ್ಟು? (ಜಿಲ್ಲಾವಾರು ಮಾಹಿತಿಯನ್ನು ಒದಗಿಸುವುದು)

## ಸ್ಥಳೀಯ ಅಗತ್ಯತೆಗೆ ಅನುಗುಣವಾಗಿ ಪಡಿತರ ವಿತರಣೆಯ ಕುರಿತು

**ಶ್ರೀ ಕೆ. ಪ್ರತಾಪಚಂದ್ರ ಶೆಟ್ಟಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೧೭ (೧೩೭೪) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ದಕ್ಷಿಣ ಕನ್ನಡ ಮತ್ತು ಉಡುಪಿ ಜಿಲ್ಲೆಯಲ್ಲಿ ಸಹಕಾರ ಸಂಘದ ಅಧೀನದ ಪಡಿತರ ವಿತರಣಾ ಕೇಂದ್ರಗಳು ಮತ್ತು ಖಾಸಗಿ ಪಡಿತರ ವಿತರಣಾ ಕೇಂದ್ರಗಳ ಸಂಖ್ಯೆ ಎಷ್ಟು; ಅವುಗಳು ಯಾವುವು; (ಜಿಲ್ಲಾವಾರು ಮತ್ತು ತಾಲ್ಲೂಕುವಾರು ಮಾಹಿತಿಯನ್ನು ಒದಗಿಸುವುದು) ಪಡಿತರ ವಿತರಣಾ ಕೇಂದ್ರದ ಮಂಜೂರಾತಿಗೆ ಇರುವ ಮಾನದಂಡಗಳು ಯಾವುವು; (ಆದೇಶದ ಪ್ರತಿಯನ್ನು ಒದಗಿಸುವುದು)

(ಆ) ಎಪಿಎಲ್ ಮತ್ತು ಬಿಪಿಎಲ್ ಪಡಿತರ ಚೀಟಿದಾರರಿಗೆ ವಿತರಿಸಲಾಗುತ್ತಿರುವ ಪಡಿತರಗಳು ಯಾವುವು; ಅವುಗಳ ಪ್ರಮಾಣವೆಷ್ಟು; ಇವುಗಳ ಗುಣಮಟ್ಟದ ಪರಿಶೀಲನೆಗೆ ಸಮಿತಿಯನ್ನು ರಚಿಸಲಾಗುತ್ತಿದೆಯೇ; ಕಳಪೆ ಗುಣಮಟ್ಟದ ಪಡಿತರದ ವಿತರಣೆ ತಪ್ಪಿಸಲು ಸರಕಾರ ಕೈಗೊಂಡ ಕ್ರಮಗಳು ಯಾವುವು;

(ಇ) ಉಡುಪಿ ಮತ್ತು ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಸ್ಥಳಿಯ ಕೆಂಪು ಅಕ್ಕಿ **(Boiled Rice)** ಬೇಡಿಕೆಯಿದ್ದು, ಸ್ಥಳೀಯವಾಗಿ ಬೆಳೆದ ಈ ಕೆಂಪು ಅಕ್ಕಿ **(Boiled Rice)** ಪಡಿತರ ವಿತರಣೆಗೆ ಸರಕಾರ ಕ್ರಮವಹಿಸುವುದೇ?

## ಟೊಯೋಟೊ ಕಿರ್ಲೋಸ್ಕರ್ ಕಾರ್ಖಾನೆಯ ಸ್ಥಗಿತಗೊಂಡಿರುವ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ) :–**

೧೧೧೮ (೧೪೦೩) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಿಡದಿ ಬಳಿ ಇರುವ ಟೊಯೋಟೊ ಕಿರ್ಲೋಸ್ಕರ್ ಕಾರ್ಖಾನೆಯು ಸ್ಥಗಿತಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಬಂದಿದ್ದಲ್ಲಿ, ಕಾರ್ಖಾನೆಯ ಆಡಳಿತ ವರ್ಗ ಹಾಗೂ ಕಾರ್ಮಿಕ ಸಂಘಟನೆಗಳನ್ನು ಕರೆದು ಸಂಧಾನ ಏರ್ಪಡಿಸಿ, ಕಾರ್ಖಾನೆ ಸಾರಾಗವಾಗಿ ನಡೆಯಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು;

(ಇ) ಕಾರ್ಖಾನೆಯು ಬಂದ್ ಆಗಿರುವುದರಿಂದ ಸರಬರಾಜುದಾರರು ಹಾಗೂ ಇತರರಿಗೆ ಅನಾನೂಕೂಲವಾಗುತ್ತಿರುವುದನ್ನು ಸರ್ಕಾರ ಗಮನಿಸಿದೆಯೇ;

(ಈ) ಕಾರ್ಖಾನೆಯನ್ನು ಪ್ರಾರಂಭಿಸಲು ಸರ್ಕಾರವು ಅತೀ ಜರೂರು ಕ್ರಮ ಕೈಗೊಳ್ಳುವುದೇ ? (ವಿವರ ನೀಡುವುದು)

## ಅಡುಗೆ ಅನಿಲ ದುಬಾರಿಯಾಗಿರುವ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ):–**

೧೧೧೯ (೧೪೦೪) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಅಡುಗೆ ಅನಿಲ ದುಬಾರಿಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಕಳೆದ ೨ ತಿಂಗಳಿಂದ ಅಡುಗೆ ಅನಿಲದ ಬೆಲೆಯು ರೂ.೧೨೫/– ಹೆಚ್ಚಾಗಿದ್ದು, ಜನ ಸಾಮಾನ್ಯರಿಗೆ ಅಡುಗೆ ಅನಿಲ ಖರೀದಿ ಮಾಡಲು ಕಷ್ಟಕರವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಅಡುಗೆ ಅನಿಲ ದರ ನೀಗಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ?

## ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ):–**

೧೧೨೦ (೧೪೦೫) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕರ್ನಾಟಕ ರಾಜ್ಯ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿಯಿಂದ ನಡೆಯುತ್ತಿರುವ ಕಾಮಗಾರಿಗಳಾವುವು;

(ಆ) ಕಳೆದ ೨ ವರ್ಷಗಳಿಂದ ಯಾವ ಯಾವ ನಗರಗಳಲ್ಲಿ ಕಾಮಗಾರಿ ಕೈಗೊಳ್ಳಲಾಗಿದೆ ? (ವಿವರ ಒದಗಿಸುವುದು)

## ಸಣ್ಣ ಕೈಗಾರಿಕೆ ಇಲಾಖೆ ವತಿಯಿಂದ ಕೈಗಾರಿಕಾ ಶೆಡ್‌ಗಳ ಬಗ್ಗೆ

**ಶ್ರೀ ಪ್ರಕಾಶ್ ಕೆ. ರಾಥೋಡ್ (ನಾಮನಿರ್ದೇಶನ):–**

೧೧೨೧ (೧೪೦೬) ಮಾನ್ಯ ಸಣ್ಣ ಕೈಗಾರಿಕೆ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸಣ್ಣ ಕೈಗಾರಿಕೆ ಇಲಾಖೆ ವತಿಯಿಂದ ನಿರ್ಮಾಣ ಮಾಡಿರುವ ಕೈಗಾರಿಕಾ ಶೆಡ್‌ಗಳೆಷ್ಟು;

(ಆ) ಯಾವ ಯಾವ ಜಿಲ್ಲೆಯಲ್ಲಿ ಕೈಗಾರಿಕಾ ಶೆಡ್‌ಗಳನ್ನು ನಿರ್ಮಿಸಲಾಗಿದೆ; ಹಾಲಿ ಹಂಚಿಕೆಗೆ ಸಿದ್ಧವಾಗಿರುವ ಶೆಡ್‌ಗಳೆಷ್ಟು; (ವಿವರ ಒದಗಿಸುವುದು)

(ಇ) ಕೈಗಾರಿಕಾ ಶೆಡ್‌ಗಳನ್ನು ಉದ್ದಿಮೆದಾರರಿಗೆ ಯಾವಾಗ ಹಂಚಿಕೆ ಮಾಡಲಾಗುವುದು; ಹಂಚಿಕೆಗೆ ಇರುವ ಮಾನದಂಡಗಳೇನು ?

## ಬಿ.ಪಿ.ಎಲ್. ಪಡಿತರ ಚೀಟಿ ಪಡೆಯಲು ಸರ್ಕಾರದ ಮಾನದಂಡಗಳೇನು

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೧೨೨ (೧೨೧೧) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬಿ.ಪಿ.ಎಲ್. ಪಡಿತರ ಚೀಟಿ ಪಡೆಯಲು ಇರುವ ಸರ್ಕಾರದ ಮಾನದಂಡವೇನು;

(ಆ) ರಾಜ್ಯದಲ್ಲಿ ಬಿ.ಪಿ.ಎಲ್. ಕಾರ್ಡ್‌ಗಳನ್ನು ಪಡೆದಿರುವವರ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)

(ಇ) ಸರ್ಕಾರ ಪಡಿತರರಿಗೆ ಜೋಳ, ರಾಗಿ, ತೊಗರಿ ನೀಡಲು ಬಯಸಿದೆಯೇ; ಇವುಗಳನ್ನು ನೀಡುವುದರಿಂದ ಅಕ್ಕಿ ಪ್ರಮಾಣ ಕಡಿಮೆ ಮಾಡುವ ಆಲೋಚನೆ ಸರ್ಕಾರಕ್ಕಿದೆಯೇ; ಇದ್ದಲ್ಲಿ, ಯಾವ ರೀತಿ ನೀಡಲಾಗುವುದು;

(ಈ) ಹೊಸ ನ್ಯಾಯಬೆಲೆ ಅಂಗಡಿಗಳನ್ನು ಮಂಜೂರು ಮಾಡುವ ಆಲೋಚನೆ ಸರ್ಕಾರದ ಮುಂದಿದೆಯೇ;

(ಉ) ನ್ಯಾಯಬೆಲೆ ಅಂಗಡಿಗಳಲ್ಲಿ ಬಯೋಮೆಟ್ರಿಕ್ ಪಡೆಯಲು ಕಾರ್ಡ್‌ದಾರರಿಂದ ಹಣ ಪಡೆಯುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು ? (ಜಿಲ್ಲಾವಾರು ವಿವರ ನೀಡುವುದು)

## ರಾಜ್ಯದಲ್ಲಿ ಗಣಿ ಮತ್ತು ಭೂ ವಿಜ್ಞಾನ ಇಲಾಖೆಯಿಂದ ಪರವಾನಗಿ ಪಡೆದು ಸಕ್ರಮ ಗಣಿಗಾರಿಕೆ ನಡೆಸುತ್ತಿರುವ ಕ್ರಷರ್‌ಗಳ ಸಂಖ್ಯೆ ಎಷ್ಟು

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೧೨೩ (೧೨೧೦) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಗಣಿ ಮತ್ತು ಭೂ ವಿಜ್ಞಾನ ಇಲಾಖೆಯಿಂದ ಪರವಾನಗಿ ಪಡೆದು ಸಕ್ರಮ ಗಣಿಗಾರಿಕೆ ನಡೆಸುತ್ತಿರುವ ಕ್ರಷರ್‌ಗಳ ಸಂಖ್ಯೆ ಎಷ್ಟು; ಅಕ್ರಮವಾಗಿ ಕ್ರಷರ್‌ಗಳನ್ನು ನಡೆಸುತ್ತಿರುವ ವಿವರ ನೀಡುವುದು; ಈ ಕ್ರಷರ್‌ಗಳಿಗೆ ಕ್ವಾರೆಗಳಿಂದ ಯಾವ ರೀತಿ ಕಚ್ಚಾ ವಸ್ತುಗಳನ್ನು ಸಾಗಾಣಿಕೆ ಮಾಡಲಾಗುತ್ತಿದೆ; (ವಿವರ ನೀಡುವುದು)

(ಆ) ಗಣಿಗಾರಿಕೆಯನ್ನು ಪರಿಶೀಲನೆ ಮಾಡಲು ಪರವಾನಗೆ ನೀಡಲು ಪ್ರತಿ ಜಿಲ್ಲೆಗೆ ನೇಮಕ ಮಾಡಲಾಗಿರುವ ಸಿಬ್ಬಂದಿಯ ಸಂಖ್ಯೆ ಎಷ್ಟು; ಈ ಸಿಬ್ಬಂದಿಗೆ ಜಿಲ್ಲಾಡಳಿತ ಹಾಗೂ ಪೊಲೀಸ್ ಇಲಾಖೆಯೊಂದಿಗೆ ಕೋ-ಆರ್ಡಿನೇಷನ್ ಮಾಡಲಾಗಿದೆಯೇ;

(ಇ) ಇದುವರೆಗೆ ಎಷ್ಟು ಜನರ ಮೇಲೆ ಪ್ರಕರಣವನ್ನು ದಾಖಲಿಸಲಾಗಿದೆ; ಅದರಲ್ಲಿ ಕಾರ್ಮಿಕರೆಷ್ಟು; ಮಾಲಿಕರೆಷ್ಟು;

(ಈ) ಕಲ್ಲು ಗಣಿಗಾರಿಕೆಯಲ್ಲಿ ಕೆಲಸ ಮಾಡುತ್ತಿರುವ ಕಾರ್ಮಿಕರ ಬಗ್ಗೆ ಕಾರ್ಮಿಕ ಇಲಾಖೆಯು ಪರಿಶೀಲಿಸಿದೆಯೇ; ಅವರಿಗೆ ನ್ಯಾಯವಾದ ಸಂಬಳ, ಶೌಚಾಲಯ, ಕುಡಿಯುವ ನೀರಿನ ವ್ಯವಸ್ಥೆ ಬಗ್ಗೆ ಜಿಲ್ಲಾಡಳಿತ ಅಥವಾ ಕಾರ್ಮಿಕ ಇಲಾಖೆ ಕೈಗೊಂಡ ಕ್ರಮಗಳೇನು;

(ಉ) ಕಲ್ಲು ಗಣಿಗಾರಿಕೆಯಲ್ಲಿ ಕೆಲಸ ಮಾಡುವ ಕಾರ್ಮಿಕರ ಮಕ್ಕಳ ವಿದ್ಯಾಭ್ಯಾಸಕ್ಕೆ ಸರ್ಕಾರ ಯಾವ ಕ್ರಮವನ್ನು ಕೈಗೊಂಡಿದೆ; ಕೈಗೊಳ್ಳದೇ ಇದ್ದಲ್ಲಿ, ಕಾರ್ಮಿಕ ಇಲಾಖೆಯ ಅಧಿಕಾರಿಗಳ ಮೇಲೆ ತೆಗೆದುಕೊಂಡ ಕ್ರಮಗಳೇನು ?

## ರಾಜ್ಯದ ನಗರಸಭೆ ಮತ್ತು ಪುರಸಭೆಗಳ ವ್ಯಾಪ್ತಿಯಲ್ಲಿ ಮಹಾನಗರ ಪಾಲಿಕೆಗಿಂತಲೂ ದುಪ್ಪಟ್ಟು ತೆರಿಗೆ ವಸೂಲು ಮಾಡಿತ್ತಿರುವ ಕುರಿತು

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೧೨೪ (೧೨೦೯) ಮಾನ್ಯ ಪೌರಾಡಳಿತ ಹಾಗೂ ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದ ನಗರಸಭೆ ಮತ್ತು ಪುರಸಭೆಗಳ ವ್ಯಾಪ್ತಿಯಲ್ಲಿ ಮಹಾನಗರ ಪಾಲಿಕೆಗಿಂತ ದುಪ್ಪಟ್ಟು ತೆರಿಗೆಯನ್ನು ವಸೂಲು ಮಾಡಿತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬಂದಿದ್ದಲ್ಲಿ, ಇದನ್ನು ತಡೆಯಲು ಕೈಗೊಂಡ ಕ್ರಮಗಳೇನು ; (ವಿವರ ನೀಡುವುದು)

(ಇ) ನಗರಸಭೆ–ಪುರಸಭೆಗಳು ಆಸ್ತಿ ತೆರಿಗೆಯನ್ನು ತೆಗೆದುಕೊಳ್ಳಲು ಇರುವ ಮಾನದಂಡಗಳೇನು ; (ಪೂರ್ಣ ವಿವರ ಒದಗಿಸುವುದು)

(ಈ) ೨೦೧೯ ರಿಂದ ಇಲ್ಲಿಯವರೆಗೆ ಪುರಸಭೆ–ನಗರಸಭೆಗಳಿಂದ ವಸೂಲಿ ಮಾಡಿದ ತೆರಿಗೆ ಮೊತ್ತ ಎಷ್ಟು ? (ಜಿಲ್ಲಾವಾರು ಮಾಹಿತಿ ನೀಡುವುದು)

## ಶಿವಮೊಗ್ಗ ಜಿಲ್ಲೆಯಲ್ಲಿ ಇರುವ ಕಲ್ಲುಕ್ವಾರಿಗಳ ಕುರಿತು

**ಶ್ರೀ ಆರ್. ಪ್ರಸನ್ನ ಕುಮಾರ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೨೫ (೧೨೦೮) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಶಿವಮೊಗ್ಗ ಜಿಲ್ಲೆಯಲ್ಲಿ ಇರುವ ಕಲ್ಲು ಕ್ವಾರೆಗಳ ಸಂಖ್ಯೆ ಎಷ್ಟು ; ಇವುಗಳಲ್ಲಿ ಪರವಾನಗಿ ಪಡೆದಿರುವ, ಪರವಾನಗಿ ಇಲ್ಲದೆ ನಡೆಸುತ್ತಿರುವ ಕಲ್ಲು ಕ್ವಾರೆಗಳ ಸಂಖ್ಯೆ ಎಷ್ಟು ; (ಪೂರ್ಣ ವಿವರ ನೀಡುವುದು)

(ಆ) ಶಿವಮೊಗ್ಗ ಜಿಲ್ಲೆಯಲ್ಲಿ ಅರಣ್ಯ ಮತ್ತು ಸರ್ಕಾರಿ ಭೂಮಿಗಳಲ್ಲಿ ಅಕ್ರಮವಾಗಿ ಕಲ್ಲುಗಣಿಗಾರಿಕೆ ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಇ) ಶಿವಮೊಗ್ಗ ಜಿಲ್ಲೆಯ ಹುಣಸೋಡು ಕಲ್ಲುಕ್ವಾರೆಯಲ್ಲಿ ಇತ್ತೀಚೆಗೆ ಸಂಭವಿಸಿದ ದುರಂತದಲ್ಲಿ ಸಾವನ್ನಪ್ಪಿದ ಕಾರ್ಮಿಕರ ಕುಟುಂಬಗಳಿಗೆ ಸರ್ಕಾರದಿಂದ ಪರಿಹಾರಧನ ನೀಡಲಾಗಿದೆಯೇ ; ಹೌದಾದಲ್ಲಿ ನೀಡಲಾದ ಪರಿಹಾರಧನದ ಮೊತ್ತವೆಷ್ಟು ;

(ಈ) ಶಿವಮೊಗ್ಗ ಜಿಲ್ಲೆಯ ಹುಣಸೋಡು ಕಲ್ಲುಕ್ವಾರೆಯಲ್ಲಿ ಇತ್ತೀಚೆಗೆ ಸಂಭವಿಸಿದ ಸ್ಫೋಟಕ್ಕೆ ಸಂಬಂಧಿಸಿದಂತೆ, ಸರ್ಕಾರ ಯಾರ ನೇತೃತ್ವದಲ್ಲಿ ತನಿಖೆಯನ್ನು ಆರಂಭಿಸಿದೆ ? (ಸಂಪೂರ್ಣ ವಿವರ ನೀಡುವುದು)

## ಬೀದರ್ ಜಿಲ್ಲೆಯಲ್ಲಿರುವ ನಂದಿನಿ ಪಾರ್ಲರ್/ಬೂತ್‌ಗಳ ಕುರಿತು

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೨೬ (೧೨೦೨) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ಇರುವ ಒಟ್ಟು ನಂದಿನಿ ಬೂತ್‌ಗಳು ಎಷ್ಟು; ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿರುವ ಒಟ್ಟು ನಂದಿನಿ ಬೂತ್‌ಗಳೆಷ್ಟು ; (ತಾಲ್ಲೂಕುವಾರು ಮಾಹಿತಿ ಒದಗಿಸುವುದು)

(ಆ) ಬೀದರ್ ಜಿಲ್ಲೆಯಲ್ಲಿ ನಗರ ಹಾಗೂ ಗ್ರಾಮೀಣ ಪ್ರದೇಶಗಳಲ್ಲಿ ನಂದಿನಿ ಬೂತ್/ಪಾರ್ಲರ್‌ಗಳನ್ನು ಹೊಸದಾಗಿ ಪ್ರಾರಂಭಿಸಲು ಇರುವ ಮಾನದಂಡಗಳೇನು ; ಫ್ರಾಂಚೈಸಿಯನ್ನು ಪಡೆಯುವವರಿಗೆ ಸಿಗುವ ಸೌಲಭ್ಯಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಇ) ನಂದಿನಿ ಬೂತ್/ಪಾರ್ಲರ್‌ಗಳನ್ನು ಎಷ್ಟು ಕಿ.ಮೀ.ಗೆ ಅಂತರದಲ್ಲಿ ನಗರ/ಗ್ರಾಮೀಣ ಭಾಗದಲ್ಲಿ ಸ್ಥಾಪಿಸಲು ಅವಕಾಶವಿದೆ ; ಇದಕ್ಕೆ ಇರುವ ಮನದಂಡಗಳೇನು ; (ವಿವರ ನೀಡುವುದು)

(ಈ) ಈ ನಂದಿನಿ ಬೂತ್/ಪಾರ್ಲರ್‌ಗಳಿಂದ ಸರ್ಕಾರಕ್ಕೆ ಬರುವ ಆದಾಯ ಎಷ್ಟು ? (ಬೂತ್/ಪಾರ್ಲರ್‌ಗಳವಾರು ತಾಲ್ಲೂಕುವಾರು ಮಾಹಿತಿ ನೀಡುವುದು)

## ಒಳಚರಂಡಿ ಮತ್ತು ಕುಡಿಯುವ ನೀರನ್ನು ವ್ಯವಸ್ಥೆ ಕಲ್ಪಿಸುವ ಕುರಿತು

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೨೭ (೧೨೦೧) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ನಗರಲ್ಲಿ ಒಳಚರಂಡಿ ಮತ್ತು ಕುಡಿಯುವ ನೀರು ವ್ಯವಸ್ಥೆ ಕಲ್ಪಿಸುವ ಕಾರ್ಯಕ್ಕೆ ಕೈಗೆತ್ತಿಕೊಂಡಿರುವ ಕಾಮಗಾರಿಗಳು ಯಾವುವು ;

(ಆ) ಒಳಚರಂಡಿ ನಿರ್ಮಾಣ ಹಂತ ೧ರ ಕಾಮಗಾರಿ ಪೂರ್ಣವಾಗಿದ್ದರೂ ಸಾರ್ವಜನಿಕರಿಗೆ ಉಪಯೋಗಕ್ಕೆ ಬಾರದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಈ ಯೋಜನೆ ವಿಫಲವಾಗಲು ಕಾರಣಗಳೇನು ;

(ಇ) ಅಮೃತ್ ಯೋಜನೆ ಅಡಿಯಲ್ಲಿ ೩ ಹಂತಗಳಲ್ಲಿನ ಕಾಮಗಾರಿಗಳ ಪೈಕಿ ಕೈಗೆತ್ತಿಕೊಂಡ ಕಾಮಗಾರಿಗಳು ಪೂರ್ಣಗೊಂಡಿದೆಯೇ ; ಇದಕ್ಕೆ ತಗುಲಿರುವ ವೆಚ್ಚ ಎಷ್ಟು ; ಈ ಕಾಮಗಾರಿಗಳ ನಿರ್ವಹಣೆ ಸಮರ್ಪಕ ರೀತಿಯಲ್ಲಿ ಆಗದಿರುವುದಕ್ಕೆ ಕಾರಣಗಳೇನು ;

(ಈ) ಬೀದರ್ ನಗರಕ್ಕೆ ಕುಡಿಯುವ ನೀರಿನ್ನು ಪೂರೈಕೆ ಮಾಡಲು ಎಷ್ಟು ಹಂತದ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ; ಈ ಕಾಮಗಾರಿಗಳಿಗೆ ಆಗಿರುವ ವೆಚ್ಚ ಎಷ್ಟು ; ಕಾಮಗಾರಿಗಳು ಯಾವ ಹಂತದಲ್ಲಿದೆ ;

(ಉ) ಬೀದರ್ ನಗರಕ್ಕೆ ಪ್ರತಿ ದಿನ ಕುಡಿಯುವ ನೀರು ಲಭ್ಯವಾಗದೇ ಇರಲು ಕಾರಣಗಳೇನು ; ಪ್ರತಿ ದಿನ ಕುಡಿಯುವ ನೀರು ಪೂರೈಕೆ ಮಾಡಲು ಕೈಗೊಂಡಿರುವ ಶಾಶ್ವತ ಕ್ರಮಗಳೇನು ?

## ನಗರ ಸ್ಥಳೀಯ ಸಂಸ್ಥೆಗಳಲ್ಲಿ ಕೈಗೊಳ್ಳಲಾದ ಕಾಮಗಾರಿಗಳ ಕುರಿತು

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೨೮ (೧೯೮) ಮಾನ್ಯ ಪೌರಾಡಳಿತ ಹಾಗೂ ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕಳೆದ ೨ ವರ್ಷಗಳಿಂದ ಬೀದರ್ ನಗರ ಸಭೆ/ಸ್ಥಳೀಯ ಸಂಸ್ಥೆಗಳಿಂದ ಕೈಗೊಳ್ಳಲಾಗಿರುವ ಕಾಮಗಾರಿಗಳಾವುವು ; ಸದರಿ ಕಾಮಗಾರಿಗಳು ಯಾವ ಯಾವ ಹಂತದಲ್ಲಿದೆ ; (ಅನುದಾನದೊಂದಿಗೆ ವಾರ್ಡ್‌ವಾರು, ಕಾಮಗಾರಿವಾರು ಸ್ಥಳೀಯ ಸಂಸ್ಥೆಗಳವಾರು ಸಂಪೂರ್ಣ ಮಾಹಿತಿ ನೀಡುವುದು)

(ಆ) ಬೀದರ್ ನಗರಸಭೆ/ಸ್ಥಳೀಯ ಸಂಸ್ಥೆಗಳಲ್ಲಿ ಯಾವುದೇ ಕಾಮಗಾರಿಗಳನ್ನು ಕೈಗೊಳ್ಳದಿರುವ ವಾರ್ಡ್‌ಗಳಾವುವು ; (ಮಾಹಿತಿ ನೀಡುವುದು)

(ಇ) ನಗರ ಸ್ಥಳೀಯ ಸಂಸ್ಥೆಗಳಲ್ಲಿನ ಹೊಸ ವಾರ್ಡ್‌ಗಳಿಗೆ ಒಳಚರಂಡಿ ಮತ್ತು ನೀರು ಸರಬರಾಜು ಮಾಡುವ ಬಗ್ಗೆ ಅಂದಾಜು ಪಟ್ಟಿಯನ್ನು ಸರ್ಕಾರ ಸಿದ್ಧಪಡಿಸಿದೆಯೇ ; ಹಾಗಿದ್ದಲ್ಲಿ, ಯಾವ ವಾರ್ಡ್‌ಗಳಲ್ಲಿ ಯಾವ ಕಾಮಗಾರಿಗಳನ್ನು ಕೈಗೊಳ್ಳಲಾಗುವುದು ? (ವಾರ್ಡ್‌ವಾರು, ಕಾಮಗಾರಿವಾರು ಅನುದಾನಗಳ ವಿವರಗಳೊಂದಿಗೆ ಮಾಹಿತಿ ನೀಡುವುದು)

## ಬೀದರ್ ನಗರ/ಸ್ಥಳೀಯ ಸಂಸ್ಥೆಗಳಲ್ಲಿ ಘನತ್ಯಾಜ್ಯ ನಿರ್ವಹಣೆ ಕುರಿತು

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೨೯ (೧೧೯೯) ಮಾನ್ಯ ಪೌರಾಡಳಿತ ಹಾಗೂ ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬೀದರ್ ಜಿಲ್ಲೆಯ ನಗರ/ಸ್ಥಳೀಯ ಸಂಸ್ಥೆಗಳಲ್ಲಿ ವೈಜ್ಞಾನಿಕವಾಗಿ ಘನತ್ಯಾಜ್ಯ ಸಮರ್ಪಕವಾಗಿ ನಿರ್ವಹಣೆ ಮಾಡಲಾಗುತ್ತಿದೆಯೇ ; (ನಗರ ಸಭೆ ಸ್ಥಳೀಯ ಸಂಸ್ಥೆಗಳವಾರು ಮಾಹಿತಿ ನೀಡುವುದು)

(ಆ) ನಗರಸಭೆ, ಸ್ಥಳೀಯ ಸಂಸ್ಥೆಗಳಲ್ಲಿ ಎಷ್ಟು ಪ್ರಮಾಣದ ಘನತ್ಯಾಜ್ಯ ಘಟಕಗಳು ಕಾರ್ಯನಿರ್ವಹಿಸುತ್ತಿವೆ ; (ವಿವರ ಒದಗಿಸುವುದು)

(ಇ) ಕಳೆದ ೩ ವರ್ಷಗಳಲ್ಲಿ ಸರ್ಕಾರದಿಂದ ಇದಕ್ಕಾಗಿ ಬಿಡುಗಡೆ ಮಾಡಲಾದ ಅನುದಾನವೆಷ್ಟು ; ಈ ಅನುದಾನದಲ್ಲಿ ಬಳಕೆ ಮಾಡಲಾದ ಹಣ ಎಷ್ಟು ? (ವರ್ಷವಾರು ಮಾಹಿತಿ ನೀಡುವುದು)

## ಪಡಿತರ ಆಹಾರ ವಿತರಣೆ ಮಾಡುವ ಬಗ್ಗೆ

**ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೩೦ (೧೨೦೦) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಬೀದರ್ ಜಿಲ್ಲೆಯಲ್ಲಿ ಸಾರ್ವಜನಿಕ ಪಡಿತರ ಆಹಾರವನ್ನು ವಿತರಿಸಲು ಬಯೋಮೆಟ್ರಿಕ್ ಯಂತ್ರಗಳನ್ನು ಅಳವಡಿಸಿರುವುದರಿಂದ ವಯೋವೃದ್ಧರ ಹಾಗೂ ಹಿರಿಯ ನಾಗರಿಕ ಹೆಬ್ಬೆಟ್ಟಿನ ಗುರುತನ್ನು ಬಯೊಮೆಟ್ರಿಕ್ ಯಂತ್ರ ಗುರುತಿಸಲು ಸಾಧ್ಯವಾಗದೇ ಇರುವ ಪ್ರಯುಕ್ತ ಪಡಿತರ ಆಹಾರ ವಿತರಿಸಲಾಗುತ್ತಿಲ್ಲ ಎಂಬುದು ಸರ್ಕಾರದ ಗಮನಕ್ಕೆ ಬಂದಿದೆಯೇ ; (ಮಾಹಿತಿ ನೀಡುವುದು)

(ಆ) ಹಾಗಿದ್ದಲ್ಲಿ, ವಯೋವೃದ್ಧರು ಹಾಗೂ ಹಿರಿಯ ನಾಗರಿಕರಿಗೆ ಬಯೊಮೆಟ್ರಿಕ್ ಯಂತ್ರದ ಬದಲಾಗಿ ಬೇರೆ ಪರ್ಯಾಯವಾಗಿ ಯಾವ ಮಾರ್ಗಗಳನ್ನು ಅನುಸರಿಸಿ ಪಡಿತರ ಆಹಾರ ವಿತರಿಸಲಾಗುವುದು ? (ಸಂಪೂರ್ಣ ಮಾಹಿತಿ ನೀಡುವುದು)

## ಪುರಸಭೆ ವ್ಯಾಪ್ತಿಯಲ್ಲಿರುವ ಹಲವಾರು ಬಡಾವಣೆಗಳಿಗೆ ಒಳಚರಂಡಿ ವ್ಯವಸ್ಥೆಗಳ ಕುರಿತು

**ಶ್ರೀ ಹೆಚ್.ಎಂ. ರಮೇಶ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೩೧ (೧೩೫೮) ಮಾನ್ಯ ಪೌರಾಡಳಿತ ಹಾಗೂ ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಪುರಸಭೆ ವ್ಯಾಪ್ತಿಯಲ್ಲಿರುವ ಹಲವಾರು ಬಡಾವಣೆಗಳಲ್ಲಿ ಒಳಚರಂಡಿ ವ್ಯವಸ್ಥೆ ಮತ್ತು ರಸ್ತೆಗಳು ಇಲ್ಲದೆ ಸಾರ್ವಜನಿಕರು ತೊಂದರೆ ಅನುಭವಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಯಾವ ಯಾವ ಪುರಸಭೆಯ ಬಡಾವಣೆಗಳಲ್ಲಿ ಈ ಸಮಸ್ಯೆಗಳು ಕಂಡುಬಂದಿವೆ ; ಮತ್ತು ಈ ಸಮಸ್ಯೆಯನ್ನು ನಿವಾರಿಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು ; (ಪುರಸಭೆ ವಿವರ ನೀಡುವುದು)

(ಆ) ಕಳೆದ ೨ ವರ್ಷಗಳಲ್ಲಿ ಚಿಕ್ಕನಾಯಕನಹಳ್ಳಿ ಪುರಸಭೆ ಅಭಿವೃದ್ಧಿಗಾಗಿ ಸರ್ಕಾರದಿಂದ ಬಿಡುಗಡೆಯಾದ ಅನುದಾನವೆಷ್ಟು ; ಈ ಅನುದಾನವನ್ನು ಯಾವ ಯಾವ ಉದ್ದೇಶಗಳಿಗೆ ಬಳಸಲಾಗಿದೆ ; (ವಿವರ ನೀಡುವುದು)

(ಇ) ಕಳೆದ ೨ ವರ್ಷಗಳಲ್ಲಿ ಚಿಕ್ಕನಾಯಕನಹಳ್ಳಿ ಪುರಸಭೆ ವ್ಯಾಪ್ತಿಯಲ್ಲಿ ಕೈಗೊಂಡಿರುವ ಕಾಮಗಾರಿಗಳು ಯಾವುವು ; ಈ ಕಾಮಗಾರಿಗಳಿಗೆ ತಗಲುವ ಮೊತ್ತವೆಷ್ಟು ; ಕಾಮಗಾರಿಗಳನ್ನು ನಿರ್ವಹಿಸುವ ಗುತ್ತಿಗೆದಾರರು ಯಾರು ? (ಕಾಮಗಾರಿವಾರು ವಿವರ ನೀಡುವುದು)

## ಸಣ್ಣ ಕೈಗಾರಿಕೆಗಳನ್ನು ಸ್ಥಾಪಿಸಲು ಇರುವ ಮಾನದಂಡಗಳ ಕುರಿತು

**ಶ್ರೀ ಹೆಚ್.ಎಂ. ರಮೇಶ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೩೨ (೧೩೬೧) ಮಾನ್ಯ ಸಣ್ಣ ಕೈಗಾರಿಕೆ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಯಾವ ರೀತಿಯ ಕೈಗಾರಿಕೆಗಳನ್ನು ಸಣ್ಣ ಕೈಗಾರಿಕೆಗಳೆಂದು ಪರಿಗಣಿಸಲಾಗುವುದು ; ಸಣ್ಣ ಕೈಗಾರಿಕೆಗಳನ್ನು ಸ್ಥಾಪನೆ ಮಾಡಲು ಸರ್ಕಾರವು ನಿಗದಿಪಡಿಸಿರುವ ಮಾನದಂಡಗಳೇನು ; ಸಣ್ಣ ಕೈಗಾರಿಕೆಗಳನ್ನು ಪ್ರೋತ್ಸಾಹಿಸಲು ಸರ್ಕಾರವು ಕೈಗೊಂಡಿರುವ ಕ್ರಮಗಳೇನು ; (ಸಂಪೂರ್ಣ ವಿವರ ನೀಡುವುದು)

(ಆ) ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಣ್ಣ ಕೈಗಾರಿಕೆಗಳ ಸಂಖ್ಯೆ ಎಷ್ಟು ; ಈ ಕೈಗಾರಿಕೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ನೌಕರರೆಷ್ಟು ; ಈ ಕೈಗಾರಿಕೆಗಳು ನೌಕರರಿಗೆ ಒದಗಿಸುತ್ತಿರುವ ಸೌಲಭ್ಯಗಳೇನು ; (ಕೈಗಾರಿಕೆಗಳ ವಿಳಾಸದೊಂದಿಗೆ ಮಾಹಿತಿ ನೀಡುವುದು)

(ಇ) ಈ ಕೈಗಾರಿಕೆಗಳಿಗೆ ಮತ್ತು ನೌಕರರಿಗೆ ಸರ್ಕಾರದಿಂದ ನೀಡುತ್ತಿರುವ ಸೌಲಭ್ಯಗಳೇನು ; ಈ ಕೈಗಾರಿಕೆಗಳಿಂದ ಕಳೆದ ೦೩ ವರ್ಷಗಳಲ್ಲಿ ಸರ್ಕಾರಕ್ಕೆ ಬಂದಿರುವ ಆದಾಯವೆಷ್ಟು ? (ಕೈಗಾರಿಕೆವಾರು ಮಾಹಿತಿ ನೀಡುವುದು)

## ರಾಜ್ಯದ ಎಲ್ಲಾ ವಿಧಾನಸಭೆ ಕ್ಷೇತ್ರದ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಹಾಲು ಉತ್ಪಾದಕರ ಸಂಘಗಳ ಕುರಿತು

**ಶ್ರೀ ಹೆಚ್.ಎಂ. ರಮೇಶ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೩೩ (೧೩೪೯) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಎಲ್ಲಾ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಹಾಲು ಉತ್ಪಾದಕರ ಸಹಕಾರ ಸಂಘಗಳು ಯಾವುವು ; ಮತ್ತು ಇದರಲ್ಲಿ ನೋಂದಾಯಿಸಿಕೊಂಡಿರುವ ಸದಸ್ಯರೆಷ್ಟು ; ಇವುಗಳಲ್ಲಿ ಸ್ವಂತ ಕಟ್ಟಡಗಳನ್ನು ಹೊಂದಿರುವ ಸಂಘಗಳೆಷ್ಟು ; ಬಾಡಿಗೆ ಕಟ್ಟಡಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಸಂಘಗಳೆಷ್ಟು ; (ಪ್ರತಿ ಹಾಲು ಉತ್ಪಾದಕರ ಸಹಕಾರ ಸಂಘದ ಮಾಹಿತಿ ನೀಡುವುದು)

(ಆ) ಹಾಲು ಉತ್ಪಾದಕರ ಸಹಕಾರ ಸಂಘಗಳು ಸಾಮಾನ್ಯ ಸಭೆಗಳನ್ನು ನಡೆಸುವುದು ಕಡ್ಡಾಯಗೊಳಿಸಲಾಗಿದೆಯೇ ; ಹಾಗಿದ್ದಲ್ಲಿ, ಈ ಸಂಬಂಧ ಸರ್ಕಾರವು ಹೊರಡಿಸಿರುವ ಆದೇಶ/ಸುತ್ತೋಲೆಗಳನ್ನು ನೀಡುವುದು ;

(ಇ) ೨೦೧೯-೨೦೨೦ನೇ ಸಾಲಿನಲ್ಲಿ ಬೆಂಗಳೂರು ನಗರ ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲೆಯ ವ್ಯಾಪ್ತಿಯಲ್ಲಿ ಸಾಮಾನ್ಯ ಸಭೆಗಳನ್ನು ನಡೆಸಿರುವ ಹಾಲು ಉತ್ಪಾದಕರ ಸಹಕಾರ ಸಂಘಗಳು ಯಾವುವು ; (ವಿವರವನ್ನು ದಾಖಲೆ ಸಹಿತ ನೀಡುವುದು)

(ಈ) ಹಾಲು ಉತ್ಪಾದಕರ ಸಹಕಾರ ಸಂಘಗಳು ರೈತರಿಂದ ಖರೀದಿಸುವ ಹಾಲಿಗೆ ಸರ್ಕಾರದಿಂದ ಬೆಂಬಲ ಬೆಲೆ/.ಸಹಾಯಧನ ನೀಡಲಾಗುತ್ತಿದೆಯೇ ; ನೀಡುತ್ತಿದ್ದಲ್ಲಿ, ಪ್ರತಿ ಲೀಟರ್‌ಗೆ ಎಷ್ಟು ರೂಪಾಯಿ ಬೆಂಬಲ ಬೆಲೆ/ಸಹಾಯಧನ ನೀಡಲಾಗುತ್ತಿದೆ ; ಯಾವ ದಿನಾಂಕದವರೆಗೆ ಬೆಂಬಲ ಬೆಲೆ/ಸಹಾಯಧನ ನೀಡಲಾಗಿದೆ ? (ವಿವರ ನೀಡುವುದು)

# K.I.A.D.B., ವತಿಯಿಂದ ಕೈಗೊಂಡಿರುವ ಕಾಮಗಾರಿಗಳ ಬಗ್ಗೆ

**ಶ್ರೀ ಹೆಚ್.ಎಂ. ರಮೇಶ ಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೩೪ (೧೩೬೦) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೦೩ ವರ್ಷಗಳಲ್ಲಿ K.I.A.D.B. ವತಿಯಿಂದ ಕೈಗೊಂಡ ಕಾಮಗಾರಿಗಳು ಯಾವುವು ; ಯಾವ ಏಜೆನ್ಸಿಗಳ ಮೂಲಕ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ ; (ಕಾಮಗಾರಿವಾರು/ಹಾಗೂ ಗುತ್ತಿಗೆದಾರರವಾರು ವಿವರ ನೀಡುವುದು)

(ಆ) ಸದರಿ ಕಾಮಗಾರಿಗಳನ್ನು ಅನುಷ್ಠಾನ ಮಾಡುವಾಗ KTTP ನಿಯಮ ಪಾಲನೆಯಾಗಿದೆಯೇ ; (ಕಾಮಗಾರಿವಾರು ವಿವರ ನೀಡುವುದು)

(ಇ) ಕೆಲವು ಕಾಮಗಾರಿಗಳು ಕಳಪೆ ಗುಣಮಟ್ಟದಿಂದ ಕೂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಕೈಗೊಂಡ ಕ್ರಮಗಳೇನು ; (ಕಾಮಗಾರಿವಾರು ವಿವರ ನೀಡುವುದು)

(ಈ) ಕೆಲವು ಕಾಮಗಾರಿಗಳು ಅಪೂರ್ಣವಾಗಿದ್ದು, ಇದಕ್ಕೆ ಕಾರಣಗಳೇನು ; ಸದರಿ ಕಾಮಗಾರಿಗಳನ್ನು ಪೂರ್ಣಗೊಳಿಸಲಾಗಿದೆ ಎಂದು ಗುತ್ತಿಗೆದಾರರಿಗೆ ಹಣ ಪಾವತಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ತಪ್ಪಿತಸ್ಥರ ವಿರುದ್ಧ ಕೈಗೊಂಡ ಕ್ರಮವೇನು ; (ಕಾಮಗಾರಿವಾರು ವಿವರ ನೀಡುವುದು)

(ಉ) ಕೆಲವು ಕಾಮಗಾರಿಗಳು ನಕಲಿ ಆಗುವುದು ಸರ್ಕಾರದ ಬಳಿ ಮಾಹಿತಿ ಇದೆಯೇ ; ತಪಿತಸ್ಥರ ವಿರುದ್ಧ ತೆಗೆದುಕೊಂಡ ಕ್ರಮವೇನು ;

(ಊ) ಟೆಂಡರ್ ಕಾಮಗಾರಿ ನೀಡುವಾಗ ಕೆಲವು ಗುತ್ತಿಗೆದಾರರಿಗೆ ಅನುಕೂಲವಾಗುವಂತೆ ಅರ್ಹತೆಗಳನ್ನು ನಿಗದಿಪಡಿಸಿ ಅವ್ಯವಹಾರ ನಡೆಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದನ್ನು ತಡೆಗಟ್ಟಲು ಯಾವ ಕ್ರಮ ಕೈಗೊಳ್ಳಲಾಗುವುದು ?

## ಕರ್ನಾಟಕ ರಾಜ್ಯ ಕೈಗಾರಿಕೆ ಪ್ರದೇಶ ಅಭಿವೃದ್ಧಿಯ (ಕೆ.ಐ.ಎ.ಡಿ.ಬಿ) ಬಗ್ಗೆ

**ಶ್ರೀ ಎಸ್. ರುದ್ರೇಗೌಡ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೩೫+೧೧೩೬ (೧೧೯೭)+(೧೪೧೨) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ರಾಜ್ಯದಲ್ಲಿ ಕರ್ನಾಟಕ ಕೈಗಾರಿಕೆ ಪ್ರದೇಶಾಭಿವೃದ್ಧಿ ಮಂಡಳಿಯಿಂದ (ಕೆ.ಐ.ಎ.ಡಿ.ಬಿ) ಸ್ಥಾಪಿತವಾದ ಕೈಗಾರಿಕಾ ಪ್ರದೇಶಗಳೆಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ಪ್ರತಿ ಕೈಗಾರಿಕಾ ಪ್ರದೇಶದ ವಿಸ್ತೀರ್ಣವೆಷ್ಟು ; ಮತ್ತು ಸ್ಥಾಪಿತವಾಗಿರುವ ಕೈಗಾರಿಕೆಗಳೆಷ್ಟು ;

(ಇ) ಪ್ರತಿ ಕೈಗಾರಿಕ ಪ್ರದೇಶದಲ್ಲಿ ಕೆಲಸ ಮಾಡುವ ಉದ್ಯೋಗಿಗಳ ಸಂಖ್ಯೆ ಎಷ್ಟು ; ಇವರಲ್ಲಿ ಕನ್ನಡೇತರ ಉದ್ಯೋಗಿಗಳ ಪ್ರಮಾಣ ಎಷ್ಟು ;

(ಈ) ಉದ್ಯೋಗಿಗಳ ವಸತಿಗೆ ಕೈಗಾರಿಕಾ ಪ್ರದೇಶಗಳಲ್ಲಿ ಭೂಮಿಯನ್ನು ಮೀಸಲಿಡಲಾಗಿದೆಯೇ ;

(ಉ) ಕೈಗಾರಿಕಾ ಕ್ಷೇತ್ರಗಳಲ್ಲಿ ಕೆಲಸ ಮಾಡುವ ಉದ್ಯೋಗಿಗಳಿಗೆ ವಸತಿ ಸೌಕರ್ಯ ಒದಗಿಸಲು ಸರ್ಕಾರದ ನೀತಿ ನಿಯಮಗಳೇನು ?

## ಮೈಸೂರು ಕುಂಬಾರ ಹಾಸ್ಟೆಲ್‌ನ ಕಟ್ಟಡ ದುರುಪಯೋಗದ ಬಗ್ಗೆ

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) :–**

೧೧೩೭ (೧೪೧೬) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೈಸೂರಿನಲ್ಲಿರುವ ಕುಂಬಾರ ಹಾಸ್ಟೆಲ್ ನಿವೇಶನ (ಕುವೆಂಪು ನಗರ) ಯಾರ ಹೆಸರಿಗೆ ಹಾಗೂ ಯಾವ ಉದ್ದೇಶಕ್ಕಾಗಿ ನೀಡಲಾಗಿದೆ ;

(ಆ) ಹಾಸ್ಟೆಲ್ ಕಟ್ಟಡವನ್ನು ಬೇರೆಯವರಿಗೆ ಪರಭಾರೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಇ) ಇತ್ತೀಚೆಗೆ ವಿದ್ಯಾರ್ಥಿಗಳನ್ನು ಒಂದು ಮೂಲೆಗೆ ಹಾಕಿ ಬಾಕಿ ಉಳಿದಿರುವ ಸ್ಥಳ ಮತ್ತು ಕಟ್ಟಡವನ್ನು ನರ್ಸಿಂಗ್ ಕಾಲೇಜು ನಡೆಸಲು ಪರಭಾರೆ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ಕೈಗೊಂಡ ಕ್ರಮವೇನು ;

(ಈ) ಈ ಸಂಘದ ಅಧ್ಯಕ್ಷರು/ನಿರ್ದೇಶಕರು ಅವ್ಯವಹಾರದಲ್ಲಿ ಭಾಗಿಯಾಗಿರುವ ಬಗ್ಗೆ ದೂರುಗಳು ದಾಖಲಾಗಿದ್ದರೂ ಸರ್ಕಾರ ಕ್ರಮ ಕೈಗೊಳ್ಳದಿರಲು ಕಾರಣವೇನು ?

## ರಾಜ್ಯದ ನಗರಗಳಲ್ಲಿ ಅಂತರ್ಜಲದ ಮಟ್ಟ ಸುಧಾರಣೆ ಕುರಿತು

**ಶ್ರೀ ಪಿ.ಆರ್. ರಮೇಶ್ (ನಾಮನಿರ್ದೇಶನ ಹೊಂದಿದವರು) :–**

೧೧೩೮ (೧೩೭೯) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಐದು ವರ್ಷಗಳಿಂದ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಸಂಸ್ಥೆಯ ಕಾರ್ಯವ್ಯಾಪ್ತಿ ಪ್ರದೇಶಗಳಲ್ಲಿ ಅಂತರ್ಜಲ ಮಟ್ಟದ ಸುಧಾರಣೆಗೆ ತೆಗೆದುಕೊಂಡ ಕ್ರಮಗಳೇನು ; (ವಿವರ ನೀಡುವುದು)

(ಆ) ಕಳೆದ ಐದು ವರ್ಷಗಳಿಂದ ಈ ಪ್ರದೇಶಗಳಲ್ಲಿ ಕರ್ನಾಟಕ ಅಂತರ್ಜಲ ಕಾಯ್ದೆ ೧೯೯೯ರಡಿಯ ಪ್ರಕಾರ ಯಾವುದೇ ಅಧಿಕೃತ ಪ್ರಾಧಿಕಾರದ ಅನುಮತಿ ಪಡೆಯುದೆ ಅಂತರ್ಜಲ ಉಪಯೋಗಿಸಿದವರ ವಿರುದ್ಧ ದಾಖಲಿಸಲ್ಪಟ್ಟಿರುವ ಪ್ರಕರಣಗಳ ಸಂಖ್ಯೆ ಎಷ್ಟು ; ಎಷ್ಟು ಪ್ರಕರಣಗಳಲ್ಲಿ ದಂಡ ವಿಧಿಸಲಾಗಿದೆ ; ಮತ್ತು ಎಷ್ಟು ಇಲಾಖೆಯಿಂದ ಕ್ರಮಕೈಗೊಳ್ಳಲಾಗಿರುವ ಪ್ರಕರಣಗಳ ಸಂಖ್ಯೆ ಎಷ್ಟು ; (ಪ್ರಕರಣಗಳ ವಿವರ ನೀಡುವುದು)

(ಇ) ಅನಧಿಕೃತ ಬಡಾವಣೆಗಳ ನಿರ್ಮಾಣದಿಂದ ಉದ್ಭವಿಸಿರುವ ಅವೈಜ್ಞಾನಿಕ ನೀರು ಸರಬರಾಜು ಮತ್ತು ಒಳಚರಂಡಿ ವ್ಯವಸ್ಥೆಯುಳ್ಳ ಬಡಾವಣೆಗಳ ವಿರುದ್ಧ ಇಲಾಖೆಯಿಂದ ಕೈಗೊಂಡ ಕ್ರಮಗಳೇನು ; (ಸಂಪೂರ್ಣ ವಿವರ ನೀಡುವುದು)

(ಈ) ಅಧಿಕೃತ/ಅನಧಿಕೃತ ಕಾರ್ಖಾನೆಗಳಿಂದ ಹೊರಬರುವ ಮಲೀನ ನೀರನ್ನು ಸಮರ್ಪಕವಾಗಿ ಸಂಸ್ಕರಿಸದೇ ಅಕ್ಕಪಕ್ಕದ ಕೊಳ್ಳ/ಹಳ್ಳಗಳಿಗೆ ಅನಧಿಕೃತವಾಗಿ ಹರಿಯಬಿಡುವವರ ವಿರುದ್ಧ ಇಲಾಖೆಯಿಂದ ಕೈಗೊಳ್ಳಲಾದ ಕ್ರಮವೇನು ? (ಸಂಪೂರ್ಣ ವಿವರ ನೀಡುವುದು)

## ಗಣಿಗಾರಿಕೆಗೆ ಅನುಮತಿ ನೀಡಿರುವ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೩೯ (೧೩೫೧) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪ್ರಸ್ತುತ ರಾಜ್ಯದ ಸರ್ಕಾರಿ ಜಮೀನು, ಗೋಮಾಳ ಪಟ್ಟಾ ಜಮೀನು ಸೇರಿದಂತೆ ಯಾವ ಯಾವ ಜಮೀನುಗಳಲ್ಲಿ ಎಷ್ಟು ಎಕರೆ ಪ್ರದೇಶವನ್ನು ಗಣಿಗಾರಿಕೆಗೆ ಅನುಮತಿ ನೀಡಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ರಾಜ್ಯದಲ್ಲಿ ಒಟ್ಟು ಅನುಮತಿ ನೀಡಿರುವ ಗುತ್ತಿಗೆ ಗಣಿಗಾರಿಕೆಗಳ ಸಂಖ್ಯೆ ಎಷ್ಟು ;

(ಇ) ಪ್ರಸ್ತುತ, ರಾಜ್ಯದಲ್ಲಿ ಅನಧಿಕೃತವಾಗಿ ನಡೆಯುತ್ತಿರುವ ಗಣಿಗಾರಿಕೆಗಳ ಸಂಖ್ಯೆ ಎಷ್ಟು; ಇವುಗಳಿಗೆ ಸರ್ಕಾರ ಕೈಗೊಳ್ಳಲಾದ ಕಾನೂನು ಕ್ರಮವೇನು ;

(ಈ) ಪ್ರಸ್ತುತ ರಾಜ್ಯದಲ್ಲಿ ಸ್ಫೋಟದ ಅನುಮತಿ ಪಡೆಯಲಾದ ಏಜೆನ್ಸಿಗಳ ಸಂಖ್ಯೆ ಎಷ್ಟು ; ಅವುಗಳು ಯಾವುವು ?

## ಮರಳು ಕೇಂದ್ರಗಳ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೪೦ (೧೩೫೨) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ತೆರೆಯಲಾದ ಮರಳು ಕೇಂದ್ರಗಳ ಸಂಖ್ಯೆ ಎಷ್ಟು ;

(ಆ) ೨೦೨೦-೨೧ನೇ ಸಾಲಿನಲ್ಲಿ ರಾಜ್ಯದಲ್ಲಿ ಎಷ್ಟು ಮರಳು ಸಾಗಾಣಿಕೆ ಮಾಡಲಾಗಿದೆ ;

(ಇ) ಈ ಮರಳು ಕೇಂದ್ರಗಳಿಂದ ಆಯಾ ಜಿಲ್ಲೆಗಳ ಸರ್ಕಾರಿ ಕಾಮಗಾರಿಗಳಿಗೆ ಬಳಸಲಾದ ಮರಳು ಎಷ್ಟು ;

(ಈ) ೨೦೨೦-೨೧ನೇ ಸಾಲಿನಲ್ಲಿ ಸಂಗ್ರಹಿಸಲಾಗಿರುವ ರಾಜಧನವೆಷ್ಟು ? (ವಿವರಗಳನ್ನು ಒದಗಿಸುವುದು)

## ಸಹಕಾರ ಬ್ಯಾಂಕುಗಳಲ್ಲಿ ಇರುವ ಹುದ್ದೆಗಳ ಬಗ್ಗೆ

**ಶ್ರೀ ಎಸ್. ರವಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೧೪೧ (೧೩೫೩) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿರುವ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ ನಿಯಮಿತಗಳಲ್ಲಿ ಹಾಲಿ ಇರುವ ಹಾಗೂ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು ; (ಹುದ್ದೆವಾರು ವಿವರ ನೀಡುವುದು)

(ಆ) ರಾಜ್ಯದ ಸಹಕಾರ ಬ್ಯಾಂಕುಗಳಿಂದ ಬರುವ ಆದಾಯವೆಷ್ಟು ; ಆದಾಯಕ್ಕನುಗುಣವಾಗಿ ಹುದ್ದೆಗಳಿಗೆ ಇರಬೇಕಾದ ಸಿಬ್ಬಂದಿಗಳ ಸಂಖ್ಯೆ ಎಷ್ಟು ; (ವಿವರ ನೀಡುವುದು)

(ಇ) ರಾಜ್ಯದ ಸಹಕಾರ ಬ್ಯಾಂಕುಗಳಿಂದ ಅಧಿಸೂಚನೆ ಹೊರಡಿಸಿ ವಿವಿಧ ಹುದ್ದೆಗಳಿಗೆ ನೇಮಕಾತಿ ನಡೆಸಲಾಗುತ್ತಿದೆಯೇ ; (ಹುದ್ದೆವಾರು ವಿವರ ನೀಡುವುದು)

(ಈ) ಈ ಹುದ್ದೆಗಳ ನೇಮಕಾತಿಗಳಿಗೆ ಇರುವ ಮಾನದಂಡಗಳೇನು ? (ವಿವರ ನೀಡುವುದು)

## "ಸ್ಮಾರ್ಟ್ ಸಿಟಿ" ಯೋಜನೆ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :–**

೧೧೪೨ (೧೪೧೪) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) "ಸ್ಮಾರ್ಟ್ ಸಿಟಿ" ಯೋಜನೆಯಡಿ ರಾಜ್ಯದ ಎಷ್ಟು ನಗರಗಳು ಆಯ್ಕೆಯಾಗಿವೆ ಅವು ಯಾವುವು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ನಗರಗಳಲ್ಲಿ ಯಾವ ಯಾವ ಕಾಮಗಾರಿಗಳನ್ನು ಆಯ್ಕೆ ಮಾಡಲಾಗಿದೆ ; ಕಾಮಗಾರಿಗಳಿಗೆ ನಿಗದಿಪಡಿಸಿರುವ ಕಾಲಮಿತಯೇನು ; ಈ ಕಾಮಗಾರಿಗಳಿಗೆ ಕೇಂದ್ರ ಹಾಗೂ ರಾಜ್ಯ ಸರ್ಕಾರ ಒದಗಿಸುತ್ತಿರುವ ಅನುದಾನ, ಈಗಾಗಲೇ ಬಿಡುಗಡೆಯಾಗಿರುವ ಅನುದಾನವೆಷ್ಟು ; (ಸಂಪೂರ್ಣ ವಿವರಣೆ ನೀಡುವುದು)

(ಇ) ಈ ಯೋಜನೆಯಡಿ ಪ್ರಾರಂಭಿಸಲಾದ ಕಾಮಗಾರಿಗಳ ಪ್ರಗತಿಯ ಬಗ್ಗೆ ಸರ್ಕಾರ ಗಂಭೀರವಾಗಿ ಆಲೋಚಿಸಿದೆಯೇ ; ಹಾಗಿದ್ದಲ್ಲಿ, ನಗರವಾರು, ಕಾಮಗಾರಿವಾರು ಪ್ರಗತಿಯ ವಿವರಗಳೇನು ; (ಪ್ರತ್ಯೇಕವಾಗಿ ಸಂಪೂರ್ಣ ಮಾಹಿತಿ ನೀಡುವುದು)

(ಈ) "ಸ್ಮಾರ್ಟ್ ಸಿಟಿ" ಯೋಜನೆಗಳನ್ನು ಯಾವ ಕಾಲಮಿತಿಯೊಳಗೆ ಪೂರ್ಣಗೊಳಿಸಲಾಗುವುದು ? (ಸಂಪೂರ್ಣ ಮಾಹಿತಿ ನೀಡುವುದು)

## ಸಹಕಾರ ಇಲಾಖೆಯಿಂದ ರೈತರಿಗೆ ಇರುವ ಸಾಲ ಯೋಜನೆಗಳ ಕುರಿತು

**ಶ್ರೀ ಶಶೀಲ್ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ) :–**

೧೧೪೩ (೧೩೮೭) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದಲ್ಲಿ ಸಹಕಾರ ಇಲಾಖೆಯಿಂದ ರೈತರಿಗಾಗಿ ಇರುವ ವಿವಿಧ ಸಾಲದ ಯೋಜನೆಗಳು ಯಾವುವು ; (ಸಾಲ ಯೋಜನೆಗಳು ನಿಯಮಗಳ ಸಂಪೂರ್ಣ ಮಾಹಿತಿ ನೀಡುವುದು)

(ಆ) ಈ ಯೋಜನೆಗಳಲ್ಲಿ ಸಹಾಯಧನ ಹೊಂದಿರುವ ಯೋಜನೆಗಳು ಯಾವುವು ;

(ಇ) ಈ ಸಾಲ ಯೋಜನೆಗಳ ಲಾಭ ಪಡೆಯಲು ರೈತರು ಅನುಸರಿಸಬೇಕಾಗಿರುವ ನಿಯಮಗಳೇನು ; (ಸಂಪೂರ್ಣ ಮಾಹಿತಿ ನೀಡುವುದು)

(ಈ) ರೈತರಿಗಾಗಿ ಸಹಕಾರ ಇಲಾಖೆಯಿಂದ ವಾಹನ ಸಾಲ ಯೋಜನೆ ಜಾರಿಯಲ್ಲಿದೆಯೇ; ಇದ್ದಲ್ಲಿ, ಯಾವ ಯಾವ ವಾಹನಗಳಿಗೆ ಸಾಲ ನೀಡಲಾಗುತ್ತಿದೆ; ಸಬ್ಸಿಡಿಯನ್ನು ಎಷ್ಟು ನೀಡಲಾಗುತ್ತದೆ ? (ವಿವರ ನೀಡುವುದು)

## ಪೌರ ಸಂಸ್ಥೆಗಳ ಖಾಲಿ ಹುದ್ದೆಗಳ ಭರ್ತಿ ಬಗ್ಗೆ

**ಶ್ರೀ ಕೆ.ಟಿ. ಶ್ರೀಕಂಠೇಗೌಡ (ಪದವೀಧರ ಕ್ಷೇತ್ರ) :–**

೧೧೪೪ (೧೨೨೩) ಮಾನ್ಯ ಪೌರಾಡಳಿತ ಹಾಗೂ ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಪೌರ ಸಂಸ್ಥೆ (ನಗರಸಭೆ, ಪಟ್ಟಣ ಪಂಚಾಯತಿ) ಗಳಲ್ಲಿ ಮಂಜೂರಾದ ಒಟ್ಟು ಹುದ್ದೆಗಳೆಷ್ಟು ; (ವಿವರ ನೀಡುವುದು)

(ಆ) ಇವುಗಳಲ್ಲಿ ಖಾಲಿ ಇರುವ ಹುದ್ದೆಗಳೆಷ್ಟು ; (ವಿವರ ನೀಡುವುದು)

(ಇ) ಹೆಚ್ಚಿನ ಹುದ್ದೆಗಳು ಖಾಲಿ ಇರುವುದರಿಂದ ಸಾರ್ವಜನಿಕರ ಕೆಲಸಗಳಿಗೆ ಹಿನ್ನಡೆ ಹಾಗೂ ಹಾಲಿ ಸಿಬ್ಬಂದಿ ಮೇಲೆ ವಿಪರೀತ ಒತ್ತಡ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಈ) ಬಂದಿದ್ದಲ್ಲಿ, ಖಾಲಿ ಹುದ್ದೆಗಳನ್ನು ಯಾವಾಗ ಭರ್ತಿ ಮಾಡಲಾಗುವುದು ? (ವಿವರಿಸುವುದು)

## ಆಹಾರ ಸಂಸ್ಕರಣಾ ಘಟಕಗಳು ಮತ್ತು ಬೃಹತ್ ಆಹಾರ ಸಂಕೀರ್ಣಗಳ ಸ್ಥಾಪನೆ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ) :–**

೧೧೪೫ (೧೪೪೪) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಕೇಂದ್ರ ಮತ್ತು ರಾಜ್ಯ ಸರ್ಕಾರಗಳು ಬೃಹತ್ ಆಹಾರ ಸಂಕೀರ್ಣಗಳನ್ನು ನಿರ್ಮಿಸಲು ಉತ್ತೇಜನ ಮತ್ತು ಪ್ರೋತ್ಸಾಹ ನೀಡುತ್ತಿರುವುದು ನಿಜವೇ ;

(ಆ) ರಾಜ್ಯದಲ್ಲಿನ ಎಲ್ಲಾ ಜಿಲ್ಲೆಗಳಲ್ಲಿ ಆಹಾರ ಸಂಸ್ಕರಿಸುವ ಘಟಕಗಳನ್ನು ಸ್ಥಾಪಿಸಲು ರಾಜ್ಯ ಸರ್ಕಾರ ರೂಪಿಸಿರುವ ಯೋಜನೆಗಳು ಯಾವುವು ಮತ್ತು ಅವುಗಳು ಯಾವ ಹಂತದಲ್ಲಿವೆ ; (ವಿವರ ನೀಡುವುದು)

(ಇ) ರಾಜ್ಯದಲ್ಲಿ ಈಗಾಗಲೇ ಕೇಂದ್ರ ಸರ್ಕಾರದ ಯೋಜನೆಯಡಿ ಮತ್ತು ನೆರವಿನೊಂದಿಗೆ ಸ್ಥಾಪಿತವಾಗಿರುವ ಬೃಹತ್ ಆಹಾರ

ಸಂಕೀರ್ಣಗಳು (Mega Food Parks) ಯಾವುವು ; ಮತ್ತು ಅವುಗಳು ನಿರ್ವಹಿಸುತ್ತಿರುವ ಕಾರ್ಯಗಳೇನು ; (ಸಂಪೂರ್ಣ ವಿವರ ನೀಡುವುದು)

(ಈ) ರಾಜ್ಯದ ರೈತರ ಹಿತ ಕಾಪಾಡಲು ಅಧಿಕವಾಗಿ ಆಹಾರ ಧಾನ್ಯ ಬೆಳೆಯುವ ಜಿಲ್ಲೆಗಳಲ್ಲಿ ಬೃಹತ್ ಆಹಾರ ಸಂಕೀರ್ಣ (Mega Food Parks) ಗಳನ್ನು ಸ್ಥಾಪಿಸಲು ಯೋಜನೆಯನ್ನು ರೂಪಿಸಿದೆಯೇ ? (ಪೂರ್ಣ ವಿವರ ನೀಡುವುದು)

## ಕೈಗಾರಿಕಾ ಪ್ರದೇಶಗಳಲ್ಲಿ ಉದ್ಯಮಗಳ ಸ್ಥಾಪನೆಗೆ ಭೂಮಿ ಹಂಚಿಕೆ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು) :-**

೧೧೪೬ (೧೩೫೬) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕರ್ನಾಟಕ ಸರ್ಕಾರದ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ರಾಜ್ಯ ಮಟ್ಟದ ಒಪ್ಪಿಗೆ ನೀಡುವ ಸಮಿತಿ, ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳ ಮಂತ್ರಿಗಳ ಅಧ್ಯಕ್ಷತೆಯಲ್ಲಿನ ರಾಜ್ಯ ಮಟ್ಟದ ಏಕಗವಾಕ್ಷಿ ಒಪ್ಪಿಗೆ ನೀಡುವ ಸಮಿತಿ ಮತ್ತು ಆಯಾ ಜಿಲ್ಲೆಗಳ ಜಿಲ್ಲಾಧಿಕಾರಿಗಳ ಅಧ್ಯಕ್ಷತೆಯಲ್ಲಿನ ಜಿಲ್ಲಾಮಟ್ಟದ ಏಕಗವಾಕ್ಷಿ ಸಮಿತಿ ಅಡಿಯಲ್ಲಿ ವಿವಿಧ ಕೈಗಾರಿಕಾ ಪ್ರದೇಶಗಳಲ್ಲಿ ಉದ್ದಿಮೆ ಸ್ಥಾಪಿಸಲು ಹಂಚಿಕೆ ಆಗಿರುವ ಭೂಮಿಯ ವಿಸ್ತೀರ್ಣವೆಷ್ಟು; (ಜಿಲ್ಲಾವಾರು ಮತ್ತು ಕೈಗಾರಿಕಾ ಪ್ರದೇಶವಾರು ಸಂಪೂರ್ಣ ವಿವರ ನೀಡುವುದು)

(ಆ) ಈ ರೀತಿ ಹಂಚಿಕೆ ಮಾಡಿರುವ ಕೈಗಾರಿಕಾ ಪ್ರದೇಶಗಳ ಉದ್ಯಮಿಗಳು ಎಷ್ಟು ವಿಸ್ತೀರ್ಣದಲ್ಲಿ ಕೈಗಾರಿಕೆಗಳನ್ನು ಸ್ಥಾಪಿಸಿದ್ದಾರೆ ಹಾಗೂ ಉಳಿಕೆ ಭೂಮಿ ಎಷ್ಟು ; (ಜಿಲ್ಲಾವಾರು ಮತ್ತು ಕೈಗಾರಿಕಾ ಪ್ರದೇಶವಾರು ವಿವರ ನೀಡುವುದು)

(ಇ) ಹಂಚಿಕೆಯಾದ ಕೈಗಾರಿಕಾ ಪ್ರದೇಶಗಳಲ್ಲಿ ಉದ್ಯಮಗಳನ್ನು ಸ್ಥಾಪಿಸಲು ವಿಫಲರಾದ ಉದ್ಯಮಿಗಳ ವಿರುದ್ಧ ಕೈಗೊಂಡಿರುವ ಕ್ರಮಗಳೇನು ; ಎಷ್ಟು ಪ್ರಕರಣಗಳಲ್ಲಿ ಭೂಮಿಯನ್ನು ಮುಟ್ಟುಗೋಲು ಹಾಕಿಕೊಳ್ಳಲಾಗಿದೆ ? (ಸಂಪೂರ್ಣ ವಿವರ ನೀಡುವುದು)

## Smart City Development ಯೋಜನೆ ಅಡಿ ಕೊಳೆಗೇರಿ ನಿವಾಸಿಗಳಿಗೆ ಪುನರ್ವಸತಿ ಸೌಲಭ್ಯ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ) :-**

೧೧೪೭ (೧೩೫೪) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ Smart City Development ಯೋಜನೆ ಅಡಿಯಲ್ಲಿ ಗುರುತಿಸಲಾಗಿರುವ ಕೊಳೆಗೇರಿಗಳೆಷ್ಟು ಮತ್ತು ನಿರ್ಮೂಲನೆ ಮಾಡಲಾದ ಕೊಳಗೇರಿಗಳೆಷ್ಟು ; (ಸಂಪೂರ್ಣ ವಿವರ ನೀಡುವುದು)

(ಆ) ಈ ರೀತಿ ಕೊಳೆಗೇರಿಗಳನ್ನು ನಿರ್ಮೂಲನೆ ಮಾಡುವ ಮುನ್ನ ಅಲ್ಲಿ ವಾಸಿಸುವ ನಿವಾಸಿಗಳಿಗೆ ಪರ್ಯಾಯವಾಗಿ ವಸತಿ ಕಲ್ಪಸಿ, ಅವರುಗಳನ್ನು ಪುನರ್ವಸತಿಗೊಳಿಸಲಾಗಿದೆಯೇ ; (ಸಂಪೂರ್ಣ ವಿವರ ನೀಡುವುದು)

(ಇ) ಕೊಳಗೇರಿಯಲ್ಲಿ ವಾಸಿಸುತ್ತಿದ್ದ ನಿವಾಸಿಗಳಿಗೆ ಪುನರ್ವಸತಿ ಕಲ್ಪಿಸಲು ಒದಗಿಸಿದ ಅನುದಾನ, ಮಂಜೂರಾದ ಅನುದಾನ ಮತ್ತು ಖರ್ಚು ಮಾಡಿದ ಅನುದಾನವೆಷ್ಟು ; (ಕೊಳೆಗೇರಿವಾರು ವಿವರವನ್ನು ನೀಡುವುದು)

(ಈ) Smart City Development ಯೋಜನೆ ಅಡಿ ಕೊಳಗೇರಿ ನಿವಾಸಿಗಳ ಪುನರ್ ವ್ಯವಸ್ಥೆಗಾಗಿ ರೂಪಿಸಿರುವ ಯೋಜನೆಗಳು ಯಾವುವು; ಅವುಗಳ ಅನುಷ್ಠಾನ ಮತ್ತು ವ್ಯಯಿಸಿದ ವೆಚ್ಚದ ವಿವರವನ್ನು ನೀಡುವುದು ;

(ಉ) Smart City Development ಯೋಜನೆ ಅಡಿ ಕೈಗೊಂಡಿರುವ ವಿವಿಧ ಕಾಮಗಾರಿಗಳ ವಿವರ, ಅವುಗಳ ಅನುಷ್ಠಾನದ ಹಂತ ಮತ್ತು ಈ ಕಾಮಗಾರಿಗಳನ್ನು ಯಾವ ದಿನಾಂಕದಲ್ಲಿ ಪೂರ್ಣಗೊಳಿಸಲು ಗಡುವು ನೀಡಲಾಗಿದೆ ? (ವಿವರ ನೀಡುವುದು)

## ಎಂ.ಎಸ್.ಎಂ.ಇ. ೨೪೧೨ ಗಳ ಬೆಳವಣಿಗೆ ಬಗ್ಗೆ

**ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ) :–**

೧೧೪೮ (೧೩೫೫) ಮಾನ್ಯ ಸಣ್ಣ ಕೈಗಾರಿಕೆ ಹಾಗೂ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಭಾರತೀಯ ಬಂಡವಾಳ ಸರಕು ಕ್ಷೇತ್ರದ ಸ್ಪರ್ಧಾತ್ಮಕತೆ ಹೆಚ್ಚಿಸಲು ತುಮಕೂರಿನ ಅಮರಪುರದಲ್ಲಿ ಸೂಕ್ಷ್ಮ, ಸಣ್ಣ ಮತ್ತು ಮಧ್ಯಮ ಉದ್ಯಮಗಳ (ಎಂ.ಎಸ್.ಎಂ.ಇ) ತಂತ್ರಜ್ಞಾನ ಕೇಂದ್ರವನ್ನು ಸ್ಥಾಪಿಸಲು ಸರ್ಕಾರ ಕ್ರಮಗಳನ್ನು ಪ್ರಾರಂಭಿಸಿದೆಯೇ ; (ವಿವರಗಳನ್ನು ನೀಡುವುದು)

(ಆ) ೨೦೧೭ರಲ್ಲಿ ಅಮರಪುರದಲ್ಲಿ ಎಂ.ಎಸ್.ಎಂ.ಇ ತಂತ್ರಜ್ಞಾನ ಕೇಂದ್ರವನ್ನು ಸ್ಥಾಪಿಸಲು ರಾಜ್ಯ ಸರ್ಕಾರವು ಈಗಾಗಲೇ ೧೫ ಎಕರೆ ಭೂಮಿಯನ್ನು ಉಚಿತವಾಗಿ ಸ್ವಾಧೀನಪಡಿಸಿಕೊಂಡಿದೆಯೇ ; ಹಾಗೂ ವರ್ಗಾಯಿಸಿದೆಯೇ ; (ವಿವರಗಳನ್ನು ನೀಡುವುದು)

(ಇ) ಕಾಮಗಾರಿ ಪೂರ್ಣಗೊಂಡ ಪ್ರಸ್ತುತ ಸ್ಥಿತಿ ಮತ್ತು ಕೇಂದ್ರವನ್ನು ಸ್ಥಾಪಿಸಲು ದಿನಾಂಕವನ್ನು ನಿಗದಿಪಡಿಸಲಾಗಿದೆಯೇ ; (ವಿವರಗಳನ್ನು ನೀಡುವುದು)

(ಈ) ಮುಂದಿನ ಮೂರು ವರ್ಷಗಳಲ್ಲಿ ನಿಗದಿಪಡಿಸಿದ ಬೆಳವಣಿಗೆಯ ಗುರಿಗಳನ್ನು ಸಾಧಿಸಲು ಸರ್ಕಾರ ಕೈಗೊಂಡ/ ಕೈಗೊಳ್ಳಬೇಕಾದ ಕ್ರಮಗಳೇನು ?

## A.P.M.C., & D.C.C ಬ್ಯಾಂಕ್‌ಗಳು ಮಂಜೂರು ಮಾಡಿರುವ ಸಾಲಗಳು

**ಶ್ರೀ ಆರ್.ಬಿ. ತಿಮ್ಮಾಪೂರ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೧೧೪೯ (೧೨೧೬) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ಎ.ಪಿ.ಎಂ.ಸಿ.,ಗಳು ಹಾಗೂ ಡಿ.ಸಿ.ಸಿ. ಬ್ಯಾಂಕ್‌ಗಳು ಕಳೆದ ಮೂರು ವರ್ಷಗಳಲ್ಲಿ ಮಂಜೂರು ಮಾಡಿರುವ ಸಾಲದ ಮೊತ್ತವೆಷ್ಟು ; (ವಿವರಗಳನ್ನು ಒದಗಿಸುವುದು)

(ಆ) ಈ ಪೈಕಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗದವರಿಗೆ ನೀಡಿರುವ ಸಾಲದ ಮೊತ್ತವೆಷ್ಟು; (ವಿವರ ನೀಡುವುದು)

(ಇ) ಯಾವ ಯಾವ ಉದ್ದೇಶಗಳಿಗಾಗಿ ಸಾಲವನ್ನು ನೀಡಲಾಗಿದೆ ?

## ಮುಧೋಳ ತಾಲ್ಲೂಕಿನ ಮೆಟಗುಡ್ ಗ್ರಾಮದ ಕುಡಿಯುವ ನೀರಿನ ಯೋಜನೆ

**ಶ್ರೀ ಆರ್.ಬಿ. ತಿಮ್ಮಾಪೂರ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೧೧೫೦ (೧೨೧೫) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ಬಾಗಲಕೋಟೆ ಜಿಲ್ಲೆ ಮುಧೋಳ ತಾಲ್ಲೂಕಿನ ಮೆಟಗುಡ್ ಗ್ರಾಮದ ಕುಡಿಯುವ ನೀರಿನ ಯೋಜನೆ ಯಾವ ಹಂತದಲ್ಲಿದೆ ;

(ಆ) ಈ ಯೋಜನೆಗಾಗಿ ಸರ್ಕಾರವು ಇದುವರೆಗೆ ವ್ಯಯಿಸಲಾದ ಹಣವೆಷ್ಟು ;

(ಇ) ಈ ಯೋಜನೆ ಸ್ಥಗಿತಗೊಳ್ಳುವುದಕ್ಕೆ ಕಾರಣಗಳೇನು ? (ವಿವರ ಒದಗಿಸುವುದು)

## DMR ಫಂಡ್‌ನ ಅಭಿವೃದ್ಧಿ ಕಾರ್ಯಕ್ರಮಗಳು

**ಶ್ರೀ ಆರ್.ಬಿ. ತಿಮ್ಮಾಪೂರ (ವಿಧಾನ ಸಭೆಯಿಂದ ಚುನಾಯಿತರಾದವರು) :-**

೧೧೫೧ (೧೨೧೪) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಬಾಗಲಕೋಟೆ ಜಿಲ್ಲೆಯಲ್ಲಿ ಲಭ್ಯವಿರುವ ಡಿಎಂಆರ್ ಅನುದಾನ ಎಷ್ಟು ;

(ಆ) ಸದರಿ ಅನುದಾನದ ಮೂಲಕ ಯಾವ ಯಾವ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ ;

(ಇ) ಇದರಲ್ಲಿ ಅವ್ಯವಹಾರದ ಬಗ್ಗೆ ದೂರುಗಳು ಬಂದಿದೆಯೇ; ಬಂದಿದ್ದಲ್ಲಿ, ಕೈಗೊಂಡಿರುವ ಕ್ರಮಗಳೇನು ?

## ಸಕ್ಕರೆ ಕಾರ್ಖಾನೆಗಳ ಬಗ್ಗೆ

**ಶ್ರೀ ಆರ್.ಬಿ. ತಿಮ್ಮಾಪೂರ (ವಿಧಾನ ಸಭೆಯಿಂದ ಚುನಾಯಿತರಾದವರು) :-**

೧೧೫೨ (೧೨೧೭) ಮಾನ್ಯ ಪೌರಾಡಳಿತ ಹಾಗೂ ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಸಕ್ಕರೆ ಕಾರ್ಖಾನೆಗಳ ಸಂಖ್ಯೆ ಎಷ್ಟು ; ಖಾಸಗಿ ಮತ್ತು ಸರ್ಕಾರಿ ಸಕ್ಕರೆ ಕಾರ್ಖಾನೆಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಪೈಕಿ ಸಾಲ ಪಡೆದಿರುವ ಸಕ್ಕರೆ ಕಾರ್ಖಾನೆಗಳು ಯಾವುವು ; ಈ ಕಾರ್ಖಾನೆಗಳ ಮೇಲಿರುವ ಸಾಲವೆಷ್ಟು ;

(ಇ) ಹಾಲಿ ಕಾರ್ಯನಿರ್ವಹಿಸುತ್ತಿರುವ ಸಕ್ಕರೆ ಕಾರ್ಖಾನೆಗಳು ಮತ್ತು ಸ್ಥಗಿತಗೊಂಡಿರುವ ಸಕ್ಕರೆ ಕಾರ್ಖಾನೆಗಳ ಸಂಖ್ಯೆ ಎಷ್ಟು;

(ಈ) ಯಾವ ಉದ್ದೇಶಗಳಿಗಾಗಿ ಈ ಕಾರ್ಖಾನೆಗಳು ಸ್ಥಗಿತಗೊಂಡಿವೆ ; ಇವುಗಳ ಜೀರ್ಣೋದ್ಧಾರಕ್ಕೆ ಸರ್ಕಾರ ಕೈಗೊಂಡ ಕ್ರಮಗಳೇನು ?

## ರನ್ನ ಸಕ್ಕರೆ ಕಾರ್ಖಾನೆ ಬಗ್ಗೆ

**ಶ್ರೀ ಆರ್.ಬಿ. ತಿಮ್ಮಾಪೂರ (ವಿಧಾನ ಸಭೆಯಿಂದ ಚುನಾಯಿತರಾದವರು) :–**

೧೧೫೩ (೧೨೧೮) ಮಾನ್ಯ ಪೌರಾಡಳಿತ ಹಾಗೂ ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :–

(ಅ) ರಾಜ್ಯದ ರನ್ನ ಸಕ್ಕರೆ ಕಾರ್ಖಾನೆಯ ಕಳೆದ ಮೂರು ವರ್ಷಗಳ ವಾರ್ಷಿಕ ವಹಿವಾಟು ಎಷ್ಟು;

(ಆ) ಈ ಕಾರ್ಖಾನೆಯಲ್ಲಿ ಯಾವ ಯಾವ ಉತ್ಪನ್ನಗಳನ್ನು ಉತ್ಪಾದಿಸಲಾಗುತ್ತಿದೆ ;

(ಇ) ರೈತರಿಗೆ ನೀಡಲು ಬಾಕಿ ಉಳಿಸಿಕೊಂಡಿರುವ ಹಣವೆಷ್ಟು ?

## ಕೊಡಗು ಜಿಲ್ಲೆಯ ಮಡಿಕೇರಿ ನಗರಸಭೆ ವ್ಯಾಪ್ತಿಯಲ್ಲಿನ ಯುಜಿಡಿ ಕಾಮಗಾರಿ ಕುರಿತು

**ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು):–**

೧೧೫೪ (೧೩೬೭) ಮಾನ್ಯ ಪೌರಾಡಳಿತ ಹಾಗೂ ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕೊಡಗು ಜಿಲ್ಲೆಯ ಮಡಿಕೇರಿ ನಗರಸಭೆಯ ವ್ಯಾಪ್ತಿಯಲ್ಲಿ ಕೈಗೆತ್ತಿಕೊಂಡಿದ್ದ ಯುಜಿಡಿ ಕಾಮಗಾರಿಯು ಸಂಪೂರ್ಣವಾಗಿ ಅನುಷ್ಠಾನಗೊಂಡಿದೆಯೇ ;

(ಆ) ಸದರಿ ಕಾಮಗಾರಿಯು ಇದುವರೆವಿಗೂ ಸಂಪೂರ್ಣವಾಗಿ ಅನುಷ್ಠಾನಗೊಳ್ಳದಿದ್ದಲ್ಲಿ, ಅದಕ್ಕೆ ಕಾರಣಗಳೇನು ;

(ಇ) ಸದರಿ ಕಾಮಗಾರಿಗೆ ಇದುವರೆಗೂ ಖರ್ಚಾಗಿರುವ ಅನುದಾನವೆಷ್ಟು? (ಸಂಪೂರ್ಣ ವಿವರ ನೀಡುವುದು)

## ಕಲ್ಲು ಗಣಿಗಾರಿಕೆಯ ಕುರಿತು

**ಶ್ರೀ ಯು.ಬಿ. ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು) :–**

೧೧೫೫ (೧೩೭೮) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ರಾಜ್ಯದ ಯಾವ ಯಾವ ಜಿಲ್ಲೆಗಳಲ್ಲಿ ಕಲ್ಲು ಗಣಿಗಾರಿಕೆಗೆ ಅನುಮತಿಯನ್ನು ನೀಡಲಾಗಿದೆ ; (ವಿವರವನ್ನು ನೀಡುವುದು)

(ಆ) ಅನುಮತಿ ಪಡೆದ ಗಣಿಗಳಲ್ಲಿ ಯಾವ ಪ್ರಮಾಣದಲ್ಲಿ ಜಿಲೆಟಿನ್ ಬಳಸಲು ಅನುಮತಿಯನ್ನು ನೀಡಲಾಗಿದೆ ; (ವಿವರ ನೀಡುವುದು)

(ಇ) ಪ್ರತಿನಿತ್ಯ ಎಷ್ಟು ಪ್ರಮಾಣದ ಜಿಲೆಟಿನ್ ಸರಬರಾಜು ಮಾಡಲು ಅನುಮತಿಯನ್ನು ನೀಡಲಾಗಿದೆ ; ಯಾವ ಸ್ಥಳದಿಂದ

ಸರಬರಾಜಾಗುತ್ತಿದೆ ; ಅಕ್ರಮವಾಗಿ ಸರಬರಾಜಾಗುತ್ತಿರುವ ಜಿಲೆಟಿನ್‌ನ ಪ್ರಮಾಣ ಎಷ್ಟು ; ಅಕ್ರಮ ಸರಬರಾಜುದಾರರ ವಿರುದ್ಧ ಸರ್ಕಾರ ಕೈಗೊಂಡಿರುವ ಕ್ರಮಗಳೇನು ;

(ಈ) ಇತ್ತೀಚೆಗೆ ಶಿವಮೊಗ್ಗ ಮತ್ತು ಚಿಕ್ಕಬಳ್ಳಾಪುರ ಜಿಲ್ಲೆಗಳಲ್ಲಿ ಸಂಭವಿಸಿದ ಜಿಲೆಟಿನ್ ಕಡ್ಡಿಗಳ ಸ್ಫೋಟದಲ್ಲಿ ಮೃತಪಟ್ಟವರ ಸಂಖ್ಯೆ ಎಷ್ಟು ; ಸರ್ಕಾರದಿಂದ ಮೃತ ವ್ಯಕ್ತಿಗಳ ಕುಟುಂಬಸ್ಥರಿಗೆ ಪರಿಹಾರವನ್ನು ನೀಡಲಾಗಿದೆಯೇ ; ನೀಡಲಾಗಿದ್ದರೆ, ಎಷ್ಟು ಜನ ಸಂತ್ರಸ್ಥರಿಗೆ ಪರಿಹಾರ ನೀಡಲಾಗಿದೆ ; ಉಳಿಕೆ ಎಷ್ಟು ಜನ ಸಂತ್ರಸ್ಥರಿಗೆ ನೀಡಲಾಗಿದೆ ; ಯಾವಾಗ ನೀಡಲು ಉದ್ದೇಶಿಸಿದೆ ? (ವಿವರವನ್ನು ನೀಡುವುದು)

## ಕೆ.ಪಿ.ಎಸ್.ಸಿ ಯಲ್ಲಿ ೨೦೧೫ನೇ ಸಾಲಿನ ಚೀಫ್ ಆಫೀಸರ್ (ಗ್ರೇಡ್–೧) ನೇಮಕಾತಿ ಕುರಿತು

**ಶ್ರೀ ಯು.ಬಿ. ವೆಂಕಟೇಶ್ (ನಾಮನಿರ್ದೇಶನ ಹೊಂದಿದವರು) :–**

೧೧೫೬ (೧೨೨೧) ಮಾನ್ಯ ಪೌರಾಡಳಿತ ಹಾಗೂ ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕರ್ನಾಟಕ ಲೋಕಸೇವಾ ಆಯೋಗವು ೨೦೧೫ನೇ ಸಾಲಿನ ಗೆಜೆಟೆಡ್ ಪ್ರೊಬೇಷನರಿ ಹುದ್ದೆಗಳಿಗೆ ನಡೆಸಲಾದ ಪರೀಕ್ಷೆಯಲ್ಲಿ ಎಷ್ಟು ಚೀಫ್ ಆಫೀಸರ್ (ಗ್ರೇಡ್–೧) (ಮೂಲವೃಂದ) ಹುದ್ದೆಗಳಿಗೆ ಆಯ್ಕೆ ಮಾಡಿ ನೇಮಕಾತಿಗಾಗಿ ಸರ್ಕಾರಕ್ಕೆ ಕಳುಹಿಸಲಾಗಿದೆ ;

(ಆ) ಈ ಹುದ್ದೆಗಳ ಪೈಕಿ ನೇಮಕಾತಿ ಆದೇಶ ನೀಡುವ ಮುನ್ನ ದಾಖಲಾತಿಗಳ ಪರಿಶೀಲನೆಗಾಗಿ ದಾಖಲಾತಿಗಳನ್ನು ಒದಗಿಸಲು ತಿಳಿಸಿದ ನಂತರವೂ, ದಾಖಲಾತಿಗಳನ್ನು ಒದಗಿಸದೇ ಗೈರು ಹಾಜರಾದ ಅಥವಾ ಹುದ್ದೆಗೆ ಹಾಜರಾಗುವುದಿಲ್ಲವೆಂದು ಲಿಖಿತ ಮೂಲಕ ತಿಳಿಸಿರುವ ಅಭ್ಯರ್ಥಿಗಳ ಸಂಖ್ಯೆ ಎಷ್ಟು ;

(ಇ) ಅಂತಹ ಅಭ್ಯರ್ಥಿಗಳ ಹೆಸರು ಮತ್ತು ಅವರು ಆಯ್ಕೆಯಾಗಿರುವ ಮೀಸಲಾತಿಯ ಪ್ರವರ್ಗಗಳ ವಿವರಗಳನ್ನು ನೀಡುವುದು ;

(ಈ) ಆಯ್ಕೆ ಮಾಡಿ ಸರ್ಕಾರಕ್ಕೆ ಕಳುಹಿಸಲಾದ ಈ ಹುದ್ದೆಗಳ ಪೈಕಿ ನೇಮಕಾತಿ ಆದೇಶ ನೀಡಿದ ನಂತರವೂ ಈವರೆವಿಗೂ ಕರ್ತವ್ಯಕ್ಕೆ ಎಷ್ಟು ಅಭ್ಯರ್ಥಿಗಳು ವರದಿ ಮಾಡಿಕೊಂಡಿರುವುದಿಲ್ಲ ;

(ಉ) ಅಂತಹ ಅಭ್ಯರ್ಥಿಗಳ ಹೆಸರು ಮತ್ತು ಅವರು ಆಯ್ಕೆಯಾಗಿರುವ ಮೀಸಲಾತಿ ಪ್ರವರ್ಗಗಳ ವಿವರಗಳನ್ನು ನೀಡುವುದು ?

## ಸಾರ್ವಜನಿಕ ಉದ್ದಿಮೆಗಳ ಕುರಿತು

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-**

೧೧೫೭(೧೨೦೬) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಾರವಾರ ಜಿಲ್ಲೆಯಲ್ಲಿ ಇರುವ ಸಾರ್ವಜನಿಕ ಉದ್ದಿಮೆಗಳೆಷ್ಟು ; ಅವು ಯಾವುವು ; ಅವುಗಳನ್ನು ನಿಯಂತ್ರಿಸುವ ಆಡಳಿತ ಇಲಾಖೆಗಳಾವುವು ; (ವಿವರವಾಗಿ ಆಡಳಿತ ಇಲಾಖಾವಾರು ಮಾಹಿತಿ ನೀಡುವುದು)

(ಆ) Corporate Social Responsible Fund ಅಂದರೇನು ; ಇದು ಯಾವ ಉದ್ಯಮಗಳಿಗೆ ಅನ್ವಯಿಸುತ್ತದೆ ; ಇದರ ಸಂಬಂಧ ಇರುವ ಮಾರ್ಗಸೂಚಿಗಳೇನು ; (ವಿವರವಾದ ಮಾಹಿತಿ ನೀಡುವುದು)

(ಇ) ಕಳೆದ ೩ ವರ್ಷಗಳಲ್ಲಿ ಕಾರವಾರ ಜಿಲ್ಲೆಯಲ್ಲಿ ಸ್ಥಾಪನೆಗೊಂಡ ಸಾರ್ವಜನಿಕ ಉದ್ದಿಮೆಗಳು ಯಾವುವು ; Corporate Social Responsible Fund ನಿಧಿಯಡಿ ಎಷ್ಟು ಹಣವನ್ನು ಕ್ರೋಢೀಕರಿಸಿವೆ ; (ವರ್ಷವಾರು, ಉದ್ದಿಮೆವಾರು ಮಾಹಿತಿ ನೀಡುವುದು)

(ಈ) ಕಳೆದ ೩ ವರ್ಷಗಳಲ್ಲಿ ಈ ಕ್ರೋಢೀಕರಿಸಲಾದ ಅನುದಾನದಲ್ಲಿ ಸದರಿ ಉದ್ದಿಮೆಗಳು ಯಾವ ಯಾವ ಕಾಮಗಾರಿಗಳಿಗೆ ಎಷ್ಟು ಹಣವನ್ನು, ಯಾವ ಏಜೆನ್ಸಿ ಮೂಲಕ ಬಿಡುಗಡೆ ಮಾಡಿದೆ ; (ವರ್ಷವಾರು, ಉದ್ದಿಮೆವಾರು, ಏಜೆನ್ಸಿವಾರು, ಕಾಮಗಾರಿ ವಿವರಗಳೊಂದಿಗೆ ಮಾಹಿತಿ ನೀಡುವುದು)

(ಉ) ಈ ಅನುದಾನವನ್ನು ಯಾವ ಕಾಮಗಾರಿಗಳಿಗೆ ವಿನಿಯೋಗಿಸಬಹುದು ಇದರ ಸಂಬಂಧ ಸರ್ಕಾರ ಹೊರಡಿಸಿರುವ ಮಾರ್ಗಸೂಚಿಗಳೇನು ?

## ಎಂ ಸ್ಯಾಂಡ್ ಘಟಕಗಳ ಬಗ್ಗೆ

**ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೫೮ (೧೨೦೫) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಾರವಾರ ಜಿಲ್ಲೆಯ ವಿವಿಧ ತಾಲ್ಲೂಕುಗಳಲ್ಲಿ ಇರುವ ಎಂ ಸ್ಯಾಂಡ್ ಘಟಕಗಳು ಎಷ್ಟು ; ಈ ಘಟಕಗಳಿಂದ ಸಾರ್ವಜನಿಕರಿಗೆ/ ಸರ್ಕಾರಿ ಘಟಕಗಳಿಗೆ ವರ್ಷದಲ್ಲಿ ಎಷ್ಟು ಟನ್ ಎಂ ಸ್ಯಾಂಡ್ ವಿತರಿಸಲಾಗುತ್ತಿದೆ ; (ತಾಲ್ಲೂಕುವಾರು, ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಈ ಘಟಕಗಳಲ್ಲಿ ಉತ್ಪಾದನೆಯಾಗುವ ಒಂದು ಟನ್ ಎಂ ಸ್ಯಾಂಡ್‌ಗೆ ಸರ್ಕಾರ ನಿಗದಿಪಡಿಸಿರುವ ದರವೇನು ;

(ಇ) ಕಳೆದ ೩ ವರ್ಷಗಳಲ್ಲಿ ಕಾರವಾರ ಜಿಲ್ಲೆಯಲ್ಲಿ ಎಷ್ಟು ಪ್ರಮಾಣದ ಎಂ ಸ್ಯಾಂಡ್ ಮಾರಾಟ ಮಾಡಲಾಗಿದೆ ; ಹಾಗೂ ಯಾರಿಗೆ ಮಾರಾಟ ಮಾಡಲಾಗಿದೆ ; ಅದರಿಂದ ಬಂದ ಮೊತ್ತವೆಷ್ಟು ? (ಸವಿಸ್ತಾರ ತಾಲ್ಲೂಕುವಾರು ವರದಿ ನೀಡುವುದು)

## ಕ್ರಷರ್ ಗಣಿಗಾರಿಕೆ ನಡೆಸಲು ಅನುಮತಿ ನೀಡುವ ಬಗ್ಗೆ

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೫೯ (೧೨೦೩) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ೩ ವರ್ಷಗಳಿಂದ ಕಾರವಾರ ಜಿಲ್ಲೆಯ ವಿವಿಧ ತಾಲ್ಲೂಕುಗಳಲ್ಲಿ ಈವರೆಗೂ ಎಷ್ಟು ಕ್ರಷರ್‌ಗಳಿಗೆ ಕಲ್ಲು ಗಣಿಗಾರಿಕೆ ನಡೆಸಲು ಸರ್ಕಾರ ಅನುಮತಿ ನೀಡಿದೆ ; ಆ ಪೈಕಿ ಎಷ್ಟು ಕ್ರಷರ್‌ಗಳನ್ನು (ಜಲ್ಲಿ) ಕಲ್ಲು ಗಣಿಗಾರಿಕೆ ಕಾರ್ಯನಿರ್ವಹಿಸುತ್ತಿವೆ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಆ) ಅವುಗಳ ಪೈಕಿ ಸ್ವಂತ ಜಮೀನಿನಲ್ಲಿ ಮತ್ತು ಸರ್ಕಾರಿ ಜಮೀನಿನಲ್ಲಿ ಗಣಿಗಾರಿಕೆ ನಡೆಸುತ್ತಿರುವ ಸಂಸ್ಥೆಗಳಾವುವು ; (ತಾಲ್ಲೂಕುವಾರು ಮಾಹಿತಿ ನೀಡುವುದು)

(ಇ) ಈ ಕಲ್ಲು ಗಣಿಗಾರಿಕೆಯಿಂದ ಸರ್ಕಾರಕ್ಕೆ ಪ್ರತಿ ವರ್ಷ ಸಂದಾಯವಾಗುತ್ತಿರುವ ರಾಜಧನವೆಷ್ಟು ? (ತಾಲ್ಲೂಕುವಾರು ಮಾಹಿತಿ ನೀಡುವುದು)

## ಘನತ್ಯಾಜ್ಯ ವಸ್ತುಗಳ ವಿಲೇವಾರಿ ಕುರಿತು

**ಶ್ರೀ ಘೋಟ್ನೇಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೬೦ (೧೨೦೪) ಮಾನ್ಯ ಪೌರಾಡಳಿತ ಹಾಗೂ ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಾರವಾರ ಜಿಲ್ಲೆಯ ವಿವಿಧ ತಾಲ್ಲೂಕುಗಳಲ್ಲಿ ಸ್ಥಳೀಯ ಸಂಸ್ಥೆಗಳಲ್ಲಿ ಸ್ವಚ್ಛತೆ ಮತ್ತು ಘನತ್ಯಾಜ್ಯ ವಸ್ತು ವಿಲೇವಾರಿಗಾಗಿ ಹೊರಗುತ್ತಿಗೆಯಿಂದ ನೇಮಕ ಮಾಡಲಾದ ನೌಕರರ ಸಂಖ್ಯೆ

ಎಷ್ಟು ; ಹೊರಗುತ್ತಿಗೆಯಿಂದ ತೆಗೆದುಕೊಳ್ಳಲಾಗಿರುವ ಹುದ್ದೆಗಳು ಯಾವುವು ; ಅವರಿಗೆ ವಹಿಸಿರುವ ಕೆಲಸದ ವಿವರಗಳೇನು ; (ಹುದ್ದೆವಾರು ಹೆಸರು ಹಾಗೂ ವೇತನ ನೀಡಿದ ವಿವರ ನೀಡುವುದು)

(ಆ) ಪೌರಾಡಳಿತ ಇಲಾಖೆಯಿಂದ ೨೦೧೭ನೇ ಡಿಸೆಂಬರ್ ಮಾಹೆಯಲ್ಲಿ ಜಾರಿಗೊಳಿಸಲಾದ ಆದೇಶದಂತೆ ಪ್ರತಿ ೭೦೦ ಜನಸಂಖ್ಯೆಗೆ ಒಬ್ಬರಂತೆ ಪೌರ ಕಾರ್ಮಿಕರನ್ನು ನೇಮಕ ಮಾಡಿಕೊಳ್ಳಲು ಮಾತ್ರ ಅವಕಾಶ ಎಂದು ತಿಳಿಸಿರುವ ಹಿನ್ನೆಲೆಯಲ್ಲಿ ಈ ನಿಯಮ ಅನ್ವಯವಾಗುವುದೇ ? (ವಿವರ ನೀಡುವುದು)

## ಅಕ್ರಮ ಮರಳು ಸಾಕಾಣಿಕೆ ಕುರಿತು

**ಶ್ರೀ ಘೋಟ್ನೆಕರ ಶ್ರೀಕಾಂತ ಲಕ್ಷ್ಮಣ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೬೧ (೧೨೦೭) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಾರವಾರ ಜಿಲ್ಲೆಯಲ್ಲಿ ಗುರುತಿಸಲಾಗಿರುವ ಮರಳು ನಿಕ್ಷೇಪಗಳು ಎಷ್ಟು ; ಇವುಗಳಲ್ಲಿ ಎಷ್ಟು ಮರಳು ನಿಕ್ಷೇಪಗಳನ್ನು ಹರಾಜು ಮುಖಾಂತರ ವಿಲೇವಾರಿ ಮಾಡಲಾಗಿದೆ ; ಹರಾಜಿನಲ್ಲಿ ಇವುಗಳನ್ನು ಪಡೆದ ಗುತ್ತಿಗೆದಾರರು ಯಾರು ; (ಕಳೆದ ೩ ವರ್ಷಗಳ ನಿಕ್ಷೇಪವಾರು ಮಾಹಿತಿ ನೀಡುವುದು)

(ಆ) ಕಾರವಾರ ಜಿಲ್ಲೆಯಲ್ಲಿ ನಡೆಯುತ್ತಿರುವ ಅಕ್ರಮ ಮರಳು ದಾಸ್ತಾನು ಪ್ರಕರಣಗಳು ಬೆಳಕಿಗೆ ಬಂದಿವೆಯೇ ; ಬಂದಿದ್ದಲ್ಲಿ, ಎಷ್ಟು ಪ್ರಮಾಣದ ಮರಳನ್ನು ಅಕ್ರಮವಾಗಿ ಸಂಗ್ರಹಿಸಲಾಗಿತ್ತು ; ಸಂಗ್ರಹಿಸಿದವರು ಯಾರು ; ಇದಕ್ಕೆ ವಿಧಿಸಿರುವ ದಂಡವೆಷ್ಟು ; (ಕಳೆದ ೩ ವರ್ಷಗಳ ಪ್ರಕರಣಗಳವಾರು ಮಾಹಿತಿ ನೀಡುವುದು)

(ಇ) ಕಾರವಾರ ಜಿಲ್ಲೆಯಲ್ಲಿ ಅಕ್ರಮ ಮರಳು ದಾಸ್ತಾನುದಾರರ ವಿರುದ್ದ ಮತ್ತು ಅಕ್ರಮ ಮರಳು ದಾಸ್ತಾನು ಮಾಡದಂತೆ ತಡೆಯಲು ವಿಫಲವಾಗಿರುವ ಅಧಿಕಾರಿಗಳ ವಿರುದ್ಧ ಸರ್ಕಾರವು ಕೈಗೊಂಡಿರುವ ಕ್ರಮಗಳೇನು ; (ಪ್ರಕರಣವಾರು ಮಾಹಿತಿ ನೀಡುವುದು) ಅಕ್ರಮ ಮರಳು ದಾಸ್ತಾನು ಮಾಡುವುದನ್ನು ತಡೆಗಟ್ಟಲು ಸರ್ಕಾರವು ವಹಿಸಿರುವ ಮುಂಜಾಗ್ರತಾ ಕ್ರಮಗಳೇನು ? (ವಿವರ ನೀಡುವುದು)

## ಕಲಬುರಗಿಯ ತೊಗರಿ ಟೆಕ್ನಾಲಜಿ ಪಾರ್ಕ್‌ನ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೬೨ (೧೧೯೩) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿಯಲ್ಲಿ ತೊಗರಿ ಟೆಕ್ನಾಲಜಿ ಪಾರ್ಕ್ ಎಷ್ಟು ಎಕರೆ ಪ್ರದೇಶದಲ್ಲಿ ಸ್ಥಾಪಿಸಲಾಗಿದೆ ; (ಸಂಕ್ಷಿಪ್ತ ವಿವರ ನೀಡುವುದು)

(ಆ) ಸದರಿ ಯೋಜನೆಗೆ ಅವಶ್ಯಕತೆ ಇದ್ದ ಭೂಮಿಯನ್ನು ಕೆ.ಐ.ಎ.ಡಿ.ಬಿ ಮೂಲಕ ಎಷ್ಟು ಜಮೀನನ್ನು ಇಲ್ಲಿಯವರೆವಿಗೂ ವಶಪಡಿಸಿಕೊಳ್ಳಲಾಗಿದೆ ; (ವಿವರ ನೀಡುವುದು)

(ಇ) ಸದರಿ ಯೋಜನೆಯ ಸಂಪೂರ್ಣ ಮಾಹಿತಿ ಹಾಗೂ ತಗುಲಿದ ವೆಚ್ಚ ಎಷ್ಟು ? (ಸಂಪೂರ್ಣ ಮಾಹಿತಿ ನೀಡುವುದು)

## ಕಲಬರುಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿರುವ ಪುರಸಭೆ, ನಗರಸಭೆ, ಪಟ್ಟಣ ಪಂಚಾಯಿತಿಯಲ್ಲಿರುವ ಖಾಲಿ ಹುದ್ದೆಗಳ ಬಗ್ಗೆ

**ಶ್ರೀ ಬಿ.ಜಿ. ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :–**

೧೧೬೩ (೧೧೯೪) ಮಾನ್ಯ ಪೌರಾಡಳಿತ ಹಾಗೂ ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿರುವ ಪುರಸಭೆ, ನಗರಸಭೆ, ಪಟ್ಟಣ ಪಂಚಾಯಿತಿಗಳಲ್ಲಿ ಮಂಜೂರಾದ ಒಟ್ಟು ಹುದ್ದೆಗಳು ಹಾಗೂ ಖಾಲಿ ಇರುವ ಹುದ್ದೆಗಳು ಎಷ್ಟು ; ಪ್ರಭಾರದಲ್ಲಿರುವ ಹುದ್ದೆಗಳು ಎಷ್ಟು ; (ಸಂಪೂರ್ಣ ವಿವರ ನೀಡುವುದು)

(ಆ) ಈ ಮೇಲ್ಕಂಡ ಜಿಲ್ಲೆಗಳ ಸಂಸ್ಥೆಗಳಲ್ಲಿ ಸಿಬ್ಬಂದಿ ಕೊರತೆಯಿಂದಾಗಿ ಸಾರ್ವಜನಿಕರಿಗೆ ತೊಂದರೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಸರ್ಕಾರ ತೆಗೆದುಕೊಂಡ ಕ್ರಮಗಳೇನು? (ವಿವರ ನೀಡುವುದು)

## ಕಲ್ಲು ಗಣಿಗಾರಿಕೆ ಅನುಮತಿ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೧೬೪ (೧೧೮೮) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಲ್ಲು ಗಣಿಗಾರಿಕೆಗೆ ಅನುಮತಿ ಪಡೆಯಲು ಇರಬೇಕಾದ ಕನಿಷ್ಠ ಮೂಲಭೂತ ಸೌಲಭ್ಯಗಳು ಯಾವುವು ;

(ಆ) ಕಳೆದ ಎರಡು ವರ್ಷಗಳಲ್ಲಿ ಎಷ್ಟು ಹೊಸ ಕಲ್ಲು ಗಣಿಗಾರಿಕೆ ಅನುಮತಿ ನೀಡಲಾಗಿದೆ ;

(ಇ) ಕಲ್ಲು ಗಣಿಗಾರಿಕೆಯಿಂದ ಉಂಟಾಗುವ ಪರಿಸರ ಮಾಲಿನ್ಯಕ್ಕೆ ಯಾರು ಹೊಣೆ ; ಪರಿಸರ ಮಾಲಿನ್ಯ ತಡೆಯಲು ಸರ್ಕಾರ ಕೈಗೊಂಡ ಕಾರ್ಯಕ್ರಮಗಳೇನು ?

## ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳ ಹೂಡಿಕೆ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು):-**

೧೧೬೫ (೧೧೮೯) ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕಳೆದ ಮೂರು ವರ್ಷಗಳಲ್ಲಿ ರಾಜ್ಯದ ಬೃಹತ್ ಮತ್ತು ಮಧ್ಯಮ ಕೈಗಾರಿಕೆಗಳಲ್ಲಿ ಎಷ್ಟು ಮೊತ್ತದ FDI ಹೂಡಿಕೆಯಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) FDI ರಾಜ್ಯದ ಯಾವ ಯಾವ ಕೈಗಾರಿಕೆಗಳಲ್ಲಿ ಹೂಡಿಕೆಯಾಗಿದೆ; ಇದರಿಂದ ಎಷ್ಟು ಉದ್ಯೋಗ ಸೃಷ್ಟಿಯಾಗಿದೆ ;

(ಇ) ೨೦೨೧-೨೨ರಲ್ಲಿ ಹೊಸ FDI ನೀತಿಯನ್ನು ಸರ್ಕಾರ ಅಳವಡಿಸಿಕೊಳ್ಳಲಿದೆಯೇ ; ಈ ಮೂಲಕ ಯಾವ ಯಾವ ಉದ್ಯಮಗಳಿಗೆ ವಿಶೇಷ ಪ್ರೋತ್ಸಾಹ ನೀಡಲಾಗುವುದು ?

## ಬಸ್ಸು ನಿಲ್ದಾಣಗಳಲ್ಲಿ ಮಾರಾಟವಾಗುವ ಆಹಾರ ವಸ್ತುಗಳ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :-**

೧೧೬೬ (೧೯೯೦) ಮಾನ್ಯ ಆಹಾರ ಮತ್ತು ನಾಗರೀಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಬಸ್ಸು ನಿಲ್ದಾಣಗಳಲ್ಲಿ ಕುಡಿಯುವ ನೀರು, ಇತರೆ ಪಾನೀಯ ಹಾಗೂ ಆಹಾರ ವಸ್ತುಗಳನ್ನು ಎಂ.ಆರ್.ಪಿ ದರಕ್ಕಿಂತ ಹೆಚ್ಚಿನ ದರಕ್ಕೆ ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಬೆಂಗಳೂರಿನ ಮೆಜೆಸ್ಟಿಕ್ ಬಸ್ಸು ನಿಲ್ದಾಣದಲ್ಲಿರುವ ಎಲ್ಲಾ ಚಿಲ್ಲರೆ ಮಾರಾಟಗಾರರು ಆಹಾರ ಪದಾರ್ಥಗಳನ್ನು ಅದರ ಮೂಲ ದರಕ್ಕಿಂತ ಹೆಚ್ಚಿನ ಬೆಲೆಗೆ ಮಾರಾಟ ಮಾಡುತ್ತಿದ್ದು ಈ ವರ್ತಕರ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ;

(ಇ) ಕಳೆದ ಮೂರು ವರ್ಷಗಳಲ್ಲಿ ಎಂ.ಆರ್.ಪಿ ದರಕ್ಕಿಂತ ಹೆಚ್ಚಿನ ದರಕ್ಕೆ ಮಾರಾಟ ಮಾಡುತ್ತಿರುವ ಎಷ್ಟು ವರ್ತಕರ ಮೇಲೆ ಪ್ರಕರಣ ದಾಖಲು ಮಾಡಲಾಗಿದೆ ಹಾಗೂ ಎಷ್ಟು ಅಂಗಡಿಗಳ ಅನುಮತಿಯನ್ನು ರದ್ದುಪಡಿಸಲಾಗಿದೆ ?

## ಗೃಹ ಭಾಗ್ಯ ಯೋಜನೆಯ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೬೭ (೧೯೯೧) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಮೂರು ವರ್ಷಗಳಲ್ಲಿ ಪೌರ ಕಾರ್ಮಿಕರ ಗೃಹ ಭಾಗ್ಯ ಯೋಜನೆಯ ಅನ್ವಯ ನಗರಾಭಿವೃದ್ಧಿ ಇಲಾಖೆಯಿಂದ ಎಷ್ಟು ಮನೆಗಳನ್ನು ನಿರ್ಮಿಸಲಾಗಿದೆ ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ೨೦೧೪–೧೮ರ ಅವಧಿಯಲ್ಲಿ ನಗರ ಸ್ಥಳೀಯ ಸಂಸ್ಥೆಗಳಿಗೆ ಗೃಹ ಭಾಗ್ಯ ಯೋಜನೆಯ ಜಾರಿಗೆ ಬಿಡುಗಡೆ ಮಾಡಿದ ಮೊತ್ತದಲ್ಲಿ ರೂ. ೫೦.೪೭ ಕೋಟಿಗೂ ಹೆಚ್ಚು ಹಣವನ್ನು ವಿವಿಧ ಬ್ಯಾಂಕ್‌ಗಳಲ್ಲಿ ಡಿಪಾಸಿಟ್ ಮಾಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಇ) ಸರ್ಕಾರದಿಂದ ಬಿಡುಗಡೆ ಮಾಡಿದ ಮೊತ್ತವನ್ನು ಸಮರ್ಪಕವಾಗಿ ನಿಗದಿಪಡಿಸಿದ ಯೋಜನೆಗೆ ಬಳಸದೆ ದುರುಪಯೋಗ ಪಡಿಸಿದ ಅಧಿಕಾರಿ ಮೇಲೆ ಯಾವ ಕ್ರಮ ಕೈಗೊಳ್ಳಲಾಗಿದೆ ; ಡಿಪಾಸಿಟ್ ಮಾಡಿರುವ ಮೊತ್ತಕ್ಕೆ ಬಂದ ಬಡ್ಡಿ ಎಷ್ಟು ; ಅದನ್ನು ಯಾವ ರೀತಿಯಾಗಿ ಬಳಸಿಕೊಳ್ಳಲಾಗಿದೆ ?

## ಮೀನುಗಾರರು ಪಡೆದಿರುವ ಸಾಲದ ಕುರಿತು

**ಶ್ರೀ ಎನ್. ರವಿಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) :–**

೧೧೬೮ (೧೯೯೨) ಮಾನ್ಯ ಸಹಕಾರ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಕಳೆದ ಎರಡು ವರ್ಷಗಳಲ್ಲಿ ಸಹಕಾರ ಸಂಘಗಳಿಂದ ಮೀನುಗಾರರು ಪಡೆದಿರುವ ಸಾಲ ಎಷ್ಟು ; (ಜಿಲ್ಲಾವಾರು ಮಾಹಿತಿ ನೀಡುವುದು)

(ಆ) ಸಹಕಾರ ಸಂಘಗಳಿಂದ ಮೀನುಗಾರರು ಪಡೆದಿರುವ ಸಾಲ ಮನ್ನಾ ಕುರಿತು ಸರ್ಕಾರದ ನಿಲುವೇನು ;

(ಇ) ಸಹಕಾರ ಇಲಾಖೆಯ ಮೂಲಕ ಮೀನುಗಾರರಿಗೆ ಯಾವ ಯಾವ ಸೌಲಭ್ಯಗಳನ್ನು ನೀಡಲಾಗುತ್ತಿದೆ ?

## ಚಾಮರಾಜ ಜೋಡಿ ರಸ್ತೆಯ ದೊಡ್ಡ ಮೋರಿಯಲ್ಲಿ ಕಸಕಡ್ಡಿ ತ್ಯಾಜ್ಯ ತುಂಬಿರುವ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೧೭೯ (೧೪೦೨) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೈಸೂರಿನ ಪ್ರಸಿದ್ಧ ಚಾಮರಾಜ ಜೋಡಿ ರಸ್ತೆಯ ಇಕ್ಕೆಲಗಳಲ್ಲಿ ಹರಿಯುವ ತೆರೆದ ದೊಡ್ಡ ಚರಂಡಿಯಲ್ಲಿ ಕಸಕಡ್ಡಿ ತ್ಯಾಜ್ಯ ತುಂಬಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಇದರಿಂದ ಕೊಳಚೆ ನೀರು ಸರಾಗವಾಗಿ ಹರಿಯದೆ ಕಲುಷಿತ ವಾತಾವರಣ ಉಂಟಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ;

(ಆ) ಈ ಮೋರಿಯನ್ನು ಸ್ವಚ್ಛಗೊಳಿಸಿ ತೆರೆದ ಮೋರಿಯ ಮೇಲೆ ತಂತಿ ಜಾಲರಿ ಅಳವಡಿಸಿ, ಯಾರು ಕಸಕಡ್ಡಿ ತ್ಯಾಜ್ಯವನ್ನು ಚರಂಡಿಗೆ ಸುರಿಯದಂತೆ ಕ್ರಮ ಜರುಗಿಸಲಾಗುವುದೇ ?

## ಮೈಸೂರು ಪುರಭವನದಲ್ಲಿ ವಾಹನ ನಿಲ್ದಾಣ ನಿರ್ಮಾಣದ ಬಗ್ಗೆ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೧೮೦ (೧೪೦೧) ಮಾನ್ಯ ನಗರಾಭಿವೃದ್ಧಿ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ಮೈಸೂರು ರಂಗಾಚಾರುಲು ಪುರಭವನದ ಆವರಣದಲ್ಲಿ ನೆಲಮಹಡಿ ವಾಹನ ನಿಲುಗಡೆ ನಿರ್ಮಾಣ ಕಾಮಗಾರಿ ಕಳೆದ

ಹತ್ತು ವರ್ಷಗಳಿಂದ ನೆನೆಗುದಿಗೆ ಬೀಳಲು ಕಾರಣಗಳೇನು ; ಈ ಯೋಜನೆಯ ರೂಪುರೇಷೆಗಳೇನು ; ನಿರ್ಮಾಣ ಕಾಮಗಾರಿಯ ಅಂದಾಜು ವೆಚ್ಚ ಎಷ್ಟು ;

(ಆ) ಈ ಕಾಮಗಾರಿಯನ್ನು ಪುನರ್ ಪರಿಶೀಲಿಸಿ, ಹೊಸದಾಗಿ ಅಂದಾಜು ಸಿದ್ಧಪಡಿಸಿ, ಪುನಃ ಟೆಂಡರ್ ಕರೆಯಲು ಕ್ರಮ ತೆಗೆದುಕೊಳ್ಳಲಾಗಿದೆಯೇ; ಈ ಕಾಮಗಾರಿಯನ್ನು ಪೂರ್ಣಗೊಳಿಸಲಾಗುವುದು ಯಾವಾಗ ;

(ಇ) ಪುರಭವನದ ಹೊರ ಆವರಣವನ್ನು ಸುಂದರವಾಗಿ ಅಭಿವೃದ್ಧಿಪಡಿಸಲು ಕ್ರಮ ಜರುಗಿಸಲಾಗುವುದೇ ?

## ನಂಜನಗೂಡು ನಗರದಲ್ಲಿ ಸುಭಾಷ್ ಚಂದ್ರ ಬೋಸ್ ಉದ್ಯಾನವನ ಅಭಿವೃದ್ಧಿ

**ಶ್ರೀ ಎಸ್. ನಾಗರಾಜ್ (ಸಂದೇಶ್ ನಾಗರಾಜ್) (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):–**

೧೧೭೧ (೧೨೨೦) ಮಾನ್ಯ ಪೌರಾಳಿತ ಹಾಗೂ ಸಕ್ಕರೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:–

(ಅ) ನಂಜನಗೂಡು ನಗರದಲ್ಲಿ ಹುಲ್ಲಹಳ್ಳಿ ನಾಲೆಗೆ ಹೊಂದಿಕೊಂಡಿರುವ ಸುಭಾಷ್ ಚಂದ್ರ ಬೋಸ್ ಉದ್ಯಾನವನ ಹಾಳು ಬಿದ್ದಿದ್ದು, ಇದನ್ನು ಅಭಿವೃದ್ಧಿಪಡಿಸಲು ಕ್ರಮ ತೆಗೆದುಕೊಳ್ಳಲಾಗುವುದೇ ;

(ಆ) ಸಾರ್ವಜನಿಕರಿಗೆ ಹಾಗೂ ಹಿರಿಯ ನಾಗರೀಕರಿಗೆ ಬಹಳ ಉಪಯುಕ್ತವಾಗಿದ್ದ ಈ ಉದ್ಯಾನವನ ಅಭಿವೃದ್ಧಿಪಡಿಸಿ, ಯಾವ ಕಾಲಮಿತಿಯೊಳಗೆ ಅನುಕೂಲ ಮಾಡಿಕೊಡಲಾಗುವುದು ?

**ಎಸ್. ನಿರ್ಮಲ**
ಜಂಟಿ ಕಾರ್ಯದರ್ಶಿ
ಕರ್ನಾಟಕ ವಿಧಾನ ಪರಿಷತ್ತು

ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು–59/ಕಾ.ಸೂ. 097/500 ಪ್ರತಿಗಳು/08–03–2021